
22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 79 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 19, 2024, ಗುರುವಾರ



## ನಿತ್ಯ ಪಂಚಾಂಗ 19, 2024, ಗುರುವಾರ



ಶ್ರೀ ಶುಭಕೃತ್ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು

ಆಶ್ವಯುಜ ಬಹುಳ, ಚೌತಿ, ಕೃತ್ತಿಕಾ ನಕ್ಷತ್ರ ಸಂಕಷ್ಟ ಚತುರ್ಥಿ (ಚಂ.ಉ.ರೆಆ.8.40) ಕರವಾ ಚೌತ್, ವಿಶ್ವ ದೃಷ್ಟಿ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

## ಚಲನಚಿತ್ರ ನಿರ್ಮಾಪಕ, ನಿರ್ದೇಶಕ ಕೋಡಳ್ಳಿ ಶಿವರಾಮ್ ನಿಧನ



**ಬೆಂಗಳೂರು, ಸೆ.18–** ರಾಜ್ಯ, ರಾಷ್ಟ್ರ ಪ್ರಶಸ್ತಿ ವಿಜೇತ ಚಲನಚಿತ್ರ ನಿರ್ಮಾಪಕ, ನಿರ್ದೇಶಕ ಕೋಡಳ್ಳಿ ಶಿವರಾಮ್ ಕೊನೆಯುಸಿರೆಳೆದಿದ್ದಾರೆ. ಕೋಡಳ್ಳಿ ಶಿವರಾಮ್ ಅವರು ಸೆಪ್ಟೆಂಬರ್ 17ರ ರಾತ್ರಿ ನಿಧನ ಹೊಂದಿದ್ದಾರೆ. ಕಳೆದ ರಾತ್ರಿ ನಿಧನರಾದ ಸ್ಯಾಂಡಲ್‌ವುಡ್ ನಿರ್ದೇಶಕ, ನಿರ್ಮಾಪಕ ಕೋಡಳ್ಳಿ ಶಿವರಾಮ್ ಅವರ ಅಂತ್ಯಕ್ರಿಯೆಯನ್ನು ಕುಟುಂಬಸ್ಥರು ನೆರವೇರಿಸಿದ್ದಾರೆ. 1978ರಲ್ಲಿ 'ಗ್ರಹಣ' ಹೆಸರಿನ ಸಿನಿಮಾ ಕಥೆ ಬರೆದಿದ್ದು, ಟಿಎಸ್ ನಾಗಾಭರಣ ಅವರು ನಿರ್ದೇಶನ ಮಾಡಿದ್ದರು. ಈ ಸಿನಿಮಾಗೆ ರಾಷ್ಟ್ರ ಹಾಗೂ ರಾಜ್ಯ ಪ್ರಶಸ್ತಿ ಸಿಕ್ಕಿತ್ತು. ಕೋಡಳ್ಳಿ ಶಿವರಾಮ್ ಅವರು ಕನ್ನಡ ಚಿತ್ರರಂಗದಲ್ಲಿ ತಮ್ಮದೇ ಆದಂತ ಚಿತ್ರಗಳನ್ನು ನಿರ್ಮಿಸಿ, ನಿರ್ದೇಶಿಸಿ ಗಮನ ಸೆಳೆದಿದ್ದಾರೆ.

## ರಾಹುಲ್ ಗಾಂಧಿ ತೇಜೋವಧೆಗೆ ಸುಳ್ಳಿನ ಸರಮಾಲೆ ಸೃಷ್ಟಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡನೆ



**ಬೆಂಗಳೂರು ಸೆ.18–** ರಾಹುಲ್ ಗಾಂಧಿ ಅವರಿಗೆ ಕೊಲೆ ಬೆದರಿಕೆ, ತೇಜೋವಧೆಗೆ ಸುಳ್ಳಿನ ಸರಮಾಲೆ ಸೃಷ್ಟಿ ಮಾಡಲಾಗುತ್ತಿದೆ ಇದು ಖಂಡನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಗೃಹ ಕಚೇರಿ ಕೃಷ್ಣಾದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಹುಲ್ ಗಾಂಧಿಯವರನ್ನು ಮುಗಿಸಲು ಬಿಜೆಪಿ ಸಂಚು ನಡೆಸುತ್ತಿದೆ ಎಂದು ಗಂಭೀರ ಆರೋಪ ಮಾಡಿದರು. ತ್ಯಾಗ–ಬಲಿದಾನದ ಸಂಸ್ಕೃತಿ ಮತ್ತು ಹುತಾತ್ಮರ ಕುಟುಂಬದಿಂದ ಬಂದ ರಾಹುಲ್ ಗಾಂಧಿ ಅವರು ಇದಕ್ಕೆಲ್ಲಾ ಹೆದರುವವರಲ್ಲ ಎಂದು ಹೇಳಿದರು. ಇಂಧಿರಾಗಾಂಧಿ, ರಾಜೀವ್ ಗಾಂಧಿ ದೇಶಕ್ಕಾಗಿ ಹುತಸತ್ಮರಾಗಿದ್ದಾರೆ. ಇಂಥಾ ಉನ್ನತ ತ್ಯಾಗ–ಬಲಿದಾನದ ಕುಟುಂಬದಿಂದ ಬಂದು ರಾಹುಲ್ ಗಾಂಧಿ ಅವರು ದೇಶಕ್ಕಾಗಿ ಅವಿರತ ಹೋರಾಟ ನಡೆಸುತ್ತಿದ್ದಾರೆ ಅಜ್ಜಿ ಇಂದಿರಾಗಾಂಧಿ ಅವರಿಗೆ ಆದ ಗತಿಯೇ ನಿಮಗೂ ಆಗುತ್ತದೆ ಎಂದು ರಾಹುಲ್‌ಗೆ ಬಿಜೆಪಿ ಬೆದರಿಕೆ ಹಾಕಿದೆ ಇದು ಖಂಡನೀಯ ಎಂದರು. ರೈಲ್ವೆ ಖಾತೆ ರಾಜ್ಯ ಸಚಿವ ರಾಹುಲ್ ಗಾಂಧಿ ಅವರನ್ನು ಭಯೋತ್ಪಾದಕ ಎಂದು ಕರೆದಿದ್ದಾರೆ ಈ ರೀತಿ ಜೀವ ಬೆದರಿಕೆಗಳ ಮೂಲಕ ಬಿಜೆಪಿಯ ರ್ಯಕರ್ತರನ್ನು ಎತ್ತಿಕಟ್ಟುವ ಷಡ್ಯಂತ್ರ ನಡೆಯುತ್ತಿದೆ ಎಂದು ದೂರಿದರು.

ರಾಹುಲ್ ಗಾಂಧಿ ನಾಲಗೆ ಕತ್ತರಿಸಿದವರಿಗೆ 11 ಲಕ್ಷ ಬಹುಮಾನ ಕೊಡುವುದಾಗಿ ಶಿವಸೇನೆಯ ಶಿಂಧೆ ಬಣದ ಶಾಸಕ ಸಂಜಯ್ ಗಾಯಕ್ ವಾಡ್ ಅವರು ರಾಹುಲ್ ಗಾಂಧಿ ನಾಲಗೆ ಕತ್ತರಿಸಲು ಕರೆ ನೀಡಿದ್ದಾರೆ. ಹಾಗಾಗಿ ಕೊಲೆ ಬೆದರಿಕೆ ಪ್ರಕರಣ ದಾಖಲಿಸಿ ಸಂಜಯ್ ನನ್ನು ಬಂಧಿಸಬೇಕು ಎಂದು ಮಹಾರಾಷ್ಟ್ರ ಸರ್ಕಾರಕ್ಕೆ ಸಿಎಂ ಸಿದ್ದರಾಮಯ್ಯ ಮನವಿ ಮಾಡಿದರು. ಉತ್ತರ ಪ್ರದೇಶದ ಸಚಿವರೊಬ್ಬರು ರಾಹುಲ್ ಗಾಂಧಿ ಈ ದೇಶದ ನಂಬರ್ ಒನ್ ಭಯೋತ್ಪಾದಕ ಎಂದು ಹೇಳಿಕೆ ನೀಡಿದ್ದಾರೆ. ಆದರೆ ಇವತ್ತಿನವರೆಗೂ ಬಿಜೆಪಿ ಪಕ್ಷವಾಗಲಿ, ಬಿಜೆಪಿ ಸರ್ಕಾರವಾಗಲಿ, ಕೇಂದ್ರ ಸರ್ಕಾರವಾಗಲಿ ಕಠಿಣ ಕ್ರಮ ತೆಗೆದುಕೊಂಡಿಲ್ಲ. ಕಾಟಾಚಾರಕ್ಕೆ ಕೇಸು ದಾಖಲಿಸಿ ಕೈ ಚೆಲ್ಲಿದ್ದಾರೆ ಎಂದರು. ಬಿಜೆಪಿ ವಿರುದ್ಧ ಪ್ರತಿಭಟನೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರನ್ನು ಹೂತು ಹಾಕುವುದಾಗಿ ಸಂಜಯ್ ಗಾಯಕ್ ವಾಡ್ ಮತ್ತೆ ಬೆದರಿಕೆ ಹಾಕಿದ್ದಾನೆ. ರಾಹುಲ್ ಗಾಂಧಿ ಯವರನ್ನು ಮುಗಿಸಲು ಬಿಜೆಪಿ ಸಂಚು ನಡೆಸುತ್ತಿದೆ ಎಂದು ಆರೋಪಿಸಿದರು.

ರಾಜಕೀಯವಾಗಿಯೂ ಮುಗಿಸುವ ಜೊತೆಗೆ ಪ್ರಾಣ ಭಯ ಹುಟ್ಟಿಸುವ ಬಿಜೆಪಿ ಷಡ್ಯಂತ್ರ ಆತಂಕಕಾರಿಯಾದದ್ದು. ರಾಹುಲ್ ಗಾಂಧಿ ಅವರಿಗೆ ಜೀವ ಬೆದರಿಕೆ ಹಾಕಿರುವ ಎಲ್ಲರ ವಿರುದ್ಧ ಕ್ರಿಮಿನಲ್ ಕೇಸು ಹಾಕಿ ತಕ್ಷಣ ಬಂಧಿಸಬೇಕು ಎಂದು ಒತ್ತಾಯಿಸಿದರು. ತ್ಯಾಗ ಬಲಿದಾನದ ಸಂಸ್ಕೃತಿ ಮತ್ತು ಹುತಾತ್ಮರ ಕುಟುಂಬದಿಂದ ಬಂದ ರಾಹುಲ್ ಗಾಂಧಿ ಅವರು ಇದಕ್ಕೆಲ್ಲಾ ಹೆದರುವವರಲ್ಲ ಎಂದರು

ಅಸಹ್ಯವಾಗಿ ನಾಲಗೆ ಗರಿಬಿಟ್ಟು ಮಹಿಳಾ ಸಮುದಾಯವನ್ನು, ದಲಿತ ಜನಾಂಗವನ್ನು, ಒಕ್ಕಲಿಗ ಸಮುದಾಯವನ್ನು ಅತ್ಯಂತ ಕೆಟ್ಟದಾಗಿ ಅವಹೇಳನ ಮಾಡಿರುವ ಬಿಜೆಪಿ ಶಾಸಕ ಮುನಿರತ್ನಂ ವಿರುದ್ಧ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಬೇಕು ಎನ್ನುವ ಬೇಡಿಕೆ ಇದೆ . ಸದ್ಯ ಮುನಿರತ್ನಂ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದರು. ಪೊಲೀಸರು ತನಿಖೆ ನಡೆಸಿದ್ದಾರೆ. ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ. ನ್ಯಾಯಾಲಯ ಮುನಿರತ್ನಂ ಅವರನ್ನು ಜೈಲಿಗೆ ಒಪ್ಪಿಸಿದೆ ಎಂದರು.

**ನರೇಂದ್ರ ಮೋದಿ ಸರ್ಕಾರ 5 ವರ್ಷ ಪೂರೈಸುವುದಿಲ್ಲ:**

ನರೇಂದ್ರ ಮೋದಿ ಈ ಬಾರಿ ಐದು ವರ್ಷ ಪೂರೈಸಲ್ಲ ಎಂದು ಸಿ.ಎಂ.ಸಿದ್ದರಾಮಯ್ಯ ಅವರು ಇದೇ ಸಂದರ್ಭದಲ್ಲಿ ಹೇಳಿದರು. ದೇಶದಲ್ಲಿ ಆಗುತ್ತಿರುವ ರಾಜಕಾರಣದ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಮೋದಿ ಅವರು ಈ ಬಾರಿ ಪೂರ್ಣಾವಧಿ ಮುಗಿಸೋದು ಸಂಶಯ. ನಿತೀಶ್ ಕುಮಾರ್, ಚಂದ್ರಬಾಬು ನಾಯ್ಡು ಅವರು ಹೆಚ್ಚು ದಿನ ಕೇಂದ್ರ ಸರ್ಕಾರದ ಜೊತೆ ಇರುವುದಿಲ್ಲ ಎನ್ನಿಸುತ್ತಿದೆ ಎಂದರು.

## ಭಾರತೀಯ ಚುನಾವಣಾ ವ್ಯವಸ್ಥೆ ಸುಧಾರಣೆಗೆ ಪ್ರಧಾನಿ ಐತಿಹಾಸಿಕ ಹೆಜ್ಜೆ: ಎಚ್.ಡಿ.ಕುಮಾರ ಸ್ವಾಮಿ



**ನವದೆಹಲಿ, ಸೆ.18–** ಒಂದು ರಾಷ್ಟ್ರ, ಒಂದು ಚುನಾವಣೆ ಭಾರತೀಯ ಚುನಾವಣಾ ವ್ಯವಸ್ಥೆ ಸುಧಾರಣೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಇರಿಸಿರುವ ಐತಿಹಾಸಿಕ ಹೆಜ್ಜೆ ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರ ಸ್ವಾಮಿ ಅವರು ಬಣ್ಣಿಸಿದ್ದಾರೆ.

ಒಂದು ರಾಷ್ಟ್ರ, ಒಂದು ಚುನಾವಣೆ ಭಾರತೀಯ ಚುನಾವಣಾ ವ್ಯವಸ್ಥೆಯನ್ನು ಜಾತ್ಯತೀತ ಜನತಾದಳ ಪಕ್ಷ ಸ್ವಾಗತಿಸುತ್ತದೆ ಎಂದು ಸಚಿವರು ಇದೇ ವೇಳೆ ತಿಳಿಸಿದರು.

ಒಂದು ರಾಷ್ಟ್ರ, ಒಂದು ಚುನಾವಣೆಗೆ ಜೆಡಿಎಸ್ ಸ್ವಾಗತ.
ಇದು ಪ್ರಧಾನಿಗಳ ಐತಿಹಾಸಿಕ ನಿರ್ಧಾರ ಎಂದ ಕುಮಾರಸ್ವಾಮಿ

ನವದೆಹಲಿಯ ಭಾರತ್ ಮಂಟಪದಲ್ಲಿ ಭಾರಿ ಕೈಗಾರಿಕೆ ಸಚಿವಾಲಯ ಹಮ್ಮಿಕೊಂಡಿದ್ದ ವಿದ್ಯುತ್‌ವಾಹನಗಳ ಕುರಿತ ಸಭೆಯಲ್ಲಿ ಪಾಲ್ಗೊಂಡ ನಂತರ ಸಚಿವರು ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದರು. ಲೋಕಸಭೆ ಮತ್ತು ವಿಧಾನಸಭೆಗಳಿಗೆ ಏಕಕಾಲಕ್ಕೆ ಚುನಾವಣೆ ನಡೆಸುವ ಬಗ್ಗೆ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿತ್ತು. ಸಮಿತಿ ವರದಿ ನೀಡಿದೆ. ಈ ವರದಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಕುಮಾರಸ್ವಾಮಿ ಅವರು ಹೇಳಿದರು.

ನರೇಂದ್ರ ಮೋದಿ ಅವರ ಸರ್ಕಾರ ಮೂರನೇ ಅವಧಿಗೆ ಅಧಿಕಾರಕ್ಕೆ ಬಂದ ನೂರು ದಿನಗಳಲ್ಲಿ ಚುನಾವಣೆ ಸಂದರ್ಭದಲ್ಲಿ ಭರವಸೆ ನೀಡಿದಂತೆಯೇ ಸಂಪುಟವು ಈ ಐತಿಹಾಸಿಕ ನಿರ್ಧಾರ ಕೈಗೊಂಡಿದೆ ಎಂದು ಅವರು ಹೇಳಿದರು.

## ಪ್ಯಾಲೆಸ್ತೀನ್ ಧ್ವಜ ತೋರಿಸುವುದರಲ್ಲಿ ತಪ್ಪಿಲ್ಲ: ಕೇಂದ್ರ ಸರ್ಕಾರಕ್ಕೆ ತಿರುಗೇಟು ನೀಡಿ ಸಮರ್ಥಿಸಿಕೊಂಡ ಜಿ.ಪರಮೇಶ್ವರ್



**ಬೆಂಗಳೂರು,ಸೆ.18,** ಪ್ಯಾಲೆಸ್ತೀನ್‌ಗೆ ಕೇಂದ್ರ ಸರ್ಕಾರವೇ ಬೆಂಬಲ ನೀಡುತ್ತಿದೆ ಎಂದು ತಿರುಗೇಟು ನೀಡಿರುವ ಗೃಹ ಸಚಿವ ಪರಮೇಶ್ವರ್ ಪ್ಯಾಲೆಸ್ತೀನ್ ಧ್ವಜ ತೋರಿಸುವುದರಲ್ಲಿ ತಪ್ಪೇನಿದೆ ಎಂಬುದಾಗಿ ವಾದ ಮಾಡುತ್ತಿರುವುದಾಗಿ ಹೇಳಿದರು.

ಸುದ್ದಿಗಾರರೊಂದಿಗೆ, ಮೂರೂ ಜಿಲ್ಲೆಗಳಲ್ಲಿ ಪ್ಯಾಲೆಸ್ತೀನ್ ಧ್ವಜ ಪ್ರದರ್ಶನ ಮಾಡಿರುವ ಘಟನೆ ಕಂಡು ಬಂದಿದೆ. ಪ್ಯಾಲೆಸ್ತೀನ್ ಧ್ವಜ ಪ್ರದರ್ಶನ ಮಾಡಿದವರನ್ನೆಲ್ಲ ಬಂಧಿಸಲಾಗಿದೆ. ಕೇಂದ್ರ ಸರ್ಕಾರದವರೇ ಪ್ಯಾಲೆಸ್ತೀನ್‌ಗೆ ಬೆಂಬಲವಿರುವುದಾಗಿ ಹೇಳಿಕೆ ನೀಡಿದೆ. ಹೀಗಾಗಿ, ಧ್ವಜ ತೋರಿಸುವುದರಲ್ಲಿ ತಪ್ಪೇನಿದೆ ಎಂದು ಕೇಂದ್ರ ಸರ್ಕಾರ ವಾದ ಮಾಡುತ್ತಿದೆ. ಆದರೂ ಅವರೆಲ್ಲರನ್ನು ಬಂಧಿಸಿದ್ದೇವೆ ಎಂದು ಹೇಳಿದರು. ಪ್ಯಾಲೆಸ್ತೀನ್ ಧ್ವಜ ಹಾರಿಸಲು ಯಾರು ಪ್ರಚೋದನೆ ಕೊಟ್ಟಿರುವ ಬಗ್ಗೆ ತನಿಖೆ ನಡೆಸುತ್ತಿದ್ದೇವೆ. 17 ರಿಂದ 18 ವರ್ಷ ವಯಸ್ಸಿನ ಹುಡುಗರಿಗೆ ಪ್ರಚೋದನೆ ಕೊಟ್ಟಿರುವ ಬಗ್ಗೆ ಮಾಹಿತಿ ಬಂದ ಮೇಲೆ ಬಂಧಿಸಿರುವುದಾಗಿ ಅವರು ಸ್ಪಷ್ಟಪಡಿಸಿದರು.

ನಾಗಮಂಗಲದಲ್ಲಿ ನಡೆದ ಪ್ರಕರಣವನ್ನೇ ದೊಡ್ಡ ಸಮಸ್ಯೆ ಮಾಡಲು ಹೊರಟಿರುವ ಬಿಜೆಪಿ ವಿರುದ್ಧ ಕಿಡಿಕಾರಿರುವ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಯಾವುದೇ ಮುಲಾಜಿಲ್ಲದೆ ಕಾನೂನು ಪ್ರಕಾರ ತೆಗೆದುಕೊಂಡಿದ್ದೇವೆ. ಮುಂದಿನ ತನಿಖೆಯಲ್ಲಿ ಏನೆಲ್ಲ ವಿಚಾರಗಳು ಹೊರ ಬರುತ್ತದೆ ಎಂಬುದರ ಆಧಾರದ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು. ನಾಗಮಂಗಲ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳುವುದಾಗಿ ನೂರು ಸಲ ಹೇಳುತ್ತೇನೆ.

ಆದರೆ, ಬಿಜೆಪಿ ಮುಖಂಡರು ದಿನಕ್ಕೆ ಒಬ್ಬರಂತೆ ನಾಗಮಂಗಲ ವಿಚಾರದಲ್ಲಿ ಹೇಳಿಕೆ ನೀಡುತ್ತಿದ್ದಾರೆ. ಇದಕ್ಕೆ ಬಿಜೆಪಿಯವರು ತಮ್ಮದೇ ಒಂದು ವಿನ್ಯಾಶ ಮಾಡಿಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದರು.

ನಾಗಮಂಗಲ ಹಿಂಸಾಚಾರ ವೇಳೆ ಪಾಕಿಸ್ತಾನ ಪರ ಘೋಷಣೆ ಕೂಗಿರುವ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ. ಈ ವಿಚಾರವಾಗಿ ಕೆಲವರು ತಪ್ಪು ಹೇಳಿಕೆ ನೀಡಿದ್ದಾರೆ ಎಂಬುದಾಗಿ ಅಧಿಕಾರಿಗಳು ಹೇಳುತ್ತಿದ್ದಾರೆ. ಈ ಬಗ್ಗೆ ಪುನರ್ ಪರಿಶೀಲನೆ ನಡೆಸಲಾಗುವುದು ಎಂದರು.

ಕಳೆದ ವರ್ಷ ಗಣೇಶೋತ್ಸವ ವೇಳೆ ಕೆಲವೊಂದು ಸಣ್ಣಪುಟ್ಟ ಘಟನೆ ಹೊರತುಪಡಿಸಿದರೆ. ಕೋಮುಸಂಘರ್ಷ ಸಂಭವಿಸಿಲ್ಲ. ಈ ವರ್ಷವೂ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಂಡಿದ್ದೇವೆ. ಅಹಿತಕರ ಘಟನೆಗಳು ನಡೆಯಲು ಅವಕಾಶ ನೀಡುವುದಿಲ್ಲ ಎಂದು ಮೊದಲೇ ಹೇಳಿದ್ದೇವೆ. ಆದರೆ, ಬಿಜೆಪಿಯವರು ಎಲ್ಲವನ್ನೂ ತಿರುಚುತ್ತಿದ್ದಾರೆ. ಈ ವಿದ್ಯಮಾನವನ್ನು ರಾಜ್ಯದ ಜನತೆ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದರು. ಪಿಎಸ್‌ಐ ಪರೀಕ್ಷೆಯನ್ನು ಸೆ. 22 ರಿಂದ 28ಕ್ಕೆ ಮುಂದೂಡಲಾಗಿತ್ತು. ಸೆ. 28 ರಂದೇ ಯುಪಿಎಸ್ಸಿ ಇಂಗ್ಲಿಷ್ ಪರೀಕ್ಷೆ ಇರುವ ಬಗ್ಗೆ ಮಾಹಿತ ಲಭ್ಯವಾದ ತಕ್ಷಣ ಅ.3ರಂದು ಪರೀಕ್ಷೆ ಮುಂದೂಡಲಾಗಿದೆ. ಈ ವಿಚಾರವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅ. 3 ರಂದು ಪರೀಕ್ಷೆ ನಿಗದಿಪಡಿಸಿ ಅಧಿಕೃತ ಪ್ರಕಟಣೆ ಹೊರಡಿಸಿದೆ ಎಂದು ಹೇಳಿದರು. ಬಿಜೆಪಿ ಶಾಸಕ ಮುನಿರತ್ನ ಅವರನ್ನು ಏಕಾಏಕಿ ಬಂಧಿಸಿಲ್ಲ. ಆತನ ವಿರುದ್ಧ ದೂರು ಕೊಟ್ಟಿದ್ದರೂ ಇದಕ್ಕೆ ಪೂರಕವಾಗಿ ನೀಡಿದ್ದ ವೀಡಿಯೊ ಆಧರಿಸಿ ಬಂಧಿಸಲಾಗಿದೆ. ಈಗಾಗಲೇ ಧ್ವನಿ ಮಾದರಿಯನ್ನು ಸಂಗ್ರಹಿಸಿ ಎಫ್‌ಎಸ್‌ಎಲ್ ಪರೀಕ್ಷೆಗೆ ರವಾನಿಸಲಾಗಿದೆ. ವರದಿ ಬಂದ ಬಳಿಕ ಮುಂದಿನ ಕ್ರಮ ತೆಗೆದುಕೊಳ್ಳುವುದಾಗಿ ಪರಮೇಶ್ವರ್ ಹೇಳಿದರು.

### ಡ್ರಗ್ಸ್ ದಂಧೆ ನಿಯಂತ್ರಣ

ರಾಜ್ಯದಲ್ಲಿ ಕಳೆದ ಒಂದೂವರೆ ವರ್ಷದಲ್ಲಿ ಡ್ರಗ್ಸ್ ದಂಧೆಗೆ ಕಡಿವಾಣ ಹಾಕಿದ್ದೇವೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಡ್ರಗ್ಸ್ ಪ್ರಕರಣದ ಸಂಖ್ಯೆ ಇಳಿಕೆಯಾಗಿದೆ ಎಂದು ಪರಮೇಶ್ವರ್ ಹೇಳಿದರು. ಡ್ರಗ್ಸ್ ದಂಧೆಯನ್ನು ಹತ್ತಿಕ್ಕಲು ಸಾಕಷ್ಟು ಪ್ರಯತ್ನ ಮಾಡಿದ್ದೇವೆ. ಈಗ ಔಷಧ ಅಂಗಡಿಗಳಲ್ಲಿ ಸಿಗುತ್ತಿರುವ ಪೇನ್ಕಿಲ್ಲರ್ ಮಾತ್ರೆಗಳಿಂದ ನಮಗೆ ಆತಂಕ ಎದುರಾಗಿದೆ. ನೋವು ನಿವಾರಕ ಮಾತ್ರೆಗಳನ್ನು ಬೇರೆ ಬೇರೆ ಕಂಪನಿಗಳು ತಯಾರಿಸುತ್ತಿವೆ. ಅದು ಈಗ ಸುಲಭವಾಗಿ ಕೈಗೆ ಸಿಗುತ್ತಿವೆ. ಯಾವ ರೀತಿ ನಿಯಂತ್ರಿಸ ಬೇಕು ಎಂಬ ಬಗ್ಗೆ ಮುಖ್ಯಮಂತ್ರಿಗಳು ಸಭೆ ಕರೆದಿದ್ದಾರೆ ಎಂದರು. ಪೇನ್ಕಿಲ್ಲರ್ ಮಾತ್ರೆಗಳನ್ನು ಔಷಧವೆಂದು ಮಾರಾಟ ಮಾಡಲಾಗುತ್ತಿದೆ. ವೈದ್ಯರು ಬರೆದು ಕೊಟ್ಟಿರುವುದನ್ನು ಸುಲಭವಾಗಿ ಪಡೆಯಲಾಗುತ್ತಿದೆ. ಇದಕ್ಕೆ ಕಾನೂನು ಬೇರೆ ಇದೆ. ಈ ಕುರಿತು ಡ್ರಗ್ ಕಂಟ್ರೋಲರ್ಸ್‌ಗಳಿಗೆ ಯಾವ ರೀತಿ ತಿಳಿಸಬೇಕಾಗುತ್ತದೆ ಎಂಬ ಬಗ್ಗೆ ಚರ್ಚಿಸಲಾಗುವುದು. ಗಾಂಜಾ ಸೇರಿದಂತೆ ಇನ್ನಿತರ ಮಾದಕದ್ರವ್ಯಗಳನ್ನು ನಿಯಂತ್ರಿಸಿದ್ದೇವೆ. ಅಂಕಿ–ಅಂಶಗಳನ್ನು ಗಮನಿಸಿದ್ದಾಗ ಪ್ರಕರಣ ಗಳು ಗಣನೀಯವಾಗಿ ಇಳಿಕೆಯಾಗಿದೆ. ಎಲ್ಲ ರೀತಿಯ ನಿಯಂತ್ರಣಕ್ಕೆ ಅಗತ್ಯ ಕ್ರಮ ತೆಗೆದು ಕೊಂಡಿರುವುದಾಗಿ ಪರಮೇಶ್ವರ್ ಪ್ರತಿಪಾದಿಸಿದರು

## ಕೃಷಿ ತಂತ್ರಜ್ಞಾನ ವರ್ಗಾವಣೆ ರಾಜ್ಯ ಸರ್ಕಾರದ ಆದ್ಯತೆ: ಸಚಿವ ಚಲುವರಾಯಸ್ವಾಮಿ



**ಬೆಂಗಳೂರು ಸೆ.18–** ಭೂಸಾರ ಹಾಗೂ ಇ ಸ್ಯಾಪ್ ಆಪ್‌ಗಳು ಕೃಷಿ ಉತ್ಪಾದನೆ ಹೆಚ್ಚಿಸುವಲ್ಲಿ ಪರಿಕಾರಿಯಾಗಿ ನೆರವಾಗಲಿವೆ. ಇದೇ ರೀತಿ ರೈತರಿಗೆ ಇನ್ನಷ್ಟು ವೈಜ್ಞಾನಿಕ ಹಾಗೂ ತಾಂತ್ರಿಕ ನೆರವು ನೀಡಲು ರಾಜ್ಯ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ತಿಳಿಸಿದರು.

ತಮ್ಮ ಕಚೇರಿಯಲ್ಲಿಂದು ಇಂಡಿಯನ್ ಸ್ಟಾರ್ಟಫ್ ಟೂರ್ 2024 ಅಂಗವಾಗಿ ದೇಶದ ವಿವಿಧೆಡೆಯಿಂದ ಆಗಮಿಸಿದ ಛಾತ್ರ ಸಂಸದ್‌ನ ಯುವ ನವೋದ್ಯಮಿಗಳನ್ನು ಭೇಟಿಯಾಗಿ ಚರ್ಚೆ ನಡೆಸಿದ ಅವರು ಕೃಷಿ ಅಭ್ಯುದಯಕ್ಕೆ ಸರ್ಕಾರ ಹತ್ತಾರು ಪ್ರಮುಖ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುತ್ತಿದೆ ಎಂದರು.

ರಾಜ್ಯದಲ್ಲಿ ಬಹುತೇಕ ಮಳೆಯಾಶ್ರಿತ ಜಮೀನು ಹೊಂದಿದ್ದು ಬರ ಹಾಗೂ ಅತಿವೃಷ್ಠಿ ನಮ್ಮ ಮುಂದಿರುವ ಬಹುದೊಡ್ಡ ಸವಾಲಾಗಿದೆ ಅದನ್ನು ಸಮರ್ಥವಾಗಿ ನಿಭಾಯಿಸಲು ಸರ್ಕಾರವೂ ಶ್ರಮಿಸುತ್ತಿದೆ ಎಂದರು. ಮೌಲ್ಯ ವರ್ಧನೆ, ಉತ್ಪಾದನೆ ಹೆಚ್ಚಳ ನಮ್ಮ ಆದ್ಯತೆ. ಮಾರುಕಟ್ಟೆ ಸರಪಣಿ ಬಲ ಪಡಿಸಲೂ ಸಹ ನಮ್ಮ ಸರ್ಕಾರ ಗಮನ ಹರಿಸಿದೆ ಎಂದು ಚಲುವರಾಯಸ್ವಾಮಿ ಹೇಳಿದರು.

ಛಾತ್ರ ಸಂಸದ್ ನ ಪ್ರತಿನಿಧಿಗಳ ಅಭಿಪ್ರಾಯ ಅಲಿಸಿದ ಸಚಿವರು ಅವರ ಪ್ರಶ್ನೆಗಳಿಗೂ ಉತ್ತರ ನೀಡಿದರು. ದೇಶದಲ್ಲಿ ಕರ್ನಾಟಕ ತಂತ್ರಜ್ಞಾನ ಬಳಕೆಯಲ್ಲಿ ನಾಲ್ಕನೆಯ ಸ್ಥಾನದಲ್ಲಿದೆ. ಜಲಾನಯನ ಅಭಿವೃದ್ಧಿಯಲ್ಲಿಯೂ ವಿಶ್ವ ಬ್ಯಾಂಕ್ ನಮ್ಮ ರಾಜ್ಯವನ್ನು ಮುಂಚೂಣಿ ನಾಯಕನಂತೆ ಗುರುತಿಸಿದೆ ಎಂದರು. ರಾಜ್ಯದಲ್ಲಿ ಬೆಳೆ ವಿಮೆ ನೊಂದಣಿ ,ಪರಿಹಾರ ಇತ್ಯರ್ಥ ,ಬೆಳೆ ಸಮೀಕ್ಷೆಗಳು ಪರಿಣಾಮಕಾರಿಯಾಗಿ ನಡೆಯುತ್ತಿವೆ. ಸಮಗ್ರ ಕೃಷಿ ಹೆಚ್ಚು ಲಾಭದಾಯಕ ಹಾಗೂ ಸುಸ್ಥಿರ ಅಭಿವೃದ್ಧಿಗೆ ಸಹಕಾರಿಯಾಗಿದೆ ರೈತರು ಅದನ್ನು ಅನುಸರಿಸುವುದು ಉತ್ತಮ ಎಂದು ಕೃಷಿ ಸಚಿವರು ಅಭಿಪ್ರಾಯ ಪಟ್ಟರು.



ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಪ್ರಯುಕ್ತ ಮಂಗಳವಾರ ದೆಹಲಿ ಕನ್ನಡ ಶಾಲೆಯಲ್ಲಿ ರಾಷ್ಟ್ರ ಧ್ವಜಾರೋಹಣ ಕೇಂದ್ರ ಸರ್ಕಾರದ ಭಾರಿ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ ಅಮರೇಶ್ವರ ಪಾಟೀಲ್ ಅವರ ಅಮೃತ ಹಸ್ತದಿಂದ ನೆರವೇರಿಸಲಾಯಿತು, ಈ ನಿಟ್ಟಿನಲ್ಲಿ ಬಂದು ಎಲ್ಲ ಸಹಾಯ ನೀಡಿದ ದೆಹಲಿ ಕರ್ನಾಟಕ ಸಂಘ, ದೆಹಲಿ ಕನ್ನಡ ಶಾಲೆ, ಗುರುಗಾಂವ ಕನ್ನಡ ಸಂಘ, ಲಾಜಪತ ನಗರ, ಹಾಗೂ ನಮ್ಮ ಸಮಿತಿಯ ಎಲ್ಲ ಪದಾಧಿಕಾರಿಗಳಿಗೆ ಮುಖ್ಯ ಅತಿಥಿಗಳಿಗೆ ಧನ್ಯವಾದಗಳು.

**ರಾಹುಲ್ ಗಾಂಧಿಯವರಿಗೆ ಪ್ರಬುದ್ಧತೆ ಇಲ್ಲ, ಮಕ್ಕಳಂತೆ ಆಟವಾಡುತ್ತಾರೆ**

## ಒಂದು ದೇಶ, ಒಂದು ಚುನಾವಣೆ ವ್ಯವಸ್ಥೆಗೆ ಸ್ವಾಗತ, ಮೋದಿ ಭಯದಿಂದ ಕಾಂಗ್ರೆಸ್ ವಿರೋಧ: ಆರ್.ಅಶೋಕ್ ಟೀಕೆ



**ಬೆಂಗಳೂರು, ಸೆ.18–** ಒಂದು ದೇಶ, ಒಂದು ಚುನಾವಣೆ ನಡೆಸಲು ಕೇಂದ್ರ ಸರ್ಕಾರ ಕೈಗೊಳ್ಳುತ್ತಿರುವ ಕ್ರಮವನ್ನು ಸ್ವಾಗತಿಸುತ್ತೇನೆ. ನರೇಂದ್ರ ಮೋದಿಯವರ ಭಯದಿಂದಾಗಿ ಕಾಂಗ್ರೆಸ್ ಈ ಕ್ರಮವನ್ನು ವಿರೋಧಿಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ, ಒಂದು ದೇಶ, ಒಂದು ಚುನಾವಣೆ ನಡೆಸಲು ಕೇಂದ್ರ ಸರ್ಕಾರ ಕೈಗೊಳ್ಳುತ್ತಿರುವ ಕ್ರಮವನ್ನು ಸ್ವಾಗತಿಸುತ್ತೇನೆ. ಇದರಿಂದ ತೆರಿಗೆದಾರರ ಹಣ ಉಳಿತಾಯವಾಗುತ್ತದೆ. ಸ್ಥಳೀಯ ಸಂಸ್ಥೆಗಳ ಚುನಾವಣೆ, ವಿಧಾನಸಭೆ, ಲೋಕಸಭೆ ಹೀಗೆ ಒಂದೊಂದು ಚುನಾವಣೆ ಒಮ್ಮೊಮ್ಮೆ ನಡೆದಾಗ ನೀತಿ ಸಂಹಿತೆ ಜಾರಿಯಾಗುತ್ತದೆ. ಇದರಿಂದಾಗಿ ಕಾಮಗಾರಿಗಳು ವಿಳಂಬವಾಗಿ ಸರ್ಕಾರ ಯಾವುದೇ ಯೋಜನೆಯನ್ನು ಸರಿಯಾಗಿ ಜಾರಿ ಮಾಡಲು ಸಾಧ್ಯವಾಗುವುದಿಲ್ಲ. ಹೊಸ ಕ್ರಮದಿಂದ ಈ ಸಮಸ್ಯೆ ನಿವಾರಣೆ ಯಾಗಲಿದೆ ಎಂದರು.

ಕಾಂಗ್ರೆಸ್ ಮತ್ತು ಕಮ್ಯುನಿಸ್ಟ್ ಪಕ್ಷಗಳು ಇಂತಹ ಕ್ರಮಕ್ಕೆ ವಿರೋಧ ಮಾಡುವುದು ಸಹಜ. ಲೋಕಸಭೆ ಮತ್ತು ವಿಧಾನಸಭೆ ಚುನಾವಣೆ ಒಟ್ಟಿಗೆ ನಡೆದರೆ, ಸಮಸ್ಯೆಯಾಗುತ್ತದೆ ಎಂದು ಅವರು ಹೆದರಿದ್ದಾರೆ. ಎಲ್ಲಕ್ಕಿಂತ ಮುಖ್ಯವಾಗಿ ಅವರಿಗೆ ಮೋದಿಯವರ ಭಯವಿದೆ. ಈ ಕ್ರಮದಿಂದಾಗಿ ಪ್ರಧಾನಿ ಮತ್ತು ಮುಖ್ಯಮಂತ್ರಿಗೆ ಐದು ವರ್ಷಗಳ ಸಂಪೂರ್ಣ ಅವಧಿ ದೊರೆಯುತ್ತದೆ. ಆ ದೃಷ್ಟಿಯಿಂದ ಇದು ಉತ್ತಮ ಕ್ರಮ ಎಂದರು. ಪ್ರಧಾನಿ ನರೇಂದ್ರ ಮೋದಿಯವರ ಹತ್ತಿರ ಹೋಗುವ ಸರಿಸಮನಾದ ನಾಯಕರು ಯಾರೂ ಕಾಂಗ್ರೆಸ್‌ನಲ್ಲಿಲ್ಲ.

ರಾಹುಲ್ ಗಾಂಧಿ ಯವರಿಗೆ ಮಾತನಾಡಲು ಬರಲ್ಲ, ತೀರ್ಮಾನ ಕೈಗೊಳ್ಳಲು ಬರಲ್ಲ. ಅವರು ಮಕ್ಕಳಂತೆ ಆಟವಾಡುತ್ತಿದ್ದು, ಅವರಿಗೆ ಪ್ರಬುದ್ಧತೆ ಇಲ್ಲ ಎಂಬುದು ಅವರ ವರ್ತನೆಯಿಂದ ಗೊತ್ತಾಗುತ್ತದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅತಂತ್ರವಾಗಿದ್ದು, ಆ ವಿಷಯ ಮರೆಮಾಚಲು ಮೋದಿ ಸರ್ಕಾರದ ಬಗ್ಗೆ ಟೀಕೆ ಮಾಡಲಾಗುತ್ತಿದೆ. ಮೋದಿಯವರು ಖಂಡಿತ 5 ವರ್ಷ ಆಡಳಿತ ನಡೆಸಲಿದ್ದಾರೆ. ಆ ನಂತರ ಕೂಡ ಅವರೇ ಪ್ರಧಾನಿಯಾಗಲಿದ್ದಾರೆ. ಕಾಂಗ್ರೆಸ್‌ಗೆ ಪ್ರಧಾನಿ ಯಾರೆಂದು ಘೋಷಿಸುವ ತಾಕತ್ತು ಕೂಡ ಇಲ್ಲ. ಇಂತಹ ಸ್ಥಿತಿಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಟೀಕೆ ಮಾಡಬಾರದು. ರಾಹುಲ್ ಗಾಂಧಿಯವರು ವಿದೇಶಕ್ಕೆ ಹೋಗಿ ಸಂವಿಧಾನ ಹಾಗೂ ಮೀಸಲು ಬಗ್ಗೆ ಮಾತನಾಡಿದ್ದಾರೆ. ಈ ವಿಚಾರಗಳನ್ನು ದೇಶದೊಳಗೆ ಮಾತಾಡಬೇಕು. ಅಲ್ಲಿ ಹೋಗಿ ದೇಶವನ್ನು ಹೀಯಾಳಿಸುವ ಮಾತಾಡ ಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದರು.

ನನ್ನ ಹಿಂದೆ ಇರುವವರೇ ಮುಗಿಸುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಆರೇಳು ಜನರು ಅವರ ಕುರ್ಚಿಗೆ ಹಳ್ಳ ತೋಡಲು ಸಿದ್ಧವಾಗಿದ್ದಾರೆ ಎಂದು ಅಶೋಕ್ ವ್ಯಂಗ್ಯವಾಡಿದರು.

## ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರ ಓಲೈಕೆಗೆ ಸಂಪುಟ ಸಚಿವ ಸಭೆಯ ನಾಟಕ: ಬಿ.ವೈ.ವಿಜಯೇಂದ್ರ ವಿಶ್ಲೇಷಣೆ



**ಕಲಬುರ್ಗಿ, ಸೆ.18–** ಮುಖ್ಯಮಂತ್ರಿ ಗಳು ತಮ್ಮ ಕುರ್ಚಿ ಅಲ್ಲಾಡುತ್ತಿರುವ ಸಂದರ್ಭದಲ್ಲಿ ಕುರ್ಚಿ ಉಳಿಸಿಕೊಳ್ಳಲು ಮತ್ತು ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ (ಎಐಸಿಸಿ) ಅಧ್ಯಕ್ಷರನ್ನು ಓಲೈಸಲು ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಚಿವ ಸಂಪುಟ ಸಭೆಯ ನಾಟಕ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದರು.

ಕಲಬುರ್ಗಿಯಲ್ಲಿ ಬುಧವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ನಿನ್ನೆ ಆಗಿರುವ ಸಚಿವ ಸಂಪುಟ ಸಭೆಯಿಂದ ಈ ಭಾಗದ ಅಭಿವೃದ್ಧಿ ಆಗಲು ಸಾಧ್ಯವಿಲ್ಲ. ಈ ಭಾಗಕ್ಕೆ 5 ಸಾವಿರ ಕೋಟಿ ಕೊಡುತ್ತೇವೆ; ಇಲ್ಲಿ ಶಾಲಾ ಕಾಲೇಜು ಮಾಡುತ್ತೇವೆ. 1,100 ಕೋಟಿಯ ಪ್ಯಾಕೇಜ್ ಕೊಡುವುದಾಗಿ ಮುಖ್ಯಮಂತ್ರಿಗಳು ಹೇಳಿದ್ದಾರೆ. ಇದರಲ್ಲಿ ಹೊಸದೇನೂ ಇಲ್ಲ ಎಂದು ಟೀಕಿಸಿದರು.

ಒಂದು ವರ್ಷದ ಹಿಂದೆ ಕೂಡ ಇದೇ ಮಾತುಗಳನ್ನು ಹೇಳಿದ್ದರು. ಆದರೆ, ಯಾವುದೇ ಪ್ರಯೋಜನ ಆಗಿಲ್ಲ ಎಂದು ಆಕ್ಷೇಪಿಸಿದರು.

ಹಿಂದೆ ಯಡಿಯೂರಪ್ಪನವರು ಮುಖ್ಯಮಂತ್ರಿಗಳಾಗಿದ್ದಾಗ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ 1,500 ಕೋಟಿ ಕೊಟ್ಟಿದ್ದರು. ತದನಂತರ ಬಸವರಾಜ ಬೊಮ್ಮಾಯಿಯವರ ಬಿಜೆಪಿ ಸರಕಾರವು 3 ಸಾವಿರ ಕೋಟಿ ಮತ್ತು ಬಜೆಟ್‌ನಲ್ಲಿ 5 ಸಾವಿರ ಕೋಟಿ ಅನುದಾನ ಪ್ರಕಟಿಸಿತ್ತು. ಅದನ್ನೇ ಸಿದ್ದ ರಾಮಯ್ಯನವರು ಪುನರುಚ್ಚಾರ ಮಾಡಿದ್ದಾರೆಯೇ ಹೊರತು, ಯಾವುದೇ ಹೊಸ ವಿಚಾರಗಳನ್ನು ಹೇಳಿಲ್ಲ ಎಂದು ಟೀಕಿಸಿದರು.

## ದಲಿತ ಎಂಬುದು ಅಸಂಸದೀಯ ಪದವಲ್ಲ: ಎಚ್.ಸಿ.ಮಹದೇವಪ್ಪ



**ಬೆಂಗಳೂರು, ಸೆ.18–** ದಲಿತರು, ಅಸ್ಪಶ್ಯರು ಹಿಂದೂ ಧರ್ಮದಲ್ಲಿಲ್ಲವೇ. ಬಿಜೆಪಿ ಶಾಸಕರು ಜಾತಿನಿಂದನೆ ಮಾಡಿದಾಗ ಬಿಜೆಪಿ ಮತ್ತು ಸಂಘ ಪರಿವಾರದ ನಾಯಕರು ಏಕೆ ಅದನ್ನು ಪ್ರಶ್ನಿಸುತ್ತಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ, ದಲಿತ ಎಂಬುದು ಅಸಂಸದೀಯ ಪದವಲ್ಲ. ಆದರೆ ಅಸಂಘಟಿತ ವರ್ಗ ಎಂಬುದನ್ನು ಸೂಚಿಸುತ್ತದೆ. ಆದರೆ ಹೊಲೆಯ, ಮಾದಿಗ ಎಂಬ ಪದಗಳು ಅಸ್ಪಶ್ಯತೆ ಆಚರಣೆಗೊಳ ಪಡುತ್ತವೆ. ಈ ಅಪರಾಧಕ್ಕಾಗಿ ಜಾಮೀನುರಹಿತ ಬಂಧನಕ್ಕೆ ಅವಕಾಶವಿದೆ.

ಬಿಜೆಪಿಯಲ್ಲಿ ದಲಿತನ ಹೆಸರನ್ನು ಅವರಿಗೆ ಬೇಕಾದಂತೆ ಮಾತನಾಡಿಸಲು ಮಾತ್ರ ಬಳಸಿಕೊಳ್ಳಲಾಗುತ್ತಿದೆ. ಅಲ್ಲಿರುವವರಿಗೆ ಧ್ವನಿಯೇ ಇಲ್ಲ. ಆರ್‌ಎಸ್‌ಎಸ್‌ನವರು ಬಿಜೆಪಿಯಲ್ಲಿರುವ ದಲಿತ ನಾಯಕರನ್ನು ಮಾತನಾಡಲು ಬಿಡುವುದೇ ಇಲ್ಲ ಎಂದು ವಾಗ್ದಾಳಿ ನಡೆಸಿದರು.ದಲಿತರು, ಅಸ್ಪಶ್ಯರು ಹಿಂದೂ ಧರ್ಮದಲ್ಲಿ ಇಲ್ಲವೇ ಹಿಂದೂ ಧರ್ಮದ ಸಂರಕ್ಷಕರು ಎಂದು ಹೇಳಿಕೊಳ್ಳುವ ಸಂಘ ಪರಿವಾರದವರು ಈ ಪ್ರಕರಣದ ಬಗ್ಗೆ ಮೌನವಾಗಿರುವುದು ಅದರಲ್ಲೂ ಬಿಜೆಪಿಯಲ್ಲಿರುವ ನಾಯಕರ ಬಾಯಿ ಕಟ್ಟಿಹಾಕಿರುವುದು ಏಕೆ ಎಂದು ಪ್ರಶ್ನಿಸಿದರು.ಶಾಸಕ ಮುನಿರತ್ನ ಕಾನೂನು ಮಾಡುವ ಶಾಸಕರು. ಅವರೇ ನಿಯಮವನ್ನು ಉಲ್ಲಂಘಿಸಿರುವುದು ಸರಿಯಲ್ಲ ಎಂದು ಹೇಳಿದರು.

ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ನಡೆದ ಗಲಭೆ ಪ್ರಕರಣವನ್ನು ರಾಜಕೀಯಕ್ಕೆ ಬಳಸಿಕೊಳ್ಳುತ್ತಿರುವುದು ಅಕ್ಷಮ್ಯ. ನಾಗಮಂಗಲದಲ್ಲಿ ಘಟನೆಗೆ ಸಂಬಂಧಪಟ್ಟಂತೆ ಆಯ್ಕೆಯ ಮಾದರಿಯಲ್ಲಿ ವಿಚಾರ ಪ್ರಸ್ತಾಪಿಸುವುದು ಸರಿಯಲ್ಲ ಎಂದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಸೆಪ್ಟೆಂಬರ್ 19 , 2024, ಗುರು ವಾರ

## ಒಳಪುಟಗಳಲ್ಲಿ

18,626 ಪುಟಗಳ ವರದಿಯಲ್ಲಿ ಒಂದು ರಾಷ್ಟ್ರ-ಒಂದು ಚುನಾವಣೆಗಾಗಿ ಸಂವಿಧಾನಕ್ಕೆ ತಿದ್ದುಪಡಿಗಳ ಶಿಫಾರಸು -ಪು.4

ತೆಂಗು ಬೆಳೆಯಲ್ಲಿ ನೈಸರ್ಗಿಕ ಕೃಷಿಗೆ ಆದ್ಯತೆ ನೀಡಿ: ರಾಮನಾಥ್ ಠಾಕೂರ್ ಕರೆ-ಪು.5

ಬೆಳಗಾವಿ-ಪುಣೆ, ಧಾರವಾಡ-ಬೆಂಗಳೂರು ರೈಲು ಟಿಕೆಟ್ ದರ ಇಳಿಕೆ: ಶೆಟ್ಟರ್ ಭರವಸೆ -ಪು.6

# ಒಂದು ದೇಶ ಒಂದು ಚುನಾವಣೆ ಮಸೂದೆಗೆ ಒಪ್ಪಿಗೆ

## ಚಳಿಗಾಲದ ಸಂಸತ್ ಅಧಿವೇಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಮಂಡನೆ

**ನವದೆಹಲಿ, ಸೆ.18:** ಒಂದು ದೇಶ ಒಂದು ಚುನಾವಣೆ ಮಸೂದೆ ಮುಂದಿನ ಸಂಸತ್ ಅಧಿವೇಶನದಲ್ಲಿ ಮಂಡನೆಯಾಗಲಿದೆ. ಬುಧವಾರ ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಕ್ಯಾಬಿನೆಟ್ ಸಭೆಯಲ್ಲಿ ಈ ಮಸೂದೆ ಮಂಡನೆಗೆ ಒಪ್ಪಿಗೆ ನೀಡಿದೆ. ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಉನ್ನತ ಮಟ್ಟದ ಸಮಿತಿ ಈ ವರ್ಷದ ಮಾರ್ಚ್ 14ರಂದು ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತು ತನ್ನ ವರದಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಸಲ್ಲಿಸಿತ್ತು.

191 ದಿನಗಳ ಸಮಯವನ್ನು ತೆಗೆದುಕೊಂಡು ಅಧ್ಯಯನ ನಡೆಸಿದ್ದ ಸಮಿತಿ 18,000 ಕ್ಕೂ ಅಧಿಕ ಪುಟಗಳ ವರದಿಯನ್ನು ತಯಾರಿಸಿತ್ತು. ವಿವಿಧ ರಾಜಕೀಯ ಪಕ್ಷಗಳು ಮತ್ತು ಪ್ರಮುಖ ಸಂಪನ್ಮೂಲ ವ್ಯಕ್ತಿಗಳಿಂದ ಸಲಹೆಯನ್ನು ಸಂಗ್ರಹಿಸಿತ್ತು. ಒಂದು ರಾಷ್ಟ್ರ, ಒಂದು ಚುನಾವಣೆ ಪರಿಕಲ್ಪನೆಯು ದೇಶಾದ್ಯಂತ ಏಕಕಾಲದಲ್ಲಿ ಚುನಾವಣಾ ಮತದಾನ ನಡೆಸುವುದಾಗಿದೆ. ಲೋಕಸಭೆ ಹಾಗೂ ಎಲ್ಲ ರಾಜ್ಯಗಳ ವಿಧಾನಸಭೆಗಳಿಗೂ ಏಕಕಾಲದಲ್ಲಿ ಚುನಾವಣೆ ನಡೆಸುವ ಪ್ರಸ್ತಾವನೆ ಇದೆ.

ಒಂದು ರಾಷ್ಟ್ರ, ಒಂದು ಚುನಾವಣೆ ಪರಿಕಲ್ಪನೆಯು ದೇಶಾದ್ಯಂತ ಏಕಕಾಲದಲ್ಲಿ ಚುನಾವಣಾ ಮತದಾನ ನಡೆಸುವುದಾಗಿದೆ. ಲೋಕಸಭೆ ಹಾಗೂ ಎಲ್ಲ ರಾಜ್ಯಗಳ ವಿಧಾನಸಭೆಗಳಿಗೂ ಏಕಕಾಲದಲ್ಲಿ ಚುನಾವಣೆ ನಡೆಸುವ ಪ್ರಸ್ತಾವನೆ ಇದೆ. ಭಾರತದಲ್ಲಿ ಸಂಸತ್ತಿನ ಸದಸ್ಯರನ್ನು ಆಯ್ಕೆ ಮಾಡಲು ಸಾರ್ವತ್ರಿಕ ಚುನಾವಣೆಗಳು ಮತ್ತು ರಾಜ್ಯ ವಿಧಾನಸಭೆ ಚುನಾವಣೆಗಳು ಹಾಲಿ ಸರ್ಕಾರದ ಅವಧಿಯು ಅಂತ್ಯಗೊಂಡಾಗ ಅಥವಾ ಕೆಲವು ಕಾರಣಗಳಿಂದ ವಿಸರ್ಜನೆಯಾದಾಗ ಪ್ರತ್ಯೇಕವಾಗಿ ನಡೆಯುತ್ತಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಬಹಳ ಹಿಂದಿನಿಂದಲೂ ಒಂದು ರಾಷ್ಟ್ರ, ಒಂದು ಚುನಾವಣೆಯ ಕಲ್ಪನೆಯನ್ನು ಪ್ರತಿಪಾದಿಸುತ್ತಿದ್ದಾರೆ.



### ಒಂದು ರಾಷ್ಟ್ರ, ಒಂದು ಚುನಾವಣೆ ಹಾಸ್ಯಾಸ್ಪದ: ಡಿಕೆಶಿ ಅಭಿಮತ



ನಮ್ಮ ಸಂವಿಧಾನ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆ ಯಾವುದೇ ಕಾರಣಕ್ಕೂ ಸಾಧ್ಯವಿಲ್ಲ. ಅವರು ಆಪರೇಷನ್ ಕಮಲಕ್ಕೆ ಮೂಲದಾತರುಗಳಾದ ಬಿಜೆಪಿ ಯವರೇ ಒಂದು ರಾಷ್ಟ, ಒಂದು ಚುನಾವಣೆ ಎಂದು ಹೇಳುತ್ತಿರುವುದು ಹಾಸ್ಯಾಸ್ಪದ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ಕುಮಾರಪಾರ್ಕ್ ಸರ್ಕಾರಿ ಅತಿಥಿ ಗೃಹದಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಬುಧವಾರ ಮಾತನಾಡಿದ ಅವರು, ಅನೇಕ ರಾಜ್ಯಗಳಲ್ಲಿ ಸರ್ಕಾರಗಳನ್ನು ಅಸ್ಥಿರಗೊಳಿಸಲು ಬಿಜೆಪಿಯವರು ಮುಂದಾಗಿದ್ದಾರೆ. ಪ್ರಾದೇಶಿಕ ಪಕ್ಷಗಳು ಬೆಳೆಯುತ್ತಿರುವುದನ್ನು ತಡೆಯಲು ಕೇಂದ್ರ ಬಿಜೆಪಿ ಸರ್ಕಾರ ಈ ಹುನ್ನಾರ ಮಾಡಿದೆ ಎಂದರು. ದೇಶದಲ್ಲಿ ಎಲ್ಲಾ ಪಕ್ಷಗಳಿಗೂ ಅವಕಾಶ ಸಿಗಬೇಕು. ಈ ಹಿಂದೆಯೂ ಒಂದು ರಾಷ್ಟ್ರ, ಒಂದು ಚುನಾವಣೆ ವ್ಯವಸ್ಥೆ ನಮ್ಮಲ್ಲಿತ್ತು. ನಮ್ಮ ರಾಜ್ಯದಲ್ಲಿ ಒಟ್ಟಿಗೆ ಚುನಾವಣೆ ಮಾಡಲಾಯಿತು. ಆನಂತರ ಸಾಧ್ಯವೇ ಆಗಲಿಲ್ಲ. ಏಕೆಂದರೆ ಒಂದಷ್ಟು ಸರ್ಕಾರಗಳು ಸಂಪುಟದಲ್ಲಿ ಆರು ಹಾಗೂ 3 ತಿಂಗಳು ಮುಂಚಿತವಾಗಿ ಚುನಾವಣೆಗೆ ಹೋಗುತ್ತೇವೆ ಎಂದರು, ಒಂದಷ್ಟು ರಾಜ್ಯಗಳಲ್ಲಿ ಸರ್ಕಾರಗಳೇ ವಿಸರ್ಜನೆಗೊಂಡವು. ಹೀಗಿರುವಾಗ ಈ ವ್ಯವಸ್ಥೆಯನ್ನು ಜಾರಿಗೆ ತರಲು ಹೇಗೆ ಸಾಧ್ಯ ಎಂದರು.

### ಒಂದು ರಾಷ್ಟ್ರ ಒಂದು ಚುನಾವಣೆ ಪ್ರಾಯೋಗಿಕವಲ್ಲ: ಖರ್ಗೆ



ಒಂದು ರಾಷ್ಟ್ರ ಒಂದು ಚುನಾವಣೆ ಕುರಿತ ಕೇಂದ್ರ ಸಚಿವ ಸಂಪುಟದ ನಿರ್ಧಾರವನ್ನು ತೀವ್ರವಾಗಿ ವಿರೋಧಿಸಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಇದು ಪ್ರಾಯೋಗಿಕವಲ್ಲ ಮತ್ತು ದೇಶವು ಅದನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಬುಧವಾರ ಹೇಳಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಖರ್ಗೆ, ಇದು ಪ್ರಾಯೋಗಿಕವಲ್ಲ, ಚುನಾವಣೆಗೆ ಯಾವುದೇ ಅಜೆಂಡಾ ಇಲ್ಲದ ಕಾರಣ ಈ ವಿಷಯ ಮುಂದಿಟ್ಟು ಗಮನ ಬೇರೆಡೆ ಸೆಳೆಯುವ ಪ್ರಯತ್ನ ಮಾಡಿದ್ದಾರೆ. ಒನ್ ನೇಷನ್ ಒನ್ ಎಲೆಕ್ಷನ್ ಎನ್ನುವುದು ಸಂವಿಧಾನ, ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದ್ದು, ದೇಶದ ಜನತೆ ಇದನ್ನು ಒಪ್ಪುವುದಿಲ್ಲ ಎಂದು ಹೇಳಿದರು. ಮಾಜಿ ರಾಷ್ಟ್ರಪತಿ ರಾಮ್ ನಾಥ್ ಕೋವಿಂದ್ ನೇತೃತ್ವದ ಸಮಿತಿಯು ದೇಶದಲ್ಲಿ ಒಂದು ರಾಷ್ಟ್ರ ಒಂದು ಚುನಾವಣೆಯ ಶಿಫಾರಸುಗಳನ್ನು ಸಂಪುಟ ಅಂಗೀಕರಿಸಿದೆ.

ಕೋವಿಂದ್ ನೇತೃತ್ವದ ಸಮಿತಿಯಲ್ಲಿ ಗೃಹ ಸಚಿವ ಅಮಿತ್ ಶಾ, ರಾಜ್ಯಸಭೆಯ ಮಾಜಿ ವಿರೋಧ ಪಕ್ಷದ ನಾಯಕ ಗುಲಾಂ ನಬಿ ಆಜಾದ್, ಮಾಜಿ ಹಣಕಾಸು ಆಯೋಗದ ಅಧ್ಯಕ್ಷ ಎನ್.ಕೆ.ಸಿಂಗ್, ಲೋಕಸಭೆಯ ಮಾಜಿ ಕಾರ್ಯದರ್ಶಿ ಸುಭಾಷ್ ಕಶ್ಯಪ್ ಮತ್ತು ಹಿರಿಯ ವಕೀಲ ಹರೀಶ್ ಸಾಳ್ವೆ ಇದ್ದರು.

## ಕೇಂದ್ರದಲ್ಲಿ ಶೀಘ್ರ ಇಂಡಿಯಾ ಸರ್ಕಾರ ರಚನೆ: ಸಿದ್ದರಾಮಯ್ಯ

**ಬೆಂಗಳೂರು, ಸೆ.18:** ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾರತ ಬಣವು ಕೇಂದ್ರದಲ್ಲಿ ಶೀಘ್ರದಲ್ಲೇ ಹೊಸ ಸರ್ಕಾರವನ್ನು ರಚಿಸಲಿದೆ ಎಂದು ಬುಧವಾರ ಹೇಳಿಕೊಂಡಿದ್ದು, ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎ ದಿನಗಳನ್ನು ಎಣಿಸಬಹುದೆಂದು ಸೂಚಿಸುತ್ತದೆ.

ನಾನು ಸಾಮಾನ್ಯವಾಗಿ ಭವಿಷ್ಯವನ್ನು ಊಹಿಸುವವನಲ್ಲ ಎಂದು ಸಿದ್ದರಾಮಯ್ಯ ಹೇಳಿದರು, ಆದರೆ ಪ್ರಸ್ತುತ ರಾಜಕೀಯ ವಾತಾವರಣವನ್ನು ಗಮನಿಸಿದರೆ, ಪ್ರಧಾನಿ ನರೇಂದ್ರ ಮೋದಿ ಅವರ ಪೂರ್ಣ ಐದು ವರ್ಷಗಳ ಅಧಿಕಾರಾವಧಿಯಲ್ಲಿ ಇರುವುದಿಲ್ಲ ಎಂಬುದು ಸ್ಪಷ್ಟವಾಗಿದೆ.

ಜೆಡಿಯು ಮತ್ತು ಚಂದ್ರಬಾಬು ನಾಯ್ಡು ಯಾವುದೇ ಕ್ಷಣದಲ್ಲಿ ಬೆಂಬಲ ಹಿಂಪಡೆಯಬಹುದು, ಆಗ ಏನಾಗುತ್ತದೆ ಎಂದು ಅವರು ತಮ್ಮ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

## ಜಮ್ಮು-ಕಾಶ್ಮೀರದಲ್ಲಿ ದಾಖಲೆಯ ಮತದಾನ

**ಶ್ರೀನಗರ,ಸೆ.18 :** ಬುಧವಾರ (ಸೆಪ್ಟೆಂಬರ್ 18), ಜಮ್ಮು-ಕಾಶ್ಮೀರ ವಿಧಾನಸಭಾ ಚುನಾವಣೆಯ 1 ನೇ ಹಂತದ ಮತದಾನದಲ್ಲಿ ಶೇಕಡಾ 59 ರಷ್ಟು ಮತದಾನವಾಗಿದೆ, ಇದು ಕಳೆದ ಏಳು ಚುನಾವಣೆಗಳಲ್ಲಿ ಅತ್ಯಧಿಕವಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿ ಪಿ.ಕೆ. ಧ್ರುವ ತಿಳಿಸಿದ್ದಾರೆ.

ಆದಾಗ್ಯೂ, ಅಂಕಿಅಂಶಗಳು ತಾತ್ಕಾಲಿಕವಾಗಿದ್ದು, ರಿಮೋಟ್ ಪಾಕೆಟ್‌ಗಳು ಮತ್ತು ಅಂಚೆ ಮತಪತ್ರಗಳಿಂದ ಅಂತಿಮ ವರದಿಗಳನ್ನು ಸ್ವೀಕರಿಸಿದ ನಂತರ ಭಾಗಶಃ ಈ ಪ್ರಮಾಣ ಹೆಚ್ಚಳವಾಗಬಹುದು. ಮೊದಲ ಹಂತದ ಚುನಾವಣೆ ಏಳು ಜಿಲ್ಲೆಗಳ 24 ಸ್ಥಾನಗಳನ್ನು ಒಳಗೊಂಡಿದೆ. ಸಂಜೆ 5 ಗಂಟೆಯವರೆಗೆ ಮತದಾನದ ಪ್ರಮಾಣ 58.19% ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅಧಿಕಾರಿಗಳ ಪ್ರಕಾರ, 24 ಕ್ಷೇತ್ರಗಳಲ್ಲಿ ಅತಿ ಹೆಚ್ಚು ಮತದಾನದ ಶೇಕಡಾವಾರು ಇಂದರ್‌ವಾಲ್‌ನಲ್ಲಿ 80.06% ರಷ್ಟು ದಾಖಲಾಗಿದೆ, ಪಾಡರ್-ನಾಗ್ಸೇನಿ 76.80%, ಕಿಶ್ತ್ವಾರ್ 75.04% ಮತ್ತು ದೋಡಾ ವೆಸ್ಟ್ 74.14% ಮತದಾನವಾಗಿದೆ. ಕಾಶ್ಮೀರ ಕಣಿವೆಯಲ್ಲಿ ಅತಿ ಹೆಚ್ಚು ದಾಖಲಾದ ಮತದಾನದ ಪ್ರಮಾಣ ಅಂದ್ರೆ ಪಹಲ್ಗಾಮ್ ಭಾಗದಲ್ಲಿ . ಇಲ್ಲಿ 67.86% ರಷ್ಟು ಮತದಾನವಾಗಿದೆ, D.H. ಪೋರಾ 65.21%, ಕುಲ್ಗಾಮ್ 59.58%, ಕೊಕರ್ನಾಗ್ 58% ಮತ್ತು ದೂರು 57.90% ರಷ್ಟು ಮತದಾನವಾಗಿದೆ.

### ನವೀಕರಿಸಬಹುದಾದ ಇಂಧನ: 32.45 ಲಕ್ಷ ರೂ. ಜಾಗತಿಕ ಹೂಡಿಕೆ ಸೆಳೆದ ಭಾರತ

## 4ನೇ ಜಾಗತಿಕ ಸಮಾವೇಶಕ್ಕೆ ತೆರೆ

**ನವದೆಹಲಿ, ಸೆ.18:** ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತ ಈಗ 32.45 ಲಕ್ಷ ಕೋಟಿ ಹೂಡಿಕೆಯನ್ನು ಸೆಳೆದಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ಗುಜರಾತ್ ನ ಗಾಂಧಿನಗರದಲ್ಲಿ ಆಯೋಜಿಸಿದ್ದ ನವೀಕರಿಸಬಹುದಾದ ಇಂಧನ ಹೂಡಿಕೆದಾರರ 4ನೇ ಜಾಗತಿಕ ಸಭೆ ಮತ್ತು ಪ್ರದರ್ಶನ ಮುಕ್ತಾಯ ಸಮಾವೇಶದಲ್ಲಿ ಮಾತನಾಡಿ, ಮೂರು ದಿನಗಳ ಈ ಐತಿಹಾಸಿಕ ಸಮಾವೇಶಕ್ಕೆ 40000 ಹೂಡಿಕೆದಾರರು ಸಾಕ್ಷಿಯಾದರು ಎಂದು ಬಣ್ಣಿಸಿದರು. ಹಸಿರು ಇಂಧನ ಕ್ಷೇತ್ರದಲ್ಲಿ ಉಜ್ವಲ ಭವಿಷ್ಯಕ್ಕಾಗಿ ಗಣನೀಯ ಹೂಡಿಕೆ ಮಾಡಲು ಎಲ್ಲಾ ಪಾಲುದಾರರು ಮುಂದಾಗಿದ್ದಾರೆ. 2030ರ ವೇಳೆಗೆ ಶಪತ್ ಪಾತ್ರದ ರೂಪದಲ್ಲಿ 32.45 ಲಕ್ಷ ಕೋಟಿ ಮೌಲ್ಯದ ದಾಖಲೆಯ ಹೂಡಿಕೆಗೆ ವಾಗ್ದಾನವಾಗಿದೆ ಎಂದು ತಿಳಿಸಿದರು. ಡೆವಲಪರ್‌ಗಳು ಹೆಚ್ಚುವರಿ 570 GW, ತಯಾರಕರು ಸೌರ ಘಟಕಗಳಲ್ಲಿ 340 GW, ಸೌರಕೋಶಗಳಲ್ಲಿ 240 GW, ವಿಂಡ್ ಟರ್ಬೈನ್‌ಗಳಲ್ಲಿ 22 ಉಫ ಮತ್ತು ಎಲೆಕ್ಟ್ರೋಲೈಸರ್‌ಗಳಲ್ಲಿ 10 GW ಹೆಚ್ಚುವರಿ ಉತ್ಪಾದನಾ ಸಾಮರ್ಥ್ಯ ತೋರಿದ್ದಾರೆ ಎಂದರು.

**ಆರ್ಥಿಕತೆಗೆ ಪ್ರೇರಕ ಶಕ್ತಿ:** ನವೀಕರಿಸಬಹುದಾದ ಇಂಧನ ಶಕ್ತಿಯು ಆರ್ಥಿಕತೆಗೆ ಪ್ರೇರಕ ಶಕ್ತಿಯಾಗಿದೆ ಎಂದ ಸಚಿವರು, ಭಾರತ ಜಾಗತಿಕವಾಗಿ, ವಿಶೇಷವಾಗಿ ರಿನಿವೆಬಲ್ ಎನರ್ಜಿ ವಲಯದಲ್ಲಿ ನಂಬಿಕೆಗೆ ಬದ್ಧವಾಗಿದೆ



ಎಂದು ಪ್ರತಿಪಾದಿಸಿದರು. ಜಗತ್ತೇ ಭಾರತವನ್ನು ಎದುರು ನೋಡುತ್ತಿದೆ: ಭವಿಷ್ಯದಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆಯ ಹಾದಿಯಲ್ಲಿರುವ ಭಾರತವನ್ನು ಜಗತ್ತೇ ಎದಿರು ನೋಡುತ್ತಿದೆ. ಭಾರತ ಈಗ 500 GW ಹಸಿರು ಇಂಧನ ಉತ್ಪಾದನಾ ಗುರಿಯತ್ತ ಹೆಚ್ಚು ಗಮನಹರಿಸಿದೆ ಎಂದು ಸಚಿವ ಜೋಶಿ ಘೋಷಿಸಿದರು.

**ಗ್ಲೋಬಲ್ ಗ್ರೀನ್ ಎನರ್ಜಿ ಫೈನಾನ್ಸ್:** IREDAಗಿಫ್ಟ್ ಸಿಟಿಯಲ್ಲಿ IREDAಗ್ಲೋಬಲ್ ಗ್ರೀನ್ ಎನರ್ಜಿ ಫೈನಾನ್ಸ್ IFSC Ltd ಎಂಬ ಹೊಸ ಅಂಗಸಂಸ್ಥೆಯನ್ನು ಸಂಯೋಜಿಸಿದೆ ಎಂದು ತಿಳಿಸಿದರು. ಸಮಾರೋಪದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಮಾತನಾಡಿ, ಜಗತ್ತಿನ ಸುಸ್ಥಿರ ಭವಿಷ್ಯಕ್ಕಾಗಿ ಹಸಿರು ಹೈಡ್ರೋಜನ್, ನವೀಕರಿಸಬಹುದಾದ ಇಂಧನದ ಅಗತ್ಯವನ್ನು ಪ್ರತಿಪಾದಿಸಿದರು. ಹಸಿರು ಇಂಧನ ಕ್ಷೇತ್ರವನ್ನು ಮುನ್ನಡೆಸುವಲ್ಲಿ ಭಾರತ ದೃಢವಾದ ಬದ್ಧತೆ ತೋರುತ್ತಿದ್ದು, ಪ್ರಮುಖ ಪಾತ್ರ ವಹಿಸಿದೆ ಎಂದು ಹೇಳಿದರು.

ಗುಜರಾತ್ ರಾಜ್ಯಪಾಲ ಆಚಾರ್ಯ ದೇವವ್ರತ್, ಪಂಜಾಬ್ ರಾಜ್ಯಪಾಲ ಗುಲಾಬ್ ಚಂದ್ ಕಟಾರಿಯಾ, ಗುಜರಾತ್ ಸಿಎಂ ಭೂಪೇಂದ್ರಭಾಯಿ ಪಟೇಲ್ ಹಾಗೂ ಸಮಾವೇಶದ ಪಾಲುದಾರ ರಾಜ್ಯಗಳು ಮತ್ತು ದೇಶಗಳು, ಪ್ರತಿನಿಧಿಗಳು, ಗಣ್ಯರು ಉಪಸ್ಥಿತರಿದ್ದರು

### ಮತ್ತಷ್ಟು ಉತ್ತೇಜನ ನೀಡಬೇಕಿದೆ ಸಚಿವ ಪ್ರಹ್ಲಾದ್ ಜೋಶಿ

ನವೀಕರಿಸಬಹುದಾದ ಇಂಧನ ವಲಯಕ್ಕೆ ಕರ್ನಾಟಕದಲ್ಲಿ ಮತ್ತಷ್ಟು ಉತ್ತೇಜನ ನೀಡಬೇಕಿದ್ದು, ಕೇಂದ್ರ ಸರ್ಕಾರದ ಪಿಎಂ ಸೂರ್ಯಘರ್, ಪಿಎಂ ಕುಸುಮ್ ಯೋಜನೆಗಳು ಪರಿಣಾಮಕಾರಿಯಾಗಿ ರಾಜ್ಯದಲ್ಲಿ ಜಾರಿಗೆ ತರಬೇಕಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಹ್ಲಾದ್ ಜೋಷಿ ಹೇಳಿದ್ದಾರೆ.

ವಿದ್ಯುತ್ ಉತ್ಪಾದನೆ ಹೆಚ್ಚಾಗಲಿದೆ. ಈ ಹೂಡಿಕೆದಾರರ ಸಮಾವೇಶದಿಂದ ರಾಜ್ಯಗಳಿಗೆ ವಿಪುಲ ಅವಕಾಶಗಳು ದೊರೆಯಲಿವೆ. ಕರ್ನಾಟಕ ಸೇರಿ ಎಲ್ಲಾ ರಾಜ್ಯಗಳು ಈ ಸಮ್ಮೇಳನದಲ್ಲಿ ಭಾಗವಹಿಸಿ ಯಶಸ್ವಿಯಾಗಿಸಿವೆ, ಕರ್ನಾಟಕ ಅಧಿಕಾರಿಗಳು ಸಹ ಉತ್ತಮ ರೀತಿಯಲ್ಲಿ ರಾಜ್ಯ ಪ್ರತಿನಿಧಿಸಿದ್ದಾರೆ, ಸಿಕ್ಕ ಅವಕಾಶಗಳನ್ನು ಕರ್ನಾಟಕ ಮತ್ತಷ್ಟು ಬಳಸಿಕೊಂಡರೇ ಇಂಧನ ವಲಯದಲ್ಲಿ ಮತ್ತಷ್ಟು ಸಾಧನೆ ಮಾಡಬಹುದಾಗಿದೆ.

## ವಿಶಾಖಪಟ್ಟಣ ಉಕ್ಕು ಕಾರ್ಖಾನೆ ಉಳಿಸಲು ಪ್ರಯತ್ನ: ಎಚ್.ಡಿ.ಕುಮಾರಸ್ವಾಮಿ

**ನವದೆಹಲಿ, ಸೆ.18:** ಚೀನಾದ ಅಗ್ಗದ ಉಕ್ಕಿನ ಸವಾಲು ಸೇರಿದಂತೆ ದೇಶೀಯ ಉಕ್ಕು ಕ್ಷೇತ್ರದ ರಕ್ಷಣೆಗೆ ಅಗತ್ಯವಾದ ಎಲ್ಲ ಕ್ರಮಗಳನ್ನು ಕೇಂದ್ರ ಸರ್ಕಾರ ಕೈಗೊಳ್ಳಲಿದೆ ಎಂದು ಕೇಂದ್ರದ ಭಾರಿ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಹೇಳಿದರು.

ನವದೆಹಲಿಯಲ್ಲಿ ಬುಧವಾರ ಬೆಳಗ್ಗೆ ದೇಶೀಯ ಮಿಶ್ರಲೋಹ ತಯಾರಕರ ಒಕ್ಕೂಟ (IPAFA) ಹಮ್ಮಿಕೊಂಡಿದ್ದ ದೇಶೀಯ ಮಿಶ್ರಲೋಹ ಉದ್ಯಮ ಸಮ್ಮೇಳನದಲ್ಲಿ ಪಾಲ್ಗೊಂಡ ನಂತರ ಚೀನಾದಿಂದ ಅನಿಯಂತ್ರಿತವಾಗಿ ಆಮದಾಗುತ್ತಿರುವ ಉಕ್ಕಿನ ಬಗ್ಗೆ ಕೇಳಲಾದ ಪ್ರಶ್ನೆಗೆ ಸಚಿವರು ಮೇಲಿನಂತೆ ಉತ್ತರಿಸಿದರು.

ಚೀನಾದ ಉಕ್ಕಿನ ಮೇಲೆ ಹೆಚ್ಚಿನ ಆಮದು ಸುಂಕ ವಿಧಿಸುವ ಬಗ್ಗೆ ಆದಷ್ಟು ಬೇಗ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಚರ್ಚೆ ನಡೆಸುವುದಾಗಿ ಅವರು, ಯಾವುದೇ ಕಾರಣಕ್ಕೂ ದೇಶೀಯ ಉಕ್ಕು ಕ್ಷೇತ್ರವನ್ನು ಅಪಾಯಕ್ಕೆ ಸಿಲುಕಲು ಬಿಡುವುದಿಲ್ಲ ಎಂದು ಹೇಳಿದರು.

ಉಕ್ಕಿನ ಕ್ಷೇತ್ರದ ಜತೆಗೆ ದೇಶೀಯ ದೇಶೀಯ ಮಿಶ್ರಲೋಹ ಉದ್ಯಮವನ್ನು ರಕ್ಷಿಸಬೇಕಾದ ಹೊಣೆ ನಮ್ಮ ಮೇಲಿದೆ. ಸವಾಲುಗಳಿಂದ ಉದ್ಯಮಕ್ಕೆ ರಕ್ಷಣೆ ಕೊಡಬೇಕಿದೆ. ಈ ನಿಟ್ಟಿನಲ್ಲಿ ಉಕ್ಕಿನ ಮೇಲೆ ಕನಿಷ್ಠ ಪ್ರಮಾಣದ ಆಮದು ಸುಂಕ ವಿಧಿಸುವ ಬಗ್ಗೆ ಹಣಕಾಸು ಸಚಿವರ ಜತೆ ಸಮಾಲೋಚನೆ ನಡೆಸಲಾಗುವುದು. ಈ ಬಗ್ಗೆ ಪ್ರಾಥಮಿಕ ಹಂತದ ಚರ್ಚೆಗಳು ನಡೆಯುತ್ತಿವೆ. ವಿತ್ತ ಸಚಿವರನ್ನು ಒಪ್ಪಿಸುವ ಕೆಲಸ ಮಾಡಲಾಗುವುದು ಎಂದು ಅವರು ತಿಳಿಸಿದರು. ಉಕ್ಕು ಕ್ಷೇತ್ರದ ದೇಶದ ಆರ್ಥಿಕತೆಯ ಬೆನ್ನೆಲುಬು. ಅದಕ್ಕೆ ಶಕ್ತಿ ತುಂಬುವ ಕೆಲಸ ಮಾಡಿಯೇ ಮಾಡುತ್ತೇವೆ. ಈ ನಿಟ್ಟಿನಲ್ಲಿ ಸಚಿವಾಲಯದಲ್ಲಿ ನಿರಂತರ ಚರ್ಚೆಗಳು ನಡೆದಿವೆ



ಎಂದರು ಸಚಿವರು.

ವಿಶಾಖಪಟ್ಟಣದ ರಾಷ್ಟ್ರೀಯ ಉಕ್ಕು ಕಾರ್ಖಾನೆ -RNIL(ವೈಜಾಗ್ ಸ್ಟೀಲ್) ಖಾಸಗೀಕರಣ ಮಾಡಬಾರದು ಎಂದು ಒತ್ತಾಯಿಸಿ ಅಲ್ಲಿ ಪ್ರತಿಭಟನೆಗಳು ನಡೆಯುತ್ತಿವೆಯಲ್ಲ ಎಂದು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು; ಈ ವಿಷಯ ನನ್ನ ಗಮನಕ್ಕೂ ಬಂದಿದೆ. ನಮ್ಮ ಮುಂದೆ ಸವಾಲುಗಳು ಇವೆ. ಆ ಕಾರ್ಖಾನೆಯನ್ನು ಸುಸ್ಥಿತಿಗೆ ತಂದು ಉಳಿಸುವ ನಿಟ್ಟಿನಲ್ಲಿ ಸರ್ವ ಪ್ರಯತ್ನ ಮಾಡಲಾಗುತ್ತಿದೆ ಎಂದರು. ಇದಕ್ಕೂ ಮೊದಲು ಸಮ್ಮೇಳನದಲ್ಲಿ ದೇಶೀಯ ಮಿಶ್ರಲೋಹ ಉದ್ಯಮ ಸಮ್ಮೇಳನದಲ್ಲಿ ಉದ್ಘಾಟನಾ ಭಾಷಣ ಮಾಡಿದ ಸಚಿವರು; ಪ್ರಧಾನಮಂತ್ರಿಗಳು ಉಕ್ಕು ಉದ್ಯಮವನ್ನು ಸಶಕ್ತಿಗೊಳಿಸಿ, ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದನೆ ಗುರಿ ನಿಗದಿ ಮಾಡಿದ್ದಾರೆ. ಅವರ ಕನಸು ನನಸು ಮಾಡಲು ನಾವು ಅವಿರತವಾಗಿ ಕೆಲಸ ಮಾಡುತ್ತಿದ್ದೇವೆ ಎಂದರು.

ಭಾರತೀಯ ಮ್ಯಾಂಗನೀಸ್ ಅದಿರುವ ಸಂಸ್ಥೆ (MOIL) ಅಧ್ಯಕ್ಷ, ವ್ಯವಸ್ಥಾಪಕ ನಿರ್ದೇಶಕ ಅಜಿತ್ ಕುಮಾರ್ ಸಕ್ಸೇನಾ ಹಾಗೂ ದೇಶೀಯ ಮಿಶ್ರಲೋಹ ತಯಾರಕರ ಒಕ್ಕೂಟದ ಅಧ್ಯಕ್ಷ ಮನೀಶ್ ಸರಡಾ ಉಪಸ್ಥಿತರಿದ್ದರು.

## ಸೆ.21ರಂದು ಆತಿಶಿ ಪ್ರಮಾಣವಚನ ಸ್ವೀಕಾರ



**ನವದೆಹಲಿ, ಸೆ.18:** ಆಮ್ ಆದ್ಮಿ ಪಕ್ಷದ ನಾಯಕಿ ಮತ್ತು ದೆಹಲಿ ಸಚಿವೆ ಆತಿಶಿ ಅವರು ಸೆಪ್ಟೆಂಬರ್ 21ರಂದು ದೆಹಲಿ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಮೂಲಗಳ ಪ್ರಕಾರ, ಹೊಸ ಸರ್ಕಾರ ರಚನೆಗಾಗಿ ಆತಿಶಿ ಅವರು ಲೆಫ್ಟಿನೆಂಟ್ ಗವರ್ನರ್‌ಗೆ ಬರೆದ ಪತ್ರದಲ್ಲಿ ಪ್ರಮಾಣ ವಚನ ಸಮಾರಂಭಕ್ಕೆ ಯಾವುದೇ ಆದ್ಯತೆಯ ದಿನಾಂಕವನ್ನು ನಮೂದಿಸಿಲ್ಲ. ತಮ್ಮ ಸಂಪುಟ ಸಚಿವರ ಹೆಸರನ್ನು ನಂತರ ಸಲ್ಲಿಸುವುದಾಗಿ ಅವರು ಹೇಳಿದ್ದಾರೆ. ಹೀಗಾಗಿ, ಆತಿಶಿ ಒಬ್ಬರೇ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಹೆಚ್ಚಾಗಿದೆ. ವಿ.ಕೆ.ಸಕ್ಸೇನಾ ಅವರು ಅರವಿಂದ್ ಕೇಜ್ರಿವಾಲ್ ಅವರ ರಾಜೀನಾಮೆಯ ನಂತರ ವಿ.ಕೆ. ಸಕ್ಸೇನಾ ನಿಯೋಜಿತ ಮುಖ್ಯಮಂತ್ರಿ ಆತಿಶಿ ಅವರ ಪ್ರಮಾಣ ವಚನಸ್ವೀಕಾರ ಸಮಾರಂಭಕ್ಕೆ ಸೆಪ್ಟೆಂಬರ್ 21ರಂದು ದಿನಾಂಕವನ್ನು ಪ್ರಸ್ತಾಪಿಸಿದ್ದಾರೆ. ಅರವಿಂದ್ ಕೇಜ್ರಿವಾಲ್ ಅವರ ರಾಜೀನಾಮೆಪತ್ರವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ರವಾನಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಎಎಪಿ ಶಾಸಕಾಂಗ ಪಕ್ಷದ ನಾಯಕಿಯಾಗಿ ಅವಿರೋಧವಾಗಿ ಆಯ್ಕೆಯಾದ ಆತಿಶಿ ದೆಹಲಿಯ ಮೂರನೇ ಮಹಿಳಾ ಮುಖ್ಯಮಂತ್ರಿಯಾಗಲಿದ್ದಾರೆ. ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಗೆ ಮುನ್ನ ಕಾರ್ಯತಂತ್ರದ ಕ್ರಮದಲ್ಲಿ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ನೀಡಿದ ನಂತರ ಅವರು ನಾಯಕತ್ವವನ್ನು ವಹಿಸಿಕೊಂಡರು. ಅರವಿಂದ್ ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯಾ ಅವರ ಆಪ್ತ ಮಿತ್ರರಾದ ಆತಿಶಿ ಅವರು ಅರವಿಂದ್ ಕೇಜ್ರಿವಾಲ್ ಅವರನ್ನು ಮತ್ತೆ ಸಿಎಂ ಆಗಿ ತರಲು ಪಣ ತೊಟ್ಟಿದ್ದಾರೆ. ಸೆಪ್ಟೆಂಬರ್ 26-27ರವರೆಗೆ ಅಧಿವೇಶನ ನಡೆಯಲಿದ್ದು, ದೆಹಲಿ ವಿಧಾನಸಭೆಯಲ್ಲಿ ಅವರು ತಮ್ಮ ಸರ್ಕಾರದ ಬಹುಮತವನ್ನು ಸಾಬೀತುಪಡಿಸಬೇಕಾಗಿದೆ.

### ರಾಜ್ಯದಲ್ಲಿ ಮಾದಕದ್ರವ್ಯ ಜಾಲದ ಬೇರುಗಳನ್ನೇ ಕತ್ತರಿಸಲು ತೀರ್ಮಾನ- ಸಿದ್ದರಾಮಯ್ಯ

## ಗೃಹ ಸಚಿವರ ನೇತೃತ್ವದಲ್ಲಿ ಕಾರ್ಯಪಡೆ ರಚನೆ: ಮುಖ್ಯಮಂತ್ರಿ

**ಬೆಂಗಳೂರು,ಸೆ.18:** ರಾಜ್ಯದಲ್ಲಿ ನಡೆಯುತ್ತಿರುವ ಡ್ರಗ್ಸ್ ಮಾದಕದ್ರವ್ಯದಂಧೆಗೆ ಅಂಕುಶ ಹಾಕುವ ನಿಟ್ಟಿನಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ನೇತೃತ್ವದಲ್ಲಿ ಕಾರ್ಯಪಡೆಯನ್ನು ರಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ರಾಜ್ಯದಲ್ಲಿನ ಡ್ರಗ್ಸ್ ಜಾಲದ ಬೇರುಗಳನ್ನು ಕತ್ತರಿಸಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಮಾದಕವಸ್ತುಗಳ ಹಾವಳಿ ಮತ್ತು ನಿಯಂತ್ರಣ ಕುರಿತಂತೆ ಸಭೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡ್ರಗ್ಸ್ ದಂಧೆಗೆ ಕಡಿವಾಣ ಹಾಕಲು ಮೇಲಿಂದ ಮೇಲೆ ಸಭೆಗಳನ್ನು ನಡೆಸಿ ಅಗತ್ಯ ಕಾರ್ಯತಂತ್ರ ರೂಪಿಸಲು ಸೂಚನೆ ನೀಡಲಾಗಿದೆ. ಗೃಹ ಸಚಿವರ ನೇತೃತ್ವದಲ್ಲಿ ರಚಿಸಲಾಗಿರುವ ಕಾರ್ಯಪಡೆಯಲ್ಲಿ ಶಿಕ್ಷಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಇರಲಿದ್ದಾರೆ ಎಂದು ಹೇಳಿದರು. ಠಾಣಾಧಿಕಾರಿಗಳಿಗೆ ಗೊತ್ತಿಲ್ಲದೆ ಡ್ರಗ್ಸ್ ದಂಧೆ ನಡೆಯಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಡ್ರಗ್ಸ್ ದಂಧೆ ನಡೆದರೆ ಠಾಣಾಧಿಕಾರಿ ಡಿವೈಎಸ್ಪಿ, ಎಸಿಪಿ ಮತ್ತು ಎಸ್ಪಿಗಳನ್ನು ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಡ್ರಗ್ಸ್ ದಂಧೆ ಹತ್ತಿಕ್ಕಲು ಅಗತ್ಯ ಬಿದ್ದರೆ ಹೊಸ ಕಾನೂನು ಜಾರಿಗೆ ತರುತ್ತೇವೆ.ಹೀಗಿರುವ ಕಾನೂನನ್ನು ಇನ್ನಷ್ಟು ಬಿಗಿಗೊಳಿಸುತ್ತೇವೆ.ಪೆಡ್ಲರ್‌ಗಳಿಗೆ ಜೀವಾವಧಿ ಶಿಕ್ಷೆಯವರೆಗೂ ಕಠಿಣ ಶಿಕ್ಷೆ ವಿಧಿಸಲು ಕಾನೂನಿಗೆ ತಿದ್ದುಪಡಿಗೆ ಕ್ರಮಕೈಗೊಳ್ಳಲಾಗುವುದು



ಎಂದರು. ಡ್ರಗ್ಸ್ ಹಾವಳಿ ತಡೆಯಲು ಕ್ಷಿಪ್ರ ಮತ್ತು ತೀಕ್ಷ್ಣಕ್ರಮ ಕೈಗೊಳ್ಳುತ್ತೇವೆ.

ಈ ನಿಟ್ಟಿನಲ್ಲಿ ಎನ್‌ಸಿಟಿ, ಎನ್‌ಜಿಓಗಳನ್ನು ಬಲಗೊಳಿಸುವುದರ ಜತೆಗೆ ಪುನರ್ವಸತಿ ಕೇಂದ್ರಗಳನ್ನು ಹೆಚ್ಚಿಸಲು ಕ್ರಮಕೈಗೊಳ್ಳುತ್ತೇವೆ ಎಂದು ಹೇಳಿದರು. ಡ್ರಗ್ಸ್ ಸೇವನೆಯಿಂದಾಗಿ ವಿದ್ಯಾರ್ಥಿ, ಯುವ ಜನರ ಮೇಲೆ ಕೆಟ್ಟ ಪರಿಣಾಮ ಬೀರುತ್ತಿರುವುದನ್ನು ತಡೆಗಟ್ಟಲು ಕ್ರಮ ತೆಗೆದುಕೊಳ್ಳಲಾಗಿದೆ. ಡ್ರಗ್ಸ್ ಸೇವಿಸಿ ಅಪರಾಧ ಕೃತ್ಯಗಳಲ್ಲಿ ತೊಡಗಿಸಿಕೊಳ್ಳುವ ಪ್ರಕರಣಗಳಿಗೂ ಅಂಕುಶ ಹಾಕುವುದಾಗಿ ಹೇಳಿದರು. ಡ್ರಗ್ಸ್ ದಂಧೆ ತಡೆಗೆ ಪೊಲೀಸರಿಗೆ ಮುಕ್ತ ಅವಕಾಶ ಕೊಡುತ್ತೇವೆ. ಒಂದು ವೇಳೆ ಡ್ರಗ್ ದಂಧೆಗೆ ಕಡಿವಾನ ಹಾಕಲು ವಿಫಲವಾದರೆ ಅವರನ್ನೇ ಹೊಣೆಗಾರರನ್ನಾಗಿ ಮಾಡುತ್ತೇವೆ ಎಂದು ಎಚ್ಚರಿಸಿದರು. ಗೃಹ, ಆರೋಗ್ಯ, ವೈದ್ಯಕೀಯ ಶಿಕ್ಷಣ, ಗ್ರಾಮೀಣಾಭಿವೃದ್ಧಿ, ಸಮಾಜ ಕಲ್ಯಾಣ ಇಲಾಖೆ ಸೇರಿ ಹಲವು ಇಲಾಖೆಗಳ ಸಚಿವರು, ಅಧಿಕಾರಿಗಳ ಜತೆ ಉನ್ನತಮಟ್ಟದ ಸಭೆ ನಡೆಸಿ ಹಲವು ಕ್ಷಿಪ್ರ ತೀರ್ಮಾನ ಕೈಗೊಳ್ಳಲಾಗಿದೆ. ವಿದ್ಯಾರ್ಥಿ, ಯುವ ಜನರ, ಪೋಷಕರ ಸಹಭಾಗಿತ್ವದಲ್ಲಿ ಮಾಹಿತಿ ಸಂಗ್ರಹಿಸಿ ಡ್ರಗ್ಸ್ ಹಾವಳಿ ತಡೆಗೆ ಗಂಭೀರಚರ್ಚೆ ನಡೆಸಿದ್ದೇವೆ.ಈಗಾಗಲೇ ಇರುವ ರಾಜ್ಯಮಟ್ಟದ ಸಮಿತಿಯಿಂದ ಮಾಹಿತಿ ಅಭಿಪ್ರಾಯ ಸಂಗ್ರಹಿಸಿದ್ದೇವೆ ಎಂದರು.

ಬೆಂಗಳೂರಿನ ಪೂರ್ವ ಭಾಗದಲ್ಲಿ ಡ್ರಗ್ಸ್ ಹಾವಳಿ ತೀವ್ರವಾಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಇದಕ್ಕೆ ಲಗಾಮು ಹಾಕಲು ನಿರ್ಣಯ ಮಾಡಿದ್ದೇವೆ ಎಂದ ಅವರು, ಒಡಿಶಾ, ಆಂಧ್ರ, ಉತ್ತರ ಪ್ರದೇಶ ಸೇರಿದಂತೆ ಹಲವು ರಾಜ್ಯಗಳಿಂದ ಮಾದಕವಸ್ತು ರಾಜ್ಯಕ್ಕೆ ಸರಬರಾಜು ಆಗುತ್ತಿದೆ. ಇದನ್ನು ತಡೆಗಟ್ಟಲು ಹೊಸ ಕಾರ್ಯತಂತ್ರ ರೂಪಿಸಿದ್ದೇವೆ ಎಂದು ತಿಳಿಸಿದರು.ಈ ಸಭೆಯಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಗೃಹ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಉಮಾಶಂಕರ್, ಡಿಜಿಪಿ ಅಲೋಕ್ ಮೋಹನ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಸರ್ಕಾರವು ಮಾದಕವಸ್ತುಗಳ ಹಾವಳಿಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಇದರ ವಿರುದ್ಧದ ಕಾಯ್ದೆಗಳಿಗೆ ಸೂಕ್ತ ತಿದ್ದುಪಡಿ ತಂದು ಕಾನೂನು ಬಲ ಪಡಿಸುವ ಕುರಿತು ಪರಿಶೀಲಿಸುವಂತೆ ಸೂಚಿಸಲಾಗಿದೆ. ಮಾದಕವಸ್ತುಗಳ ಪೆಡ್ಲರ್‌ಗಳಿಗೆ ಕಠಿಣ ಶಿಕ್ಷೆ ವಿಧಿಸಲು ಅವಕಾಶ ಸೇರಿದಂತೆ ಕಾಯ್ದೆಯನ್ನು ಇನ್ನಷ್ಟು ಬಲಪಡಿಸಲು ನಿರ್ಧಾರ. ಕಾನೂನು ಕಾರ್ಯದರ್ಶಿ ಮತ್ತು ಅಡ್ವೋಕೇಟ್ ಜನರಲ್ ಅವರೊಂದಿಗೆ ಚರ್ಚಿಸಿ ಈ ಕುರಿತು ಅಂತಿಮ ರೂಪುರೇಷೆ ನಿಗದಿ ಪಡಿಸುವಂತೆ ಸೂಚಿಸಿದರು.**

# 18,626 ಪುಟಗಳ ವರದಿಯಲ್ಲಿ ಒಂದು ರಾಷ್ಟ್ರ-ಒಂದು ಚುನಾವಣೆಗಾಗಿ ಸಂವಿಧಾನಕ್ಕೆ ತಿದ್ದುಪಡಿಗಳ ಶಿಫಾರಸು

**ನವದೆಹಲಿ, ಸೆ.18–** ಒಂದು ದೇಶ-ಒಂದು ಚುನಾವಣೆಗಾಗಿ ವರದಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದ್ದು,. ಮಾಜಿ ರಾಷ್ಟ್ರಪತಿ ರಾಮ್ ನಾಥ್ ಕೋವಿಂದ್ ನೇತೃತ್ವದ ಉನ್ನತ ಮಟ್ಟದ ಸಮಿತಿಯು ತನ್ನ 18,626 ಪುಟಗಳ ವರದಿಯಲ್ಲಿ ಒಂದು ರಾಷ್ಟ್ರ-ಒಂದು ಚುನಾವಣೆಗಾಗಿ ಸಂವಿಧಾನಕ್ಕೆ ತಿದ್ದುಪಡಿಗಳನ್ನ ಶಿಫಾರಸು ಮಾಡಿದೆ. ವರದಿಯಲ್ಲಿ, ಸಮಿತಿಯು ಐದು ಲೇಖನಗಳನ್ನ ಉಲ್ಲೇಖಿಸಿದೆ. ದೇಶದಲ್ಲಿ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಗಳು ಏಕಕಾಲದಲ್ಲಿ ನಡೆಯಬೇಕಾದರೆ, ಈ ಅನುಚ್ಛೇದಗಳನ್ನ ತಿದ್ದುಪಡಿ ಮಾಡಬೇಕಾಗುತ್ತದೆ ಎಂದು ಅದು ಹೇಳುತ್ತದೆ. ಸಂವಿಧಾನದ ಈ ಅನುಚ್ಛೇದಗಳನ್ನ ಏಕೆ ಬದಲಾಯಿಸಬೇಕು ಮತ್ತು ಯಾವ ಬದಲಾವಣೆಗಳನ್ನ ಪ್ರಸ್ತಾಪಿಸಲಾಗಿದೆ ಎಂಬುದನ್ನ ಸಹ ಇದು ವಿವರಿಸುತ್ತದೆ.



**ಅನುಚ್ಛೇದ 83:** ಸಂವಿಧಾನದ ಈ ಅನುಚ್ಛೇದವು ಲೋಕಸಭೆ ಮತ್ತು ರಾಜ್ಯಸಭೆ ಎರಡಕ್ಕೂ ಅವಕಾಶ ನೀಡುತ್ತದೆ. ಲೋಕಸಭೆಯ ನಿಯಮವೆಂದರೆ ಅದರ ಅವಧಿ ಐದು ವರ್ಷಗಳು. ಅಗತ್ಯವಿದ್ದರೆ ಈ ಅವಧಿಯನ್ನ ಒಂದು ವರ್ಷ ವಿಸ್ತರಿಸಬಹುದು ಎಂದು ಅನುಚ್ಛೇದ 83 (2) ಒದಗಿಸಿದೆ. ಅನುಚ್ಛೇದ 83 ರಾಜ್ಯಸಭೆಯನ್ನ ವಿಸರ್ಜನೆಯಿಂದ ರಕ್ಷಿಸುತ್ತದೆ, ರಾಜ್ಯಸಭೆಯನ್ನ ಎಂದಿಗೂ ವಿಸರ್ಜಿಸಲಾಗುವುದಿಲ್ಲ, ಸಾಧ್ಯವಾದಷ್ಟು ಅದರ ಮೂರನೇ ಒಂದು ಭಾಗದಷ್ಟು ಸದಸ್ಯರು ಪ್ರತಿ ಎರಡನೇ ವರ್ಷಕ್ಕೆ ನಿವೃತ್ತರಾಗುತ್ತಾರೆ ಮತ್ತು ಅವರ ಸ್ಥಾನದಲ್ಲಿ ಹೊಸ ಸದಸ್ಯರನ್ನ ಆಯ್ಕೆ ಮಾಡಲಾಗುತ್ತದೆ.

ಅನುಚ್ಛೇದ 85 : ಇದು ಲೋಕಸಭೆಯನ್ನ ವಿಸರ್ಜಿಸುವ ಹಕ್ಕನ್ನ ರಾಷ್ಟ್ರಪತಿಗೆ ನೀಡುತ್ತದೆ, ಈ ಅನುಚ್ಛೇದದಲ್ಲಿ ರಾಷ್ಟ್ರಪತಿಗಳು ಸದನದ ಅಧಿವೇಶನವನ್ನು ಕರೆಯುವ ಹಕ್ಕನ್ನು ಹೊಂದಿರುತ್ತಾರೆ. ಆದಾಗ್ಯೂ, ಎರಡು ಅಧಿವೇಶನಗಳ ನಡುವೆ ಆರು ತಿಂಗಳಿಗಿಂತ ಹೆಚ್ಚು ಅಂತರವಿರುವುದಿಲ್ಲ.

ಅನುಚ್ಛೇದ 172 : ರಾಜ್ಯಗಳ ವಿಧಾನಸಭೆಗೆ ನಿಬಂಧನೆಗಳನ್ನ ಮಾಡಲಾಗಿದೆ. ಮೊದಲ ಅಧಿವೇಶನದಿಂದ ಮುಂದಿನ ಐದು ವರ್ಷಗಳವರೆಗೆ ರಾಜ್ಯ ವಿಧಾನಸಭೆಗಳು ಮುಂದುವರಿಯುತ್ತವೆ ಎಂದು ಅದು ಹೇಳುತ್ತದೆ. ತುರ್ತು ಪರಿಸ್ಥಿತಿ ಇದ್ದರೆ, ದೇಶದ ಸಂಸತ್ತು ವಿಧಾನಸಭೆಯ ಅವಧಿಯನ್ನ ಒಂದು ವರ್ಷ ವಿಸ್ತರಿಸಬಹುದು ಎಂಬ ನಿಬಂಧನೆಯೂ ಇದರಲ್ಲಿ ಇದೆ. ಅದಕ್ಕಿಂತ ಹೆಚ್ಚೇನೂ ಇಲ್ಲ.

**ಅನುಚ್ಛೇದ 174 :** ಸಂವಿಧಾನದ 85ನೇ ವಿಧಿಯು ಸಂಸತ್ತಿಗೆ ಸಂಬಂಧಿಸಿದಂತೆ ರಾಷ್ಟ್ರಪತಿಗಳಿಗೆ ಅಧಿಕಾರವನ್ನು ನೀಡುತ್ತದೆ, ಅದೇ ರೀತಿ ಅನುಚ್ಛೇದ 174 ರಾಜ್ಯಪಾಲರಿಗೆ ವಿಧಾನಸಭೆಯನ್ನ ವಿಸರ್ಜಿಸಲು ಅಥವಾ ಅದರ ಅಧಿವೇಶನವನ್ನು ಕರೆಯಲು ಅಧಿಕಾರ ನೀಡುತ್ತದೆ.

**ಅನುಚ್ಛೇದ 327 :** ಈ ಅನುಚ್ಛೇದವು ಕಾಲಕಾಲಕ್ಕೆ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಒದಗಿಸುತ್ತದೆ. ಇದು ಮತದಾರರ ಪಟ್ಟಿಗಳ ತಯಾರಿಕೆ, ಕ್ಷೇತ್ರಗಳ ಮರುವಿಂಗಡಣೆ ಮತ್ತು ಸದನದ ರಚನೆಯನ್ನ ಖಚಿತಪಡಿಸಿಕೊಳ್ಳುವ ಅಧಿಕಾರವನ್ನ ಹೊಂದಿದೆ. ತಿದ್ದುಪಡಿ ಏನು ಎಂದು ಸಮಿತಿಯು ರಾಷ್ಟ್ರಪತಿಗಳಿಗೆ ಸಲ್ಲಿಸಿದ ವರದಿಯಲ್ಲಿ ತಿಳಿಸಿದೆ. ವರದಿಯ ಪ್ರಕಾರ, ಈ ಬದಲಾವಣೆಯ ಉದ್ದೇಶ ಲೋಕಸಭೆ ಮತ್ತು ರಾಜ್ಯ ಶಾಸಕಾಂಗಗಳ ಅವಧಿಯನ್ನು ಬದಲಾಯಿಸುವುದು ಮಾತ್ರ. ಈ ತಿದ್ದುಪಡಿಯು ಸದನದ ಅವಧಿಯನ್ನು ಐದು ವರ್ಷಗಳಿಗಿಂತ ಹೆಚ್ಚು ವಿಸ್ತರಿಸುವ ಉದ್ದೇಶವನ್ನು ಹೊಂದಿಲ್ಲ ಎಂದು ಅದು ಸ್ಪಷ್ಟಪಡಿಸಿದೆ. ಅನುಚ್ಛೇದ 83, ಅನುಚ್ಛೇದ 85, ಅನುಚ್ಛೇದ 172 ಮತ್ತು ಅನುಚ್ಛೇದ 174 ಅನ್ನು ತಿದ್ದುಪಡಿ ಮಾಡುವ ಉದ್ದೇಶವೆಂದರೆ ಲೋಕಸಭೆ ಅಥವಾ ವಿಧಾನಸಭೆಯನ್ನು ವಿಸರ್ಜಿಸಿ ಮಧ್ಯಂತರ ಚುನಾವಣೆಗಳು ನಡೆದರೆ, ಎರಡನೇ ಚುನಾಯಿತ ಸರ್ಕಾರವು ಐದು ವರ್ಷಗಳು ಪೂರ್ಣಗೊಳ್ಳುವ ಮೊದಲು ಉಳಿದಿರುವ ಸಮಯದವರೆಗೆ ಮಾತ್ರ ಕಾರ್ಯನಿರ್ವಹಿಸುತ್ತದೆ ಎಂದು ಖಚಿತಪಡಿಸಿಕೊಳ್ಳುವುದು. ಅಂದರೆ, ಎರಡೂವರೆ ವರ್ಷಗಳ ನಂತರ ಸರ್ಕಾರವನ್ನ ವಿಸರ್ಜಿಸಿದರೆ, ಮುಂದಿನ ಚುನಾಯಿತ ಸರ್ಕಾರವು ಎರಡೂವರೆ ವರ್ಷಗಳವರೆಗೆ ಮಾತ್ರ ಕಾರ್ಯನಿರ್ವಹಿಸುತ್ತದೆ. ಐದು ವರ್ಷಗಳು ಪೂರ್ಣಗೊಂಡ ನಂತರ, ಏಕಕಾಲದಲ್ಲಿ ಚುನಾವಣೆಗಳು ನಡೆಯುತ್ತವೆ. ಕ್ಷೇತ್ರಗಳ ಮರುವಿಂಗಡಣೆ ನಂತರ 'ಏಕಕಾಲಿಕ ಚುನಾವಣೆ' ಎಂಬ ಪದ ಸೇರಿಸಲು ಅನುಚ್ಛೇದ 327ನ್ನ ತಿದ್ದುಪಡಿ ಮಾಡಲಾಗುವುದು. ಈ ತಿದ್ದುಪಡಿಗಳನ್ನ ಏಕೆ ಬದಲಾಯಿಸಬೇಕು ಎಂದು ಒನ್ ನೇಷನ್-ಒನ್ ಎಲೆಕ್ಷನ್'ನ ಉನ್ನತ ಮಟ್ಟದ ಸಮಿತಿಯು ವರದಿಯಲ್ಲಿ ವಿವರಿಸಿದೆ, ಪ್ರತಿ ವರ್ಷ ನಾಲ್ಕರಿಂದ ಐದು ರಾಜ್ಯಗಳಲ್ಲಿ ವಿಧಾನಸಭಾ ಚುನಾವಣೆಗಳು ನಡೆಯುತ್ತವೆ ಎಂದು ವರದಿ ಹೇಳುತ್ತದೆ.

ಅಂತಹ ಪರಿಸ್ಥಿತಿಯಲ್ಲಿ, ರಾಜಕೀಯ ಪಕ್ಷಗಳು, ಶಾಸಕರು, ಕೇಂದ್ರ ಸರ್ಕಾರ ಮತ್ತು ನಾಯಕರು, ಸಂಪನ್ಮೂಲಗಳು ಎಲ್ಲರೂ ಚುನಾವಣೆಯಲ್ಲಿ ಭಾಗಿಯಾಗಿದ್ದಾರೆ. ಇದು ಕಾರ್ಯನಿರ್ವಹಣೆಯನ್ನು ಅಡ್ಡಿಪಡಿಸುತ್ತದೆ ಮತ್ತು ವೆಚ್ಚವನ್ನು ಹೆಚ್ಚಿಸುತ್ತದೆ. ಇದಕ್ಕೂ ಮೊದಲು 2018 ರಲ್ಲಿ, ಕಾನೂನು ಆಯೋಗದ ವರದಿಯು ಒಂದು ರಾಷ್ಟ್ರ ಒಂದು ಚುನಾವಣೆಗಾಗಿ ಈ ಅನುಚ್ಛೇದಗಳಲ್ಲಿ ಬದಲಾವಣೆಗಳನ್ನ ಶಿಫಾರಸು ಮಾಡಿತ್ತು.ಮೊದಲು ಚುನಾವಣೆಗಳು ಒಟ್ಟಿಗೆ ನಡೆಯುತ್ತಿದ್ದವು, ಈ ಹಿಂದೆ ವಿಧಾನಸಭಾ ಚುನಾವಣೆಗಳು ಲೋಕಸಭೆಯೊಂದಿಗೆ ಏಕಕಾಲದಲ್ಲಿ ನಡೆಯುತ್ತಿದ್ದವು, 1


951–52 ರಲ್ಲಿ ಏಕಕಾಲದಲ್ಲಿ ಚುನಾವಣೆಗಳು ನಡೆದವು, 1955ರಲ್ಲಿ ಮೊದಲ ಬಾರಿಗೆ ಆಂಧ್ರಪ್ರದೇಶದಲ್ಲಿ ಮಾತ್ರ ಒಂದೇ ಚುನಾವಣೆ ಇತ್ತು ಎಂದು ವರದಿಯಲ್ಲಿ ವರದಿಯಾಗಿದೆ. 1957ರಲ್ಲಿ ಏಕಕಾಲದಲ್ಲಿ ಚುನಾವಣೆಗಳು ನಡೆದವು. 1960ರಲ್ಲಿ, ತುರ್ತು ಪರಿಸ್ಥಿತಿ ಹೇರಿಕೆಯಿಂದ ಕೇರಳ ವಿಧಾನಸಭೆಯನ್ನು ವಿಸರ್ಜಿಸಲಾಯಿತು ಮತ್ತು ಅದು ಚುನಾವಣಾ ಚಕ್ರದೊಂದಿಗೆ ಹೊಂದಾಣಿಕೆಯಾಗಲಿಲ್ಲ. ಇದರ ನಂತರ, 1964ರಲ್ಲಿ ನಾಗಾಲ್ಯಾಂಡ್ ರೂಪುಗೊಂಡಿತು ಮತ್ತು ಪುದುಚೇರಿ ಕೇಂದ್ರಾಡಳಿತ ಪ್ರದೇಶವಾಯಿತು. ಅವರ ಚುನಾವಣೆಗಳು 1964ರಲ್ಲಿ ನಡೆದವು ಮತ್ತು ಅವರೂ ಸಹ ಚುನಾವಣಾ ಚಕ್ರದಿಂದ ಹೊರಗುಳಿದಿದ್ದರು. ಇದರ ನಂತರ, ಕೆಲವು ವಿಧಾನಸಭೆಗಳನ್ನ ಅಕಾಲಿಕವಾಗಿ ವಿಸರ್ಜಿಸಲಾಯಿತು ಮತ್ತು ಪ್ರತ್ಯೇಕ ಚುನಾವಣೆಗಳು ನಡೆದವು. 1970ರಲ್ಲಿ, ಲೋಕಸಭೆಯನ್ನು ಅಕಾಲಿಕವಾಗಿ ವಿಸರ್ಜಿಸಲಾಯಿತು ಮತ್ತು 1971 ರಲ್ಲಿ ಹೊಸ ಚುನಾವಣೆಗಳು ನಡೆದವು, ಇದು ದೇಶದಲ್ಲಿ ಪ್ರತ್ಯೇಕ ಚುನಾವಣೆಗಳಿಗೆ ಅಡಿಪಾಯ ಹಾಕಿತು.



ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರ ಗಾಂಧಿನಗರದಲ್ಲಿ ಪ್ರಧಾನಮಂತ್ರಿ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು.

# ನವೀಕರಿಸಬಹುದಾದ ಇಂಧನ ವಲಯದಲ್ಲಿ ಆಸಕ್ತಿ ಒಂದು ಆಯ್ಕೆಯಲ್ಲ, ಅನಿವಾರ್ಯ-ಉಪರಾಷ್ಟ್ರಪತಿ ಜಗದೀಪ್ ಧನಕರ್

**ಗಾಂಧಿನಗರ, ಸೆ.18–** ಹವಾಮಾನ ವೈಪರೀತ್ಯದ ಸಮಸ್ಯೆ ಭೂಮಿಯ ಅಸ್ತಿತ್ವಕ್ಕೆ ಧಕ್ಕೆ ತಂದಿದ್ದು, ಇದನ್ನು ಗಂಭೀರವಾಗಿ ಪರಿಗಣಿಸದಿದ್ದಲ್ಲಿ ಅದರ ಪರಿಣಾಮ ಎದುರಿಸ ಬೇಕಾಗುತ್ತದೆ ಹೀಗಾಗೀ ನವೀಕರಿಸಬಹುದಾದ ಇಂಧನದಲ್ಲಿ ಆಸಕ್ತಿ ತೋರಿಸುವುದು ಒಂದು ಆಯ್ಕೆಯಲ್ಲ ಅದು ಪ್ರಪಂಚದ ಅನಿವಾರ್ಯ ವಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದರು.



ನಾಲ್ಕನೇ ಜಾಗತಿಕ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆಯ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಭೂಮಿಯನ್ನು ಉಳಿಸಲು, ನವೀಕರಿಸ ಬಹುದಾದ ಇಂಧನದಲ್ಲಿ ಹೂಡಿಕೆ ಮಾಡದೆ ನಮಗೆ ಬೇರೆ ದಾರಿಯಿಲ್ಲ ಮತ್ತು ಹವಾಮಾನ ಬದಲಾವಣೆಯ ಬೆದರಿಕೆಯನ್ನು ಎದುರಿಸಲು ನಾವು ಹಗಲಿರುಳು ಶ್ರಮಿಸಬೇಕಾಗಿದೆ ಎಂದು ಹೇಳಿದರು.

ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತ ವಿಶ್ವಕ್ಕೆ ಮುಂಚೂಣಿಯಲ್ಲಿದೆ, ಹವಾಮಾನ ಬದಲಾವಣೆಯ ಸಮಸ್ಯೆಯನ್ನು ಎದುರಿಸಲು, ಪ್ರತಿಯೊಬ್ಬರೂ ತಮ್ಮ ಪಾತ್ರವನ್ನು ನಿರ್ವಹಿಸಬೇಕು. ಭಾರತದ ಉಪಕ್ರಮದ ಮೇಲೆ ಸೌರ ಒಕ್ಕೂಟವನ್ನು ರಚಿಸಲಾಯಿತು. ಜಗತ್ತನ್ನು ಉಳಿಸಲು ನಾವು ಬದ್ಧರಾಗಿದ್ದೇವೆ. ಇದಕ್ಕಾಗಿ ಜಗತ್ತಿನ ಎಲ್ಲಾ ಏಜೆನ್ಸಿಗಳು ಒಟ್ಟಾಗಿ ಕೆಲಸ ಮಾಡಬೇಕಾಗಿದೆ. ಪ್ರತಿಯೊಬ್ಬರೂ ತಮ್ಮ ಪಾತ್ರವನ್ನು ನಿರ್ವಹಿಸಬೇಕು. ನಾವು ಶಕ್ತಿಯನ್ನು ಬಳಸುವಾಗ, ನಾವು ಅದನ್ನು ನಮ್ಮ ಅಗತ್ಯಕ್ಕೆ ಮಾತ್ರ ಬಳಸಬೇಕು. ಭಾರತದಲ್ಲಿ ಆಗುತ್ತಿರುವ ಅಭಿವೃದ್ಧಿಯು ಇಡೀ ಜಗತ್ತಿಗೆ ಪ್ರಯೋಜನವನ್ನು ನೀಡುತ್ತದೆ ಎಂದರು.

ಈ ಸಂದರ್ಭದಲ್ಲಿ ನವೀಕರಿಸ ಬಹುದಾದ ಇಂಧನ ಸಚಿವ ಪ್ರಹ್ಲಾದ ಜೋಶಿ ಮಾತನಾಡಿ, ಇಂದು ಇಡೀ ವಿಶ್ವವೇ ನವೀಕರಿಸ ಬಹುದಾದ ಇಂಧನಕ್ಕಾಗಿ ಭಾರತದತ್ತ ನೋಡುತ್ತಿದೆ. ಇದಕ್ಕೆ ಕಾರಣ ಪ್ರಧಾನಿ ನರೇಂದ್ರ ಮೋದಿ ಅವರು ಜಗತ್ತಿನ ಮುಂದಿಟ್ಟಿರುವ ದೂರದೃಷ್ಟಿ. ಗುಜರಾತಿನ ಮುಖ್ಯಮಂತ್ರಿಯಾಗಿ ಮತ್ತು ದೇಶದ ಪ್ರಧಾನಿಯಾಗಿ ಅವರು ಇದರಲ್ಲಿ ಸಾಕಷ್ಟು ಕೆಲಸ ಮಾಡಿದ್ದಾರೆ.

ರಾಜ್ಯಗಳು 2030 ರ ವೇಳೆಗೆ 540 GW ನವೀಕರಿಸಬಹುದಾದ ಶಕ್ತಿಯ ಗುರಿಯನ್ನು ಹೊಂದಿವೆ. 2030 ರ ವೇಳೆಗೆ ಹಸಿರು ಶಕ್ತಿ ಪರಿವರ್ತನೆಗಾಗಿ ಹಣಕಾಸು ಸಂಸ್ಥೆಗಳು $386 ಶತಕೋಟಿ ವಾಗ್ದಾನ ಮಾಡಿವೆ. ಇದರಿಂದ ನವೀಕರಿಸ ಬಹುದಾದ ಇಂಧನ ಕ್ಷೇತ್ರದಲ್ಲಿ 82 ಲಕ್ಷ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಹೇಳಿದರು.

# ರಾಹುಲ್ ಗಾಂಧಿಯ ನಾಲಿಗೆ ಸುಡಬೇಕು: ಬಿಜೆಪಿ ಸಂಸದ

ಕೋಲ್ಕತ್ತಾ, ಸೆ. 18: ಬಿಜೆಪಿಯ ರಾಜ್ಯಸಭಾ ಸಂಸದ ಅನಿಲ್ ಬೋಂಡೆ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅವರ ನಾಲಿಗೆ ಯನ್ನು ಕತ್ತರಿಸಬಾರದು ಸುಡಬೇಕು ಎಂದು ಹೇಳಿದ್ದಾರೆ. ರಾಹುಲ್ ಗಾಂಧಿ ಅವರ ನಾಲಿಗೆ ಕತ್ತರಿಸುವ ವ್ಯಕ್ತಿಗೆ ರೂ.11 ಲಕ್ಷ ನೀಡುವುದಾಗಿ ಶಿವಸೇನಾ ಶಾಸಕರೊಬ್ಬರ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಬೋಂಡೆ ಈ ಹೇಳಿಕೆ ನೀಡಿದ್ದಾರೆ.

ಭಾರತದಲ್ಲಿ ಸಮಾನತೆ ಸಾಧಿಸಿದ ಮೇಲೆ ಮೀಸಲಾತಿಯನ್ನು ರದ್ದುಗೊಳಿಸುವ ಬಗ್ಗೆ ತಮ್ಮ ಪಕ್ಷವು ಯೋಚಿಸಲಿದೆ ಎಂದು ರಾಹುಲ್ ಗಾಂಧಿ ಜಾರ್ಜ್‌ಟೌನ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಹೇಳಿದರು. ಇತ್ತೀಚೆಗಷ್ಟೇ ಶಿವಸೇನೆ ಶಾಸಕ ಸಂಜಯ್ ಗಾಯಕ್ವಾಡ್ ಹೇಳಿಕೆ ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು.

ಮಂಗಳವಾರ ಮಹಾರಾಷ್ಟ್ರದ ಅಮರಾವತಿಯಲ್ಲಿ ಬಿಜೆಪಿ ಮುಖಂಡ ಬೋಂಡೆ, ನಾಲಿಗೆ ಕತ್ತರಿಸುವ ಭಾಷೆ ಸರಿಯಲ್ಲ, ಆದರೆ ಮೀಸಲಾತಿ ವಿರುದ್ಧ ರಾಹುಲ್ ಜಿ ಹೇಳಿರುವುದು ಅಪಾಯಕಾರಿ. 'ಹಾಗಾಗಿ, ಯಾರಾದರೂ ವಿದೇಶದಲ್ಲಿ ಏನಾದರೂ ಅಸಂಬದ್ಧವಾಗಿ ಮಾತನಾಡಿದರೆ, ನಂತರ ಅವರ ನಾಲಿಗೆಯನ್ನು ಕತ್ತರಿಸುವುದಕ್ಕಿಂತ, ಅದನ್ನು ಸುಟ್ಟುಬಿಡಬೇಕು. ಅದು ರಾಹುಲ್ ಗಾಂಧಿ, ಜ್ಞಾನೇಶ್ ಮಹಾರಾವ್ ಅಥವಾ ಶ್ಯಾಮ್ ಮಾನವ್ ಯಾರೇ ಆಗಿರಲಿ ಅವರು 'ಬಹುಜನ' ಮತ್ತು ಬಹುಸಂಖ್ಯಾತರ ಭಾವನೆಗಳನ್ನು ಘಾಸಿಗೊಳಿಸಿದ್ದಾರೆ' ಎಂದು ಬೋಂಡೆ ಹೇಳಿದ್ದಾರೆ.



ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಅವರ ಭದ್ರತೆಗೆ ಧಕ್ಕೆ ತರುವ ಮತ್ತು ಶಾಂತಿ ಕದಡುವ ಉದ್ದೇಶ ಹೊಂದಲಾಗಿದೆ ಎಂದು ರಾಹುಲ್ ಗಾಂಧಿ ವಿರುದ್ಧ ಕಾಂಗ್ರೆಸ್ ಇಂದು ಪೊಲೀಸ್ ದೂರು ದಾಖಲಿಸಿದೆ. ಎಐಸಿಸಿ ಖಜಾಂಚಿ ಮತ್ತು ಪ್ರಧಾನ ಕಾರ್ಯದರ್ಶಿ ಅಜಯ್ ಮಾಕನ್ ಅವರು ತುಘಲಕ್ ರೋಡ್ ಪೊಲೀಸ್ ಠಾಣೆಯ ಎಸ್‌ಎಚ್‌ಒಗೆ ಸಲ್ಲಿಸಿದ ದೂರಿನಲ್ಲಿ, ಬಿಜೆಪಿ ನಾಯಕರಾದ ತರ್ವಿಂದರ್ ಸಿಂಗ್ ಮರ್ವಾ, ರವನೀತ್ ಸಿಂಗ್ ಬಿಟ್ಟು ಮತ್ತು ರಘುರಾಜ್ ಸಿಂಗ್ ಮತ್ತು ಶಿವಸೇನಾ ಶಾಸಕ ಸಂಜಯ್ ಗಾಯಕ್ವಾಡ್ ಅವರ ಇತ್ತೀಚಿನ ಹೇಳಿಕೆಗಳನ್ನು ಕಾಂಗ್ರೆಸ್ ಉಲ್ಲೇಖಿಸಿದೆ.

ದೂರು ದಾಖಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಮಾಕೆನ್, ದಿವಂಗತ ಇಂದಿರಾ ಗಾಂಧಿ ಮತ್ತು ದಿವಂಗತ ರಾಜೀವ್ ಜಿ ಅವರು ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿರುವುದು ನಮಗೆಲ್ಲರಿಗೂ ತಿಳಿದಿದೆ. ಆ ನಂತರವೂ ಇಂತಹ ಬೆದರಿಕೆಗಳನ್ನು ಹಾಕುತ್ತಿದ್ದಾರೆ. ಬಿಜೆಪಿ ಸಂಸದ ರವನೀತ್ ಬಿಟ್ಟು ರಾಹುಲ್ ಗಾಂಧಿ ಅವರನ್ನು ದೇಶದ ನಂಬರ್ ಒನ್ ಭಯೋತ್ಪಾದಕ ಎಂದು ಕರೆದಿದ್ದಾರೆ. ಬಿಟ್ಟು ಅವರ ಹೇಳಿಕೆಯು ರಾಹುಲ್ ಗಾಂಧಿ ವಿರುದ್ಧ ಸಾರ್ವಜನಿಕ ದ್ವೇಷ ಮತ್ತು ಆಕ್ರೋಶವನ್ನು ಕೆರಳಿಸುವ ಮತ್ತು ಅವರ ವಿರುದ್ಧ ಹಿಂಸಾಚಾರವನ್ನು ಪ್ರಚೋದಿಸುವ ಗುರಿಯನ್ನು ಹೊಂದಿದೆ ಎಂದು ಕಾಂಗ್ರೆಸ್ ಹೇಳಿದೆ.

# ಎನ್.ಪಿ.ಎಸ್ ವಾತ್ಸಲ್ಯ ರಾಷ್ಟ್ರೀಯ ಪಿಂಚಣಿ ಯೋಜನೆಗೆ ನಿರ್ಮಲಾ ಸೀತಾರಾಮನ್ ಚಾಲನೆ

**ಬೆಂಗಳೂರು, ಸೆ. 18–** 2024–25ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ್ದ ಎನ್.ಪಿ.ಎಸ್ ವಾತ್ಸಲ್ಯ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬುಧವಾರ ಚಾಲನೆ ನೀಡಿದರು.





ದೆಹಲಿಯಲ್ಲಿ ಆಯೋಜಿಸಲಾಗಿರುವ ಪ್ರಧಾನ ಕಾರ್ಯಕ್ರಮದಲ್ಲಿ ಬೆಂಗಳೂರು, ಮೈಸೂರು, ಹುಬ್ಬಳ್ಳಿ ಸೇರಿದಂತೆ 75 ಕೇಂದ್ರಗಳಿಂದ ಏಕಕಾಲಕ್ಕೆ ಯೋಜನೆಗೆ ಚಾಲನೆ ದೊರೆಯಿತು. ಈ ಯೋಜನೆಯಡಿ ಅಪ್ರಾಪ್ತ ಮಕ್ಕಳ ಹೆಸರಿನಲ್ಲಿ ಪೋಷಕರು ದೀರ್ಘಾವಧಿವರೆಗೆ ಹಣ ತೊಡಗಿಸಿ, ಅದರ ಪ್ರಯೋಜನ ಪಡೆದುಕೊಳ್ಳಬಹುದಾಗಿದೆ. ಈ ಎನ್‌ಪಿಎಸ್ ವಾತ್ಸಲ್ಯ ಯೋಜನೆಯನ್ನು ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಪಿಎಫ್ ಆರ್ ಡಿಎ ನಿರ್ವಹಿಸಲಿದೆ. ಇದು ಮಕ್ಕಳಿಗೆ ಆರ್ಥಿಕ ಭದ್ರತೆಯನ್ನು ಖಾತರಿಪಡಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಒಂದು ಉಪಕ್ರಮವಾಗಿದ್ದು, ಪಿಂಚಣಿ ವ್ಯವಸ್ಥೆಯಲ್ಲಿ ಇದೊಂದು ಪ್ರಮುಖ ಹೆಜ್ಜೆಯಾಗಿದೆ.

ಇದರಲ್ಲಿ ಹೂಡಿಕೆ ಮಾಡುವ ಮೂಲಕ ತಮ್ಮ ಮಕ್ಕಳ ಭವಿಷ್ಯಕ್ಕಾಗಿ ಉಳಿತಾಯದ ಜೊತೆಗೆ ದೀರ್ಘಾವಧಿಯ ಸಂಪತ್ತು ಖಾತರಿಪಡಿಸಲು ಪೋಷಕರಿಗೆ ಅನುಕೂಲವಾಗಲಿದೆ. ಇದರಡಿ ಮೊದಲಿಗೆ ಅಪ್ರಾಪ್ತರ ಹೆಸರಿನಲ್ಲಿದ್ದ ಖಾತೆ, ಅವರಿಗೆ 18 ವರ್ಷ ತುಂಬಿದ ನಂತರ ನಿಯಮಿತ ಎನ್.ಪಿ.ಎಸ್ ಖಾತೆಯನ್ನಾಗಿ ಪರಿವರ್ತಿಸಬಹುದಾಗಿದೆ.

# ವಾರದೊಳಗೆ ಸಿಎಂ ನಿವಾಸ ಖಾಲಿ ಮಾಡಲಿರುವ ಕೇಜ್ರಿವಾಲ್

**ನವದೆಹಲಿ, ಸೆ. 18–** ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ರಾಷ್ಟ್ರ ರಾಜಧಾನಿಯ ಸಿವಿಲ್ ಲೈನ್ಸ್ ಪ್ರದೇಶದಲ್ಲಿರುವ ತಮ್ಮ ಅಧಿಕೃತ ನಿವಾಸದಿಂದ ಒಂದು ವಾರದೊಳಗೆ ತೆರಳಲಿದ್ದಾರೆ ಎಂದು ಆಪ್ ಸಂಸದ ಸಂಜಯ್ ಸಿಂಗ್ ಬುಧವಾರ ಹೇಳಿದ್ದಾರೆ. ಅಬಕಾರಿ ನೀತಿ ಪ್ರಕರಣದಲ್ಲಿ ಜಾಮೀನಿನ ಮೇಲೆ ತಿಹಾರ್ ಜೈಲಿನಿಂದ ಬಿಡುಗಡೆಯಾದ ಕೆಲವೇ ದಿನಗಳಲ್ಲಿ ಅರವಿಂದ್ ಕೇಜ್ರಿವಾಲ್ ಮಂಗಳವಾರ ದೆಹಲಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅರವಿಂದ್ ಕೇಜ್ರಿವಾಲ್ ಅವರ ಆಪ್ತರಾಗಿದ್ದ ಆಪ್ ನಾಯಕಿ ಆತಿಶಿ ನೂತನ ಸಿಎಂ ಆಗಿ ಆಯ್ಕೆಯಾಗಿದ್ದಾರೆ. ಭದ್ರತೆಯ ಕಾರಣದಿಂದ ಮನೆ ಖಾಲಿ ಮಾಡದಂತೆ ಅರವಿಂದ್ ಕೇಜ್ರಿವಾಲ್ ಅವರನ್ನು ಮನವೊಲಿಸಲು ಆಪ್ ನಾಯಕರು ಪ್ರಯತ್ನಿಸಿ ದ್ದಾರೆ. ಆದರೆ ಕೇಜ್ರಿವಾಲ್ ಅವರು ನಮ್ಮ ಸಲಹೆಯನ್ನು ಕೇಳಲು ನಿರಾಕರಿಸಿದ್ದಾರೆ ಎಂದು ಆಪ್ ರಾಜ್ಯಸಭಾ ಸದಸ್ಯ ಸಂಜಯ್ ಸಿಂಗ್ ಹೇಳಿದ್ದಾರೆ.



'ಅರವಿಂದ್ ಕೇಜ್ರಿವಾಲ್ ಅವರು ಒಂದು ವಾರದೊಳಗೆ ತಮ್ಮ ಮನೆ (ಸಿಎಂ ನಿವಾಸ) ಖಾಲಿ ಮಾಡಲು ನಿರ್ಧರಿಸಿದ್ದಾರೆ. ಅವರ ಭದ್ರತೆಯ ಬಗ್ಗೆ ಕಳವಳವಿದೆ, ಅವರ ಮೇಲೆ ಹಲವಾರು ದಾಳಿಗಳು ನಡೆದಿವೆ. ಭದ್ರತಾ ಸಮಸ್ಯೆ ಇದೆ ಎಂದು ನಾವು ಅವರಿಗೆ ಅರ್ಥ ಮಾಡಿಸಲು ಪ್ರಯತ್ನಿಸಿದ್ದೇವೆ, ಬಿಜೆಪಿಯವರು ತಮ್ಮ ಅವರ ಮೇಲೆ ಹಲ್ಲೆ ನಡೆಸಿದ್ದಾರೆ. ಆದಾಗ್ಯೂ, ದೇವರು ನನ್ನನ್ನು ರಕ್ಷಿಸುತ್ತಾನೆ ಎಂದು ಎಂದು ಕೇಜ್ರಿವಾಲ್ ಹೇಳಿರುವುದಾಗಿ ಸಂಜಯ್ ಸಿಂಗ್ ತಿಳಿಸಿದ್ದಾರೆ.

ದೆಹಲಿ ಸಿಎಂ ಸ್ಥಾನಕ್ಕೆ ಅರವಿಂದ್ ಕೇಜ್ರಿವಾಲ್ ಸೋಮವಾರ ರಾಜೀನಾಮೆ ನೀಡಿದ್ದಾರೆ. ದೆಹಲಿಯ ಜನರಿಂದ 'ಪ್ರಾಮಾಣಿಕತೆಯ ಪ್ರಮಾಣಪತ್ರ? ಪಡೆಯುವವರೆಗೆ ಮುಖ್ಯಮಂತ್ರಿಯ ಸ್ಥಾನದಲ್ಲಿರುವುದಿಲ್ಲ ಎಂದು ಅವರು ಹೇಳಿದರು. ಜನಸಾಮಾನ್ಯರು ನಮ್ಮನ್ನು ಒಪ್ಪಿ ಅಧಿಕಾರಕ್ಕೆ ತಂದ ನಂತರವೇ ತಾವು ಮತ್ತು ಮನೀಶ್ ಸಿಸೋಡಿಯಾ ಅವರು ಸರ್ಕಾರಿ ಪಾತ್ರಗಳನ್ನು ಒಪ್ಪಿಕೊಳ್ಳುತ್ತೇವೆ 'ಎಂದು ಅವರು ಹೇಳಿದರು.

ಅದೇ ವೇಳೆ ನವೆಂಬರ್‌ನಲ್ಲಿ ವಿಧಾನಸಭಾ ಚುನಾವಣೆಯನ್ನು ನಡೆಸಬೇಕು ಎಂದು ಕೇಜ್ರಿವಾಲ್ ಚುನಾವಣಾ ಆಯೋಗವನ್ನು ಒತ್ತಾಯಿಸಿದರು. ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅರವಿಂದ್ ಕೇಜ್ರಿವಾಲ್ ಅವರನ್ನು ಮಾರ್ಚ್ 21 ರಂದು ಜಾರಿ ನಿರ್ದೇಶನಾಲಯ ಬಂಧಿಸಿತ್ತು. ಇದೇ ಆರೋಪದ ಮೇಲೆ ಜೂನ್ 26ರಂದು ಸಿಬಿಐ ಅವರನ್ನು ಬಂಧಿಸಿತ್ತು. ಏತನ್ಮಧ್ಯೆ, ರಾಜೀನಾಮೆ ನೀಡುವಂತೆ ಒತ್ತಾಯಿಸಲು ಬಿಜೆಪಿ ಕೇಜ್ರಿವಾಲ್ ಅವರನ್ನು ಬಂಧಿಸಿದೆ ಎಂದು ಆಮ್ ಆದ್ಮಿ ಪಕ್ಷದ ಸಂಸದ ಸಂದೀಪ್ ಪಾಠಕ್ ಆರೋಪಿಸಿದ್ದಾರೆ.

ಅರವಿಂದ್ ಕೇಜ್ರಿವಾಲ್ ಅವರನ್ನು ಬಂಧಿಸಿ, ರಾಜೀನಾಮೆ ಪಡೆದು ಆಮ್ ಆದ್ಮಿ ಪಕ್ಷವನ್ನು ಒಡೆಯುವುದು ಬಿಜೆಪಿಯ ಗುರಿಯಾಗಿತ್ತು. ಈಗ ಅರವಿಂದ್ ಕೇಜ್ರಿವಾಲ್ ಹೊರಗಿದ್ದಾರೆ, ಪಕ್ಷ ಒಡೆಯಲಿಲ್ಲ. ಬಿಜೆಪಿಯ ಸಂಪೂರ್ಣ ಯೋಜನೆ ವಿಫಲವಾಗಿದೆ. ನ್ಯಾಯಾಲಯ ಜಾಮೀನು ಮಂಜೂರು ಮಾಡಿದ್ದು, ಅವರ ವಿರುದ್ಧ ಯಾವುದೇ ಭ್ರಷ್ಟಾಚಾರ ಪ್ರಕರಣ ಇಲ್ಲ ಎಂದು ಹೇಳಿದೆ. ಅಂತಹ ಪರಿಸ್ಥಿತಿಯಲ್ಲಿ, ಅವರು ರಾಜೀನಾಮೆ ನೀಡುವ ಅಗತ್ಯವಿಲ್ಲ ಆದರೆ ಅವರು ತಮ್ಮ ನೈತಿಕತೆ ಮತ್ತು ತತ್ವಗಳಿಂದ ರಾಜೀನಾಮೆ ನೀಡಿದ್ದಾರೆ ಎಂದು ಪಾಠಕ್ ಹೇಳಿದ್ದಾರೆ.

# ರಾಹುಲ್ ಗಾಂಧಿಯನ್ನು ಸುಟ್ಟುಬಿಡಬೇಕು ಎಂದ ಸಂಸದ ಅನಿಲ್ ಬೋಂಡೆ

**ಮುಂಬೈ, ಸೆ.18–** ರಾಹುಲ್ ಗಾಂಧಿ ಅವರ ನಾಲಗೆ ಕತ್ತರಿಸೋದಲ್ಲ, ಸುಡಬೇಕು ಎಂದು ಬಿಜೆಪಿಯ ರಾಜ್ಯಸಭಾ ಸಂಸದ ಅನಿಲ್ ಬೋಂಡೆ ವಿವಾದಿತ ಹೇಳಿಕೆ ನೀಡಿದ್ದಾರೆ.



ರಾಹುಲ್ ಗಾಂಧಿ ಅವರ ನಾಲಗೆ ಕತ್ತರಿಸುವ ವ್ಯಕ್ತಿಗೆ 11 ಲಕ್ಷ ರೂ. ನೀಡುವುದಾಗಿ ಶಿವಸೇನಾ ಶಾಸಕರೊಬ್ಬರ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಬೋಂಡೆ ಈ ಹೇಳಿಕೆ ನೀಡಿದ್ದಾರೆ. ಮಂಗಳವಾರ ಮಹಾರಾಷ್ಟ್ರದ ಅಮರಾವತಿಯಲ್ಲಿ ಮಾತನಾಡಿದ ಬೋಂಡೆ, ನಾಲಗೆ ಕತ್ತರಿಸುವ ಭಾಷೆ ಸರಿಯಲ್ಲ. ಆದರೆ ಮೀಸಲಾತಿ ವಿರುದ್ಧ ರಾಹುಲ್ ಜಿ ಹೇಳಿರುವುದು ಅಪಾಯಕಾರಿ. ಹೀಗಾಗಿ ಯಾರಾದರೂ ವಿದೇಶದಲ್ಲಿ ಏನಾದರೂ ಅಸಂಬದ್ಧವಾಗಿ ಮಾತನಾಡಿದರೆ ಅವರ ನಾಲಗೆಯನ್ನು ಕತ್ತರಿಸುವುದಕ್ಕಿಂತ ಅದನ್ನು ಸುಟ್ಟುಬಿಡಬೇಕು ಎಂದಿದ್ದಾರೆ. ಭಾರತವು ನ್ಯಾಯಯುತವಾದ ಸ್ಥಳ ಆದ ನಂತರ ಉದ್ಯೋಗಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಯನ್ನು ರದ್ದುಗೊಳಿಸುವ ಬಗ್ಗೆ ತಮ್ಮ ಪಕ್ಷವು ಯೋಚಿಸಲಿದೆ ಎಂದು ರಾಹುಲ್ ಗಾಂಧಿ ಅಮೆರಿಕದ ಜಾರ್ಜ್‌ಟೌನ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಹೇಳಿದರು. ಇದರ ಬಳಿಕ ಈ ವಿವಾದ ಹುಟ್ಟಿಕೊಂಡಿದೆ.

# ಉದಯನಿಧಿ ಸ್ಟಾಲಿನ್ ತಮಿಳುನಾಡು ಡಿಸಿಎಂ?

**ಚೆನ್ನೈ, ಸೆ.18–** ತಮಿಳುನಾಡಿನ ಉಪಮುಖ್ಯಮಂತ್ರಿಯಾಗಿ ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಅವರನ್ನು ನೇಮಕ ಮಾಡುವ ಸಾಧ್ಯತೆಯಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇಂಡಿಯಾ ಟುಡೇ ಈ ಕುರಿತು ವರದಿ ಮಾಡಿದೆ, ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರ ಪುತ್ರ ಉದಯನಿಧಿ ಸ್ಟಾಲಿನ್ ಅವರು ಪ್ರಸ್ತುತ ರಾಜ್ಯದ ಕ್ರೀಡಾ ಮತ್ತು ಯುವ ಕಲ್ಯಾಣ ಸಚಿವರಾಗಿದ್ದಾರೆ ಶೀಘ್ರವೇ ಅವರು ಉಪಮುಖ್ಯಮಂತ್ರಿ ಸ್ಥಾನಕ್ಕೇರಲಿದ್ದಾರೆ ಎಂದು ಹೇಳಲಾಗುತ್ತಿದೆ.



ಅಮೆರಿಕಕ್ಕೆ ತೆರಳುವ ಮುನ್ನ ಎಂಕೆ ಸ್ಟಾಲಿನ್ ಕೂಡ ಉದಯನಿಧಿ ಸ್ಟಾಲಿನ್ ಅವರನ್ನು ಉಪಮುಖ್ಯಮಂತ್ರಿ ಹುದ್ದೆಗೆ ಏರಿಸುವ ಸುಳಿವು ನೀಡಿದ್ದರು. ಬದಲಾವಣೆ ಮಾತ್ರ ನಿಶ್ಚಿತ ಮತ್ತು ಜನರು ನಿರೀಕ್ಷಿಸುತ್ತಿರುವುದು ಶೀಘ್ರದಲ್ಲೇ ಸಂಭವಿಸುತ್ತದೆ ಎಂದು ಈ ತಿಂಗಳ ಆರಂಭದಲ್ಲಿ ಯುಎಸ್‌ಗೆಭೇಟಿ ನೀಡುವ ಮುನ್ನ ಹೇಳಿದ್ದರು. ಉದಯನಿಧಿ ಸ್ಟಾಲಿನ್ ಪ್ರಸ್ತುತ ಕ್ರೀಡಾ ಮತ್ತು ಯುವ ಕಲ್ಯಾಣ ಸಚಿವರಾಗಿರುವುದರ ಜೊತೆಗೆ ವಿಶೇಷ ಕಾರ್ಯಕ್ರಮ ಅನುಷ್ಠಾನದ ಪ್ರಮುಖ ಖಾತೆಯನ್ನು ಸಹ ನಿರ್ವಹಿಸುತ್ತಾರೆ.

ಸನಾತನ ಧರ್ಮವು ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ವಿರುದ್ಧವಾಗಿದೆ ಮತ್ತು ಅದನ್ನು ಮಲೇರಿಯಾ ಮತ್ತು ಡೆಂಗ್ಯೂ ರೀತಿಯಲ್ಲಿ ನಿರ್ಮೂಲನೆ ಮಾಡಬೇಕು ಎಂದು ಹೇಳಿದ್ದರು. ಈ ಹೇಳಿಕೆಗೆ ವಿವಿಧ ವಲಯಗಳಿಂದ ವ್ಯಾಪಕ ಖಂಡನೆ ವ್ಯಕ್ತವಾಗಿತ್ತು.

# ಹರಿಯಾಣ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಪ್ರಣಾಳಿಕೆ ಬಿಡುಗಡೆ

**ನವದೆಹಲಿ, ಸೆ.18–** ಹರಿಯಾಣ ವಿಧಾನಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ ಜಾತಿ ಸಮೀಕ್ಷೆ, ಎಂಎಸ್ಪಿಯ ಕಾನೂನು ಖಾತರಿ ಮತ್ತು 300 ಯೂನಿಟ್ ಉಚಿತ ವಿದ್ಯುತ್ ಸೇರಿದಂತೆ ಹಲವು ಭರವಸೆಗಳನ್ನು ಕಾಂಗ್ರೆಸ್ ಬುಧವಾರ ಪ್ರಕಟಿಸಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪಕ್ಷದ ಹಿರಿಯ ನಾಯಕ ಕೆಸಿ ವೇಣುಗೋಪಾಲ್, ಹರಿಯಾಣದ ಮಾಜಿ ಮುಖ್ಯಮಂತ್ರಿ ಭೂಪಿಂದರ್ ಸಿಂಗ್ ಹೂಡಾ ಮತ್ತು ಇತರರ ಸಮ್ಮುಖದಲ್ಲಿ ಪಕ್ಷದ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು. ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಖರ್ಗೆ, ಹರಿಯಾಣವನ್ನು ಸಮೃದ್ಧ ರಾಜ್ಯ ಎಂದು ಪರಿಗಣಿಸಲಾಗಿತ್ತು, ಆದರೆ ಬಿಜೆಪಿ ಅದನ್ನು ಹಾಳುಮಾಡಿದೆ, ಆದರೆ ಈ ಬಾರಿ ಸಾರ್ವಜನಿಕರು ನಮ್ಮೊಂದಿಗಿದ್ದು, ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರಲಿದ್ದಾರೆ. ಭ್ರಷ್ಟಾಚಾರದಿಂದ ರಾಜ್ಯ ನರಳುತ್ತಿದ್ದು, ನಿರುದ್ಯೋಗ, ಹದಗೆಟ್ಟ ಕಾನೂನು ಸುವ್ಯವಸ್ಥೆ, ಅರಾಜಕತೆಯಂತಹ ಸಮಸ್ಯೆಗಳು ರಾಜ್ಯದ ಪ್ರಗತಿಗೆ ಅಡ್ಡಿಯಾಗುತ್ತಿವೆ ಎಂದರು.

# ಒಂದು ದೇಶ, ಒಂದು ಚುನಾವಣೆಯಿಂದ ಒಕ್ಕೂಟ ವ್ಯವಸ್ಥೆ ನಾಶ: ಅಸಾದುದ್ದೀನ್ ಓವೈಸಿ ಟೀಕೆ

**ನವದೆಹಲಿ, ಸೆ.18–** 'ಒಂದು ದೇಶ, ಒಂದು ಚುನಾವಣೆ' ಯೋಜನೆಯನ್ನು ಜಾರಿಗೊಳಿಸುವ ಮೂಲಕ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರವು ದೇಶದ ಒಕ್ಕೂಟ ವ್ಯವಸ್ಥೆ ನಾಶಮಾಡಲು ಹೊರಟಿದೆ ಎಂದು ಎಐಎಂಐಎಂ ನಾಯಕ ಅಸಾದುದ್ದೀನ್ ಒವೈಸಿ ವಾಗ್ದಾಳಿ ನಡೆಸಿದ್ದಾರೆ.

ಒಂದು ದೇಶ, ಒಂದು ಚುನಾವಣೆಗೆ ಇಂದು (ಬುಧವಾರ) ಕೇಂದ್ರ ಸಚಿವ ಸಂಪುಟವು ಒಪ್ಪಿಗೆ ಸೂಚಿಸಿದ ಬೆನ್ನಲ್ಲೇ ಪ್ರತಿಕ್ರಿಯಿಸಿರುವ ಅವರು, ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. 'ಒಂದು ರಾಷ್ಟ್ರದ ಒಂದು ಚುನಾವಣೆ'ಯನ್ನು ನಾನು ಸತತವಾಗಿ ವಿರೋಧಿಸಿದ್ದೇನೆ. ಏಕೆಂದರೆ ಅದು ಸಂವಿಧಾನದ ಮೂಲ ರಚನೆ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆಯುಂಟು ಮಾಡುವುದರ ಜತೆಗೆ ಒಕ್ಕೂಟ ವ್ಯವಸ್ಥೆಯನ್ನು ಸಂಪೂರ್ಣವಾಗಿ ನಾಶಪಡಿಸುತ್ತದೆ. ನಗರಸಭೆ, ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪ್ರಚಾರ ಮಾಡುವ ಅನಿವಾರ್ಯತೆ ಯಿರುವ ಕಾರಣಕ್ಕೆ ಪ್ರಧಾನಿ ಮೋದಿ ಮತ್ತು ಅಮಿತ್ ಶಾ ಅವರಿಗೆ ಮಾತ್ರ ಏಕಕಾಲಕ್ಕೆ ಚುನಾವಣೆ ನಡೆಸಬೇಕೆಂಬ ಅನಿವಾರ್ಯತೆ ಇದೆ. ಆದರೆ, ಆಗಾಗ್ಗೆ ಚುನಾವಣೆಗಳು ನಡೆಯುವುದರಿಂದ ಪ್ರಜಾಪ್ರಭುತ್ವದ ಹೊಣೆಗಾರಿಕೆ ಹೆಚ್ಚಾಗುತ್ತದೆ' ಎಂದು ಒವೈಸಿ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.



# ತೆಂಗು ಬೆಳೆಯಲ್ಲಿ ನೈಸರ್ಗಿಕ ಕೃಷಿಗೆ ಆದ್ಯತೆ ನೀಡಿ: ಕೇಂದ್ರ ಸಚಿವ ರಾಮನಾಥ್ ಠಾಕೂರ್ ಕರೆ

**ರಾಮನಗರ, ಸೆ. 18 :** ತೆಂಗು ಬೆಳೆಯಲ್ಲಿ ರಾಷ್ಟ್ರ ಮೊದಲ ಸ್ಥಾನಕ್ಕೇರಲು ಬೆಳೆಗಾರರು ಮತ್ತಷ್ಟು ಶ್ರಮಿಸಬೇಕು, ಸಾಧ್ಯವಾದಷ್ಟು ನೈಸರ್ಗಿಕ ಕೃಷಿಗೆ ಆದ್ಯತೆ ನೀಡಬೇಕು ಎಂದು ಕೇಂದ್ರ ಸರ್ಕಾರದ ಕೃಷಿ ಮತ್ತು ರೈತ ಕಲ್ಯಾಣ ಖಾತೆಯ ರಾಜ್ಯ ಸಚಿವರಾದ ರಾಮನಾಥ್ ಠಾಕೂರ್ ಅವರು ಕರೆ ನೀಡಿದರು. ಅವರು ಬುಧವಾರ ನಗರದ ಜಾಲಮಂಗಲ ರಸ್ತೆಯಲ್ಲಿರುವ ಶ್ರೀ ಮಂಜುನಾಥ ಕನ್ವೆನ್ಷನ್ ಹಾಲ್ನಲ್ಲಿ ತೆಂಗು ಅಭಿವೃದ್ಧಿ ಮಂಡಳಿ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ತೆಂಗು ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ವಿಶ್ವದಲ್ಲಿ ತೆಂಗು ಉತ್ಪಾದನೆಯಲ್ಲಿ ಭಾರತ ಮೂರನೇ ಸ್ಥಾನದಲ್ಲಿದೆ, ಇಂಡೋನೇಷ್ಯಾ ಹಾಗೂ ಫಿಲಿಪ್ಪೀನ್ಸ್ ನಂತರದ ಸ್ಥಾನದಲ್ಲಿರುವ ದೇಶದಲ್ಲಿ ಮತ್ತಷ್ಟು ತೆಂಗು ಉತ್ಪಾದನೆಯಾಗಬೇಕಿದೆ, ದೇಶದ ಶೇಕಡಾ 17.6ರಷ್ಟು ಸಾಗುವಳಿ ಪ್ರದೇಶದಲ್ಲಿ ತೆಂಗನ್ನು ಬೆಳೆಯಲಾಗುತ್ತಿದೆ. 28.81 ಪ್ರತಿಶತ ತೆಂಗು ಉತ್ಪಾದನೆಯಾಗುತ್ತಿದೆ. ಪ್ರತೀ ಹೆಕ್ಟೇರ್‌ಗೆ 9,882 ತೆಂಗಿನಕಾಯಿ ಬೆಳೆಯಲಾಗುತ್ತಿದೆ, ನೈಸರ್ಗಿಕ ಕೃಷಿ ಮೂಲಕ ಈ ಉತ್ಪಾದನೆಯನ್ನು ಮತ್ತಷ್ಟು ಹೆಚ್ಚಿಸುವತ್ತ ರೈತರು ಗಮನಹರಿಸಬೇಕು. ತೆಂಗು ಅಭಿವೃದ್ಧಿ ಮಂಡಳಿಯಿಂದ ತೆಂಗು ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ವಿವಿಧ ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಕಳೆದ 30 ವರ್ಷಗಳಲ್ಲಿ ದೇಶದ ಮಣ್ಣಿನ ಫಲವತ್ತತೆ ನಶಿಸುತ್ತಿದ್ದು, ಮಾನವನ ಆರೋಗ್ಯವು ಕೂಡ ಕ್ಷೀಣಿಸುತ್ತಿದೆ ಆದ ಕಾರಣ ನೈಸರ್ಗಿಕ ಕೃಷಿಗೆ ರೈತರು ಹೆಚ್ಚು ಒಲವು ತೋರುವ ಮೂಲಕ ಮಾನವನ ಆರೋಗ್ಯವನ್ನು ಸುಸ್ಥಿತಿಯಲ್ಲಿ ಇಡಬೇಕು ಎಂದು ಹೇಳಿದರು. ಸಾಕಷ್ಟು ವಿಶೇಷತೆಗಳನ್ನು ಕೂಡಿದ ತೆಂಗಿನ ಗುಣಮಟ್ಟದ ಗುಣವರ್ಧನೆಗೆ ಆದ್ಯತೆ ನೀಡಬೇಕು. ರೈತರು ತಮ್ಮ ಕುಟುಂಬ ಸಹಕಾರದೊಂದಿಗೆ ತೆಂಗನ್ನು ಪೋಷಿಸುತ್ತಿದ್ದಾರೆ. ಕುಟುಂಬದ ಸದಸ್ಯರ ಶ್ರಮವಿರುವ ಈ ಬೆಳೆಯ ಉತ್ಪಾದನೆ ಹೆಚ್ಚಿಸಿಕೊಂಡು ಆ ಮೂಲಕ ಆರ್ಥಿಕ ಪ್ರಗತಿಯನ್ನು ಕಾಣುವಂತೆ ಅವರು ಕರೆ ನೀಡಿದರು.

ಕೇಂದ್ರ ಸರ್ಕಾರದ ತೆಂಗು ಅಭಿವೃದ್ಧಿ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಪ್ರಭಾತ್ ಕುಮಾರ್ ಮಾತನಾಡಿ, ತೋಟಗಾರಿಕೆಯಲ್ಲಿ ನಾವು ತೆಂಗಿನ ಕಾಯಿ, ಎಳನೀರಿಗೆ ಮಾತ್ರ ಸೀಮಿತವಾಗಿದ್ದೆವು. ಆದರೆ ಈಗ ವೈಜ್ಞಾನಿಕವಾಗಿ ಕೈಗೊಳ್ಳಲಾತರುವ ಹಲವು ಕ್ರಮಗಳಿಂದಾಗಿ ತೆಂಗಿನ ಮರದಿಂದ ಪ್ರತಿಯೊಂದು ಅಂಗವನ್ನು ಬಳಸಿಕೊಳ್ಳುತ್ತಿದ್ದೇವೆ ಹಾಗೂ ಅದರಿಂದ ಲಾಭ ಪಡೆಯುತ್ತಿದ್ದೇವೆ, ಆರ್ಥಿಕವಾಗಿ ನಾವು ಬೆಳೆಯುವುದಲ್ಲದೇ ನಮ್ಮ ತೋಟಗಾರಿಕೆಯ ಮೂಲಕ ತೆಂಗಿನ ಇಳುವರಿಯನ್ನು ಕೂಡ ಹೆಚ್ಚಿಸುವಲ್ಲಿ ಸಫಲರಾಗಿದ್ದೇವೆ ಎಂದರು. ಮಂಡ್ಯ ಜಿಲ್ಲೆಯಲ್ಲಿ ಉತ್ತಮ ಬೀಜಗಳನ್ನು ಒದಗಿಸುವ ಸಂಸ್ಥೆಯನ್ನು ಶುರು ಮಾಡಲಾಗಿದೆ. ಅಂತಹ ಉತ್ತಮ ತಳಿಯ ಬೀಜಗಳನ್ನು ಬಳಸಿಕೊಂಡು ತೋಟಗಾರಿಕೆ ಮಾಡಿದಾಗ ತೋಟಗಳಲ್ಲಿ ಆಗುವಂತಹ ನಷ್ಟಗಳನ್ನು ನಾವು ಆದಷ್ಟು ಸಂಖ್ಯೆಯಲ್ಲಿ ನಿವಾರಿಸಿಕೊಳ್ಳಬಹುದು ಎಂದರು.

ಹಾನಿರಹಿತ ತೋಟಗಾರಿಕೆಯೇ ತೆಂಗು ಬೆಳೆಯ ಉದ್ದೇಶವಾಗಿದೆ. ತೋಟಗಾರಿಕೆಯಲ್ಲಿ ಆದಷ್ಟು ನಷ್ಟಗಳನ್ನು ಕಡಿಮೆ ಮಾಡಿಕೊಂಡು ತೋಟಗಾರಿಕೆ ಮಾಡಿದಾಗ ರೈತರು ಆರ್ಥಿಕವಾಗಿ ಬೆಳೆಯುತ್ತಾರೆ ಹಾಗೂ ಆರ್ಥಿಕ ಬೆಳವಣಿಗೆಯೂ ಆಗುತ್ತದೆ ಎಂದು ಹೇಳಿದರು.

ನೀರಾದಿಂದ ತಯಾರಾಗುವ ಸಕ್ಕರೆಗೆ ಮಾರುಕಟ್ಟೆಯಲ್ಲಿ ವಿಪರೀತ ಬೆಲೆಯಿದೆ. ಈ ರೀತಿಯ ಹೊಸ ಉತ್ಪನ್ನಗಳನ್ನು ತಿಳಿದುಕೊಂಡು ರೈತರು ಅದರಿಂದ ಲಾಭ ಪಡೆದುಕೊಳ್ಳಬಹುದು. ಈ ಕುರಿತು ಕೇಂದ್ರ ಸರ್ಕಾರದಿಂದ ಸಾಕಷ್ಟು ಸಂಶೋಧನೆಗಳು ನಡೆಯುತ್ತಿವೆ, ಸಣ್ಣ ರೈತರ ಏಳಿಗೆಗಾಗಿ ಸಚಿವರು ಸಾಕಷ್ಟು ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು.

ಬೆಂಗಳೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಎಸ್.ವಿ.ಸುರೇಶ ಅವರು ತೆಂಗು ಅಭಿವೃದ್ಧಿ ಮಂಡಳಿಯಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ, ತೆಂಗು ಕ್ರಮೇಣವಾಗಿ ಆರ್ಥಿಕ ಬೆಳೆಯಾಗಿ ಪರಿವರ್ತನೆಯಾಗಿದೆ, ಇದರ ಉತ್ಪಾದನೆ, ಸಂರಕ್ಷಣೆ, ಕೋಯ್ಲು ನಂತರದಲ್ಲಿ ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ರೈತರು ಮಣ್ಣಿನ ಸದೃಢ ಪೋಷಕಾಂಶ ನೋಡಿಕೊಳ್ಳದಿದ್ದರೆ, ಸಾಕಷ್ಟು ತೊಂದರೆಗಳಾಗುತ್ತವೆ. ಎಳನೀರಿನಲ್ಲಿ ಕೀಟನಾಶಕ, ರಾಸಾಯನಿಕ ಅಂಶಗಳು ಪರೀಕ್ಷೆಯಲ್ಲಿ ಕಂಡು ಬಂದಿದೆ.

ತೆಂಗಿಗೆ ಬಂದೆರಗಿರುವ ಸಮಸ್ಯೆಗಳನ್ನು ಮಂಡಳಿ ಜೊತೆ ವೈಜ್ಞಾನಿಕವಾಗಿ ಸಂಶೋಧನೆ ಮಾಡಿ ರೈತರಿಗೆ ಮಾಹಿತಿ ನೀಡುತ್ತಿದ್ದೇವೆ ಎಂದರು. ರೈತರು ಸಾವಯವ ನೈಸರ್ಗಿಕ ಕೃಷಿಯಲ್ಲಿ ತೊಡಗಬೇಕು. ಬೆಳೆಗಾರರಿಗೆ ಉದ್ಯಮಿಗಳಾಗಬೇಕು. ರೈತನೇ ಉದ್ಯಮಿಯಾಗಬೇಕು. ಮೌಲ್ಯವರ್ಧಿತ ಉತ್ಪನ್ನಗಳನ್ನು ಮಾರುಕಟ್ಟೆಗೆ ನೀಡುವ್ಯದನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಅವರು ಮಾತನಾಡಿ, ಜಿಲ್ಲೆಯಲ್ಲಿ ತೆಂಗು ಪ್ರಮುಖ ಬೆಳೆಯಾಗಿದ್ದು, ಅದರಿಂದ ಹಲವಾರು ರೀತಿಯ ಉತ್ಪನ್ನಗಳನ್ನು ಮಾಡಬಹುದು.

ಇದರಿಂದ ರೈತರ ಆದಾಯ ವೃದ್ಧಿಗೆ ಸಹಾಯವಾಗುತ್ತದೆ ತೆಂಗಿನ ವಿವಿಧ ಉತ್ಪಾದನೆಗಳನ್ನು ಮಾರಾಟ ಮಾಡಲು ಜಿಲ್ಲಾ ಪಂಚಾಯತ್ ವತಿಯಿಂದ ವಂದಾರಗುಪ್ಪೆ ಗ್ರಾಮದಲ್ಲಿ ಮಹಿಳಾ ಸ್ವಸಹಾಯ ಸಂಘಗಳಿಂದ ಮಾರಾಟ ಮಾಡುವ ಪ್ರಯತ್ನವಾಗುತ್ತಿದೆ, ಮಹತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ರೈತರ ಜಮೀನಿನಲ್ಲಿ ತೋಟಗಾರಿಕೆ ಬೆಳೆಯಾಗಿರುವ ತೆಂಗನ್ನು ಬೆಳೆಯಲು ಪ್ರೋತ್ಸಾಹಿಸಲಾಗುತ್ತಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ತೆಂಗು ಬೆಳೆಯ ವಿವಿಧ ಉತ್ಪನ್ನಗಳ ಮಳಿಗೆಗಳನ್ನು ಕೇಂದ್ರ ಸರ್ಕಾರದ ಕೃಷಿ ಮತ್ತು ರೈತ ಕಲ್ಯಾಣ ಖಾತೆಯ ರಾಜ್ಯ ಸಚಿವ ರಾಮನಾಥ್ ಠಾಕೂರ್ ಅವರು ಉದ್ಘಾಟಿಸಿದರು. ಬೆಂಗಳೂರಿನ ಜಿಕೆವಿಕೆಯ ವಿಷಯ ತಜ್ಞರಾದ ಡಾ. ಶ್ರೀನಿವಾಸ ರೆಡ್ಡಿ ಹಾಗೂ ಪ್ರಗತಿ ಪರ ರೈತರಾದ ಮಹಿಮಾ ಪಟೇಲ್ ಮಾತನಾಡಿದರು.

# ಕೆ.ಎನ್. ರಾಜಣ್ಣ ವಿರುದ್ಧ ಅಪೆಕ್ಸ್ ಬ್ಯಾಂಕ್‌ನಲ್ಲಿ 2000 ಕೋಟಿಗೂ ಭ್ರಷ್ಟಾಚಾರ ದೂರು

**ಬೆಂಗಳೂರು, ಸೆ. 18 :** ಸಚಿವ ಕೆ.ಎನ್ ರಾಜಣ್ಣ ವಿರುದ್ಧ ಅಪೇಕ್ಸ್ ಬ್ಯಾಂಕ್‌ನಲ್ಲಿ 2000 ಕೋಟಿಗೂ ಅಧಿಕ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ 3 ತಿಂಗಳ ಒಳಗಾಗಿ ಈ ಒಂದು ಪ್ರಕರಣ ಇತ್ಯರ್ಥಪಡಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಹೈಕೋರ್ಟ್ ಸೂಚನೆ ನೀಡಿತ್ತು. ಆದರೆ ಸರ್ಕಾರ ಯಾವುದೇ ರೀತಿಯಾದಂತಹ ಕ್ರಮ ಕೈಗೊಂಡಿಲ್ಲ.ಹಾಗಾಗಿ ಇದೀಗ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಪ್ರಕರಣದ ಕುರಿತು ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ. ಹೌದು ಅಪೆಕ್ಸ್ ಬ್ಯಾಂಕ್‌ನಲ್ಲಿ ನಡೆದಿದೆ ಎನ್ನಲಾಗಿರುವ 2 ಸಾವಿರ ಕೋಟಿ



ರೂ ಅಧಿಕ ಮೊತ್ತದ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಲಿ ಸಚಿವ ಕೆ ಎನ್ ರಾಜಣ್ಣ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು. ಕೋರ್ಟ್ ಮೂರು ತಿಂಗಳಲ್ಲಿ ಪ್ರಕರಣ ಇತ್ಯರ್ಥ ಮಾಡುವಂತೆ ಸರ್ಕಾದ ಮುಖ್ಯಕಾರ್ಯದರ್ಶಿಗಳಿಗೆ ಸೂಚಿಸಿತ್ತು. ಅದರೆ, ಸರ್ಕಾರ ಇದುವರೆಗೂ ಯಾವುದೇ ಕ್ರಮಕೈಗೊಂಡಿಲ್ಲ. ಹೀಗಾಗಿ ರಾಜ್ಯಪಾಲರಿಗೆ ದಿನೇಶ್ ಕಲ್ಲಹಳ್ಳಿ ಪತ್ರಬರೆದಿದ್ದಾರೆ.

ರಾಜ್ಯ ಅಪೆಕ್ಸ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಸಿಎನ್ ದೇವರಾಜ್‌ಅವರು ಖಾಸಗಿ ವ್ಯಕ್ತಿಗಳು, ವಾಣಿಜ್ಯ ಸಂಸ್ಥೆಗಳು, ಟ್ರಸ್ಟ್‌ಗಳಿಗೆ ಯಾವುದೇ ಜಾಮೀನು ಮತ್ತು ಭದ್ರತೆ ಪಡೆಯದೇ ಕಟ್ಟಡ ನಿರ್ಮಾಣ ಕಂಪನಿ, ಚಿನ್ನದ ಅಂಗಡಿ, ಸಕ್ಕರೆ ಕಾರ್ಖಾನೆಗಳಿಗೆ ನೂರಾರು ಕೋಟಿ ರೂಪಾಯಿ ನೀಡಲಾಗಿದೆ. ಈ ಸಾಲದ ವ್ಯವಹಾರದಲ್ಲಿ ಅವ್ಯವಹಾರ ನಡೆದಿದ್ದು, ಇದು ತನಿಖೆಯಿಂದಲೂ ಸಾಬೀತಾಗಿದೆ. ಈ ಎಲ್ಲಾ ಪ್ರಕರಣಗಳ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಶಿಫಾರಸ್ಸು ಮಾಡಲಾಗಿದೆ.ಸಚಿವ ಕೆ ಎನ್ ರಾಜಣ್ಣ ವಿರುದ್ಧ ಅಪೇಕ್ಸ್ ಬ್ಯಾಂಕ್ ನಲ್ಲಿ ಎರಡು ಸಾವಿರ ಕೋಟಿಗೂ ಅಧಿಕ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಲಾಗಿತ್ತು ಈ ಒಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮೂರು ತಿಂಗಳ ಒಳಗಾಗಿ ಪ್ರಕರಣವನ್ನ ಇತ್ಯರ್ಥಪಡಿಸಿ ಎಂದು ಸೂಚನೆ ನೀಡಿತ್ತು.

ಸರ್ಕಾರ ಇದುವರೆಗೂ ಯಾವುದೇ ರೀತಿಯಾದಂತಹ ಕ್ರಮ ಕೈಗೊಂಡಿಲ್ಲ. ಅಪೆಕ್ಸ್ ಬ್ಯಾಂಕ್ ಅಕ್ರಮಗಳ ಕುರಿತು ಸಚಿವ ಕೆ.ಎನ್. ರಾಜಣ್ಣ ಅವರನ್ನು ಕರ್ನಾಟಕ ಲೋಕಾಯುಕ್ತ ವಿಶೇಷ ನ್ಯಾಯಾಲಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ 1988ರ ಪ್ರಕರಣ 19 ಮತ್ತು ದಂಡ ಪ್ರಕ್ರಿಯೆ ಸಂಹಿತೆ 1973 ಖಾಸಗಿ ತನಿಖೆಗೊಳಪಡಿಸಲು ದೂರು ದಾಖಲಿಸಿ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಅವರು ರಾಜ್ಯಪಾಲರಿಗೆ 2023ರ ಆಗಸ್ಟ್ 29ರಂದು ದೂರು ಸಲ್ಲಿಸಿದ್ದರು. ಆದರೆ, ಈ ಕುರಿತು ರಾಜ್ಯ ಸರ್ಕಾರವು ಇದುವರೆಗೂ ಯಾವುದೇ ಕ್ರಮವಹಿಸಿಲ್ಲ ಎಂದು ತಿಳಿದು ಬಂದಿದೆ.

# ಮುನಿರತ್ನ ಜಾಮೀನು ವಿಚಾರಣೆ ಅರ್ಜಿ ಆದೇಶ ಕಾಯ್ದಿರಿಸಿದ ಕೋರ್ಟ್

**ಬೆಂಗಳೂರು, ಸೆ. 18 :** ಗುತ್ತಿಗೆದಾರನಿಗೆ ಜೀವ ಬೆದರಿಕೆ ಹಾಗೂ ಜಾತಿ ನಿಂದನೆ ಮಾಡಿದ ಆರೋಪ ಎದುರಿಸುತ್ತಿರುವ ಬಿಜೆಪಿ ಶಾಸಕ ಮುನಿರತ್ನ ಅವರನ್ನು ಬೆಂಗಳೂರಿನ ವಿಶೇಷ ನ್ಯಾಯಾಲಯ ಮಂಗಳವಾರ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದು, ಈಗಾಗಲೇ ಇಂದು ಜಾಮೀನು ಅರ್ಜಿಯ ವಿಚಾರಣೆ ನಡೆಸಿದ್ದು, ಜಾಮೀನು ಅರ್ಜಿಯ ಆದೇಶವನ್ನು ಕೋರ್ಟ್ ನ ಜಡ್ಜ್ ಸಂತೋಷ್ ಗಜಾನನ ಭಟ್ ನಾಳೆಗೆ ಕಾಯ್ದಿರಿಸಿದ್ದಾರೆ.ಇದೀಗ ಎರಡನೇ ಕೇಸಿನಲ್ಲೂ ಕೂಡ ನ್ಯಾಯಾಲಯ ಆದೇಶವನ್ನು ಕಾಯ್ದಿರಿಸಿದೆ.

ಇಂದು ಬೆಂಗಳೂರು 82ನೇ ಸಿಸಿಎಚ್ ಕೋರ್ಟ್ ನಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ವಿಚರಣೆ ನಡೆಯಿತು. ಸದ್ಯ ಎರಡನೇ ಕೇಸಿನಲ್ಲಿ ಕೂಡ ನ್ಯಾಯಾಲಯ ಮುನಿರತ್ನ ಸಲ್ಲಿಸಿದ ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ನಡೆಸಿ ಆದೇಶವನ್ನು ಕಾಯ್ದಿರಿಸಿದೆ.

ಬಿಬಿಎಂಪಿ ಗುತ್ತಿಗೆದಾರ ಚಲುವರಾಜು ಅವರಿಗೆ ಕಿರುಕುಳ ನೀಡಿರುವುದು, ಜಾತಿ ನಿಂದನೆ ಮತ್ತು ಮಹಿಳೆಯ ಗೌರವಕ್ಕೆ ಧಕ್ಕೆ ತಂದ ಆರೋಪದ ಮೇಲೆ ಬೆಂಗಳೂರಿನಲ್ಲಿ ಎರಡು ಪ್ರಕರಣಗಳು ದಾಖಲಾದ ನಂತರ ಸೆಪ್ಟೆಂಬರ್ 14 ರಂದು ಕೋಲಾರದಲ್ಲಿ ಮುನಿರತ್ನ ಅವರನ್ನು ಬಂಧಿಸಲಾಗಿತ್ತು.ಮೊದಲ ಎಫ್‌ಐಆರ್‌ನಲ್ಲಿ ಮುನಿರತ್ನ ವಿರುದ್ಧ ಕ್ರಿಮಿನಲ್ ಬೆದರಿಕೆ, ಶಾಂತಿ ಭಂಗವನ್ನು ಪ್ರಚೋದಿಸುವ ಉದ್ದೇಶದಿಂದ ಉದ್ದೇಶಪೂರ್ವಕ ಅವಮಾನ, ಸುಲಿಗೆ ಮಾಡಲು ವ್ಯಕ್ತಿಯನ್ನು ಗಾಯಗೊಳಿಸುವ ಭಯ, ವಂಚನೆ ಮತ್ತು ಸ್ವಯಂಪ್ರೇರಿತವಾಗಿ ಸಿಎ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಕಾಂಗ್ರೆಸ್ ಪ್ರತಿಭಟನೆಯಲ್ಲಿ ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್ ಭಾಗಿ

**ಬೆಂಗಳೂರು, ಸೆ. 18 :** ಗುತ್ತಿಗೆದಾರನಿಗೆ ಜೀವ ಬೆದರಿಕೆ ಹಾಗೂ ಜಾತಿ ನಿಂದನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುನಿರತ್ನ ವಿರುದ್ಧ ಬೆಂಗಳೂರಿನಲ್ಲಿ ಇಂದು ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದ್ದು, ಕಾಂಗ್ರೆಸ್ ಪ್ರತಿಭಟನೆಯಲ್ಲಿ ಬಿಜೆಪಿ ಶಾಸಕ ಎಸ್ ಟಿ ಸೋಮಶೇಖರ್ ಭಾಗಿಯಾಗಿದ್ದಾರೆ.ಕೆಂಗೇರಿ ರೈಲ್ವೆ ನಿಲ್ದಾಣದ ಬಳಿ ನಡೆದ ಈ ಒಂದು ಮೌನ ಪ್ರತಿಭಟನೆಯಲ್ಲಿ ಸೌಮ್ಯ ರೆಡ್ಡಿ ಜೊತೆ ಎಸ್.ಟಿ. ಸೋಮಶೇಖರ್ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ. ಹೀಗಾಗಿ ಬಿಜೆಪಿ ಶಾಸಕ ಸೋಮಶೇಖರ್ ನಡೆ ಭಾರಿ ಕುತೂಹಲ ಮೂಡಿಸಿದೆ.ಪ್ರತಿಭಟನೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಎಸ್ ಟಿ ಸೋಮಶೇಖರ್, ಈಗಾಗಲೇ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮುನಿರತ್ನ ಮಾತನಾಡಿರುವ ಧ್ವನಿಯನ್ನು FSL ಗೆ ಕಳುಹಿಸಿದ್ದಾರೆ. ನನಗಂತೂ ನೂರಕ್ಕೆ ನೂರು ಇದೆ ಮುನಿರತ್ನ ಅವರೇ ಮಾತನಾಡಿದ್ದಾರೆ. ನನ್ನ ಕ್ಷೇತ್ರದ ಎಲ್ಲಾ ಸಮುದಾಯದವರು ಇದೊಂದು ಹೀನಾಯ ಕೃತ್ಯ ನೀವು ಇದರಲ್ಲಿ ಭಾಗವಹಿಸಬೇಕು ಎಂದರೆ ನಾನು ಹಿಂದಕ್ಕೆ ಸರಿದುಕೊಳ್ಳಬೇಕಾ ಎಂದು ಅವರು ಮಾಧ್ಯಮದವರಿಗೆ ಪ್ರಶ್ನಿಸಿದರು.ಈ ಕ್ಷೇತ್ರದ ದಲಿತ ಮತ್ತು ಜೈ ಭೀಮ ಸಮಿತಿಯವರು, ದಲಿತ ಸಂಘಟನೆ ಅವರು ನನ್ನ ಕಚೇರಿಗೆ ಬಂದು ನಮ್ಮ ವಿರುದ್ಧ ನಮ್ಮ ಕಮ್ಯೂನಿಟಿ ವಿರುದ್ಧ ಮಾತನಾಡಿದ್ದಾರೆ ಅಂದರೆ ನಾನು ಹಿಂದೆ ಸರಿದಯಬೇಕಾ ಮಹಿಳೆಯರು ಎಲ್ಲರೂ ಬಂದು ಮಹಿಳೆಯರ ಬಗ್ಗೆ ಕೆಟ್ಟದಾಗಿ ಮಾತನಾಡಿದ್ದಾರೆ ಅಂದರೆ ನಾನು ಹಿಂದೆ ಸರಿದು ಕೊಳ್ಳಬೇಕಾ ಎಂದು ಪ್ರಶ್ನಿಸಿದರು.

# ಮೈಸೂರು ದಸರಾ ಉತ್ಸವ: ಆಸಕ್ತಿ, ಶ್ರದ್ಧೆ, ಭಕ್ತಿಗಳಿಂದ ಆಚರಿಸಿ–ರಾಜ್ಯ ಸರ್ಕಾರಕ್ಕೆ ಅಶೋಕ್ ಸಲಹೆ

**ಬೆಂಗಳೂರು, ಸೆ. 18 :** ಮೈಸೂರು ದಸರಾ ಉತ್ಸವ ಅದ್ದೂರಿ ಆಚರಣೆ ಹೆಸರಿನಲ್ಲಿ ಹಗರಣಕ್ಕೆ ವೇದಿಕೆಯಾಗದಿರಲಿ ಎಂಬುದಾಗಿ ವಿಪಕ್ಷ ನಾಯಕ ಆರ್.ಅಶೋಕ್ ಸಲಹೆ ಮಾಡಿದ್ದಾರೆ. ಬುಧವಾರ ತಮ್ಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ, ನಾಡಹಬ್ಬ ಮೈಸೂರು ದಸರಾ ಉತ್ಸವವನ್ನ ಅದ್ದೂರಿಯಾಗಿ ಆಚರಿಸಬೇಕು ಎಂಬ ಸರ್ಕಾರದ ನಿರ್ಧಾರ ಸ್ವಾಗತಾರ್ಹ. ಆದರೆ ಅದ್ದೂರಿ ದಸರಾ, ಕಾಂಗ್ರೆಸ್ ಸರ್ಕಾರದದ ಮತ್ತೊಂದು ಅದ್ದೂರಿ ಹಗರಣಕ್ಕೆ ವೇದಿಕೆ



ಆಗದಿರಲಿ ಎನ್ನುವುದೇ ಕನ್ನಡಿಗರ ಆಶಯವನ್ನು ವ್ಯಕ್ತ ಪಡಿಸಿದ್ದಾರೆ.

ಕಳೆದ ವರ್ಷ ಅಂತರರಾಷ್ಟ್ರೀಯ ಖ್ಯಾತಿಯ ಸರೋದ್ ವಾದಕ ಪಂಡಿತ್ ತಾರಾನಾಥ್ ಅವರ ಬಳಿಯೂ ಪರ್ಸಂಟೇಜ್ ಕಮಿಷನ್ ಕೇಳಿ ಕರ್ನಾಟಕದ ಮಾನ ಹರಾಜು ಹಾಕಿದ್ದ ಕಾಂಗ್ರೆಸ್ ಸರ್ಕಾರ, ಈ ವರ್ಷವಾದರೂ ನಾಡಹಬ್ಬ ದಸರಾ ಮಹೋತ್ಸವಕ್ಕೆ ಭ್ರಷ್ಟಾಚಾರದ ಸೋಂಕು ತಗುಲಿಸದೆ ನಾಡಿನ ಸಂಸ್ಕೃತಿ, ಪರಂಪರೆಯ ಗೌರವ ಉಳಿಸುತ್ತೋ ಅಥವಾ ಈ ವರ್ಷವೂ ಮತ್ತೊಂದು ಭ್ರಷ್ಟಾಚಾರದ ಅಂಬಾರಿ ಹೊತ್ತು ಕನ್ನಡಿಗರ ಮಾನ ಕಳೆಯುತ್ತೋ ಕಾದು ನೋಡಬೇಕು ಎಂದಿದ್ದಾರೆ. ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ ಅಂದರೆ ಅದು ಕರ್ನಾಟಕದ ಭವ್ಯ ಸಾಂಸ್ಕೃತಿಕ ಪರಂಪರೆಯ ಪ್ರತೀಕ. ಇಡೀ ದೇಶವೇ, ಪ್ರಪಂಚವೇ ಎದುರು ನೋಡುವ ಇಂತಹ ಉತ್ಸವವನ್ನ ರಾಜ್ಯ ಸರ್ಕಾರ ಅತ್ಯಂತ ಆಸಕ್ತಿ, ಶ್ರದ್ಧೆ, ಭಕ್ತಿಗಳಿಂದ ಆಚರಿಸಬೇಕು. ಇಲ್ಲವಾದರೆ ಈ ಸರ್ಕಾರ ಆ ತಾಯಿ ಚಾಮುಂಡೇಶ್ವರಿಯ ಶಾಪಕ್ಕೆ ಗುರಿಯಾಗುವುದು ನಿಶ್ಚಿತ ಎಂದು ಹೇಳಿದ್ದಾರೆ.

# 503 ಕ್ರಿಮಿನಲ್, ರಿಟ್ ಅರ್ಜಿಗಳ ವಿಚಾರಣೆ ನ್ಯಾ.ಎಂ. ನಾಗಪ್ರಸನ್ನ ಸಾಧನೆ

**ಬೆಂಗಳೂರು, ಸೆ. 18 :** ಕ್ಷಿಪ್ರಗತಿಯಲ್ಲಿ ಅರ್ಜಿಗಳ ವಿಲೇವಾರಿಗೆ ಹೆಸರಾದ ಹೈಕೋರ್ಟ್ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಮಂಗಳವಾರ ಒಂದೇ ದಿನ 503 ಅರ್ಜಿಗಳ ವಿಚಾರಣೆ ನಡೆಸಿದ್ದಾರೆ. ಬೆಂಗಳೂರು ಪ್ರಧಾನ ಪೀಠದಲ್ಲಿರುವ 17ನೇ ಕೋರ್ಟ್ ಹಾಲ್ ನಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ಮಂಗಳವಾರದ ಕಲಾಪದಲ್ಲಿ ಪಟ್ಟಿ ಮಾಡಲಾಗಿದ್ದ ಒಟ್ಟು 503 ಕ್ರಿಮಿನಲ್ ಹಾಗೂ ರಿಟ್ ಅರ್ಜಿಗಳ ವಿಚಾರಣೆಯನ್ನು ದಿನದ ಕಲಾಪದ ಅವಧಿ ಪೂರ್ಣಗೊಳ್ಳುವ 45 ನಿಮಿಷ ಮೊದಲೇ ಮುಕ್ತಾಯಗೊಳಿಸಿದ್ದಾರೆ.



ಇವುಗಳಲ್ಲಿ 187 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. 125 ಪ್ರಕರಣಗಳಲ್ಲಿ ಮಧ್ಯಂತರ ಆದೇಶ ನೀಡಲಾಗಿದೆ.ಹೈಕೋರ್ಟ್ ನ ಮತ್ತೊಬ್ಬ ಹಿರಿಯ ನ್ಯಾಯಮೂರ್ತಿ, ಪ್ರಸ್ತುತ ಧಾರವಾಡ ಪೀಠಾಸೀನ ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಹಾಗೂ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿಬ್ಬರೂ ನಿಯಮಿತವಾಗಿ ತಮ್ಮಗಳ ಸರದಿಗೆ ಒಪ್ಪಿಸುವ ಯಾವುದೇ ವರ್ಗಗಳ ಅರ್ಜಿಗಳ ಕ್ಷಿಪ್ರ ವಿಲೇವಾರಿಯಲ್ಲಿ ಮುಂಚೂಣಿಯಲ್ಲಿದ್ದಾರೆ. ಈ ಹಿಂದೆ ನಾಗಪ್ರಸನ್ನ ಒಂದು ದಿನದ ಕಲಾಪದಲ್ಲಿ 600ಕ್ಕೂ ಅಧಿಕ ಅರ್ಜಿಗಳ ವಿಲೇವಾರಿ ಮಾಡಿದ್ದಾರೆ.

# ಒಂದು ದೇಶ, ಒಂದು ಚುನಾವಣೆ: ಕೇಂದ್ರದ ಸಮರ್ಥ ನಿರ್ಧಾರ

**ಬೆಂಗಳೂರು, ಸೆ. 18 :** ಕೇಂದ್ರದ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಎನ್‌ಡಿಎ ಸರಕಾರ ಒಂದು ದೇಶ, ಒಂದು ಚುನಾವಣೆ ಸಂಬಂಧ ಒಂದು ಸಮರ್ಥ ನಿರ್ಧಾರ ಮಾತ್ರವಲ್ಲದೆ, ಐತಿಹಾಸಿಕ ತೀರ್ಮಾನ ಮಾಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕರಾದ ಬಿ.ವೈ.ವಿಜಯೇಂದ್ರ ಅವರು ಮೆಚ್ಚುಗೆ ಸೂಚಿಸಿದ್ದಾರೆ. ಮಾಧ್ಯಮಗಳಿಗೆ ಇಂದು ಹೇಳಿಕೆ ಬಿಡುಗಡೆ ಮಾಡಿದ ಅವರು, ದೇಶದ ಹಿತಾಸಕ್ತಿಯ ಪ್ರಮುಖ ಉದ್ದೇಶ ಇದರ ಹಿಂದಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

1951, 1967 ರಲ್ಲಿ ಏಕಕಾಲಕ್ಕೆ ಚುನಾವಣೆ ನಡೆದಿತ್ತು. ಕಾನೂನು ಆಯೋಗವು 1999ರ ತನ್ನ 170ನೇ ವರದಿಯಲ್ಲಿ ಐದು ವರ್ಷಗಳಿಗೆ ಒಮ್ಮೆ ಲೋಕಸಭೆ ಮತ್ತು ಎಲ್ಲ ರಾಜ್ಯಗಳ ವಿಧಾನಸಭೆಗಳಿಗೆ ಚುನಾವಣೆ ನಡೆಸುವ ಕುರಿತು ತಿಳಿಸಿತ್ತು ಎಂದು ಮಾಜಿ ರಾಷ್ಟ್ರಪತಿ ರಾಮನಾಥ ಕೋವಿಂದ್ ಅವರ ನೇತೃತ್ವದ ಉನ್ನತ ಮಟ್ಟದ ಸಮಿತಿ ನೀಡಿದ ವರದಿಯಲ್ಲಿರುವ ಅಂಶಗಳ ಕುರಿತು ಅವರು ಗಮನ ಸೆಳೆದಿದ್ದಾರೆ. ಮೊದಲ ಹಂತದಲ್ಲಿ ಲೋಕಸಭೆ ಮತ್ತು ಎಲ್ಲ ರಾಜ್ಯಗಳ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವುದು ಮತ್ತು ಈ ಸಾರ್ವತ್ರಿಕ ಚುನಾವಣೆ ನಡೆದ 100 ದಿನಗಳ ಒಳಗೆ ಎರಡನೇ ಹಂತದಲ್ಲಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್, ಪುರಸಭೆ ಮತ್ತಿತರ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ಉದ್ದೇಶವಿದೆ.

ಇದು ಅತ್ಯಂತ ಸ್ವಾಗತಾರ್ಹ ಕ್ರಮ ಎಂದು ವಿವರಿಸಿದ್ದಾರೆ. ಇದಕ್ಕೆ ಒಂದೇ ಮತದಾರರ ಪಟ್ಟಿ ಬಳಕೆಗೆ ಅವಕಾಶವಿದೆ



ಎಂದು ತಿಳಿಸಿದ್ದಾರೆ. 28 ರಾಜ್ಯಗಳು, 140 ಕೋಟಿ ಜನರನ್ನು ಹೊಂದಿರುವ ಬೃಹತ್ ಪ್ರಜಾಪ್ರಭುತ್ವ ರಾಷ್ಟ್ರ ನಮ್ಮದು. ಭಾರತದಲ್ಲಿ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗೆ ಸಾಕಷ್ಟು ಹಣ ಖರ್ಚಾಗುತ್ತಿತ್ತು. ಸಾಕಷ್ಟು ಜನ ಸರಕಾರಿ ನೌಕರರ ಶ್ರಮ ವ್ಯಯ ಆಗುತ್ತಿತ್ತು ಎಂದಿದ್ದಾರೆ. ರಾಜಕೀಯ ಪಕ್ಷಗಳು, ಚುನಾವಣಾ ಸ್ಪರ್ಧಿಗಳು, ಸಾವಿರಾರು ಕೋಟಿ ಹಣವನ್ನು ಖರ್ಚು ಮಾಡಬೇಕಾಗುತ್ತಿತ್ತು. ದೇಶದ ಹಣ ಉಳಿಸಿ ಅದನ್ನು ಅಭಿವೃದ್ಧಿಗೆ ಬಳಸಬೇಕು, ಬಹಳ ವೆಚ್ಚದಾಯಕ ಚುನಾವಣೆಯನ್ನು ಕಡಿಮೆ ವೆಚ್ಚದಾಯಕ ಚುನಾವಣೆಯನ್ನಾಗಿ ಮಾಡಬೇಕು ಎಂಬ ದೂರದೃಷ್ಟಿಯ ನಿರ್ಧಾರ ಮೋದಿಜೀ ಅವರದು. ಈ ಹಿನ್ನೆಲೆಯಲ್ಲಿ ಮಾಜಿ ರಾಷ್ಟ್ರಪತಿ ರಾಮನಾಥ ಕೋವಿಂದ್ ಅವರ ನೇತೃತ್ವದ ಉನ್ನತ ಮಟ್ಟದ ಸಮಿತಿ ರಚಿಸಲಾಗಿತ್ತು. ಒಂದು ದೇಶ, ಒಂದು ಚುನಾವಣೆ ಮಾಡುವ ವಿಚಾರದಲ್ಲಿ ಅವರು ವರದಿಯನ್ನು ಪ್ರಧಾನಿಯವರಿಗೆ ಸಲ್ಲಿಸಿದ್ದರು ಎಂದು ವಿವರಿಸಿದ್ದಾರೆ.

# ಬಂದೀಖಾನೆಯಲ್ಲಿ ದರ್ಶನ್ ಕಿರಿಕಿರಿ ಮಾಡಿದರೆ ಬೇಲ್ ಸಿಗುವುದು ಕಷ್ಟ

**ಬೆಂಗಳೂರು, ಸೆ. 18 :** ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ನಟ ದರ್ಶನ್ ಬಂಧಿಖಾನೆಯಲ್ಲಿ ಕಿರಿಕಿರಿ ಮಾಡಿದರೆ ಬೇಲ್ ಸಿಗುವುದು ಕಷ್ಟವಾಗುತ್ತದೆ ಎಂದು ವಕೀಲರು ಎಚ್ಚರಿಕೆಯ ಸಂದೇಶ ರವಾನಿಸಿದ್ದಾರೆ. ವಕೀಲರ ಎಚ್ಚರಿಕೆಯಿಂದ ಎಚ್ಚೆತ್ತುಕೊಂಡಿರುವ ದರ್ಶನ್, ತಮ್ಮ ವರ್ತನೆಯನ್ನು ಬದಲಾಯಿಸಿಕೊಂಡಿದ್ದಾರೆ. ಬಳ್ಳಾರಿ ಸೆಂಟ್ರಲ್ ಜೈಲಿನಲ್ಲಿರುವ ದರ್ಶನ್, ತಮಗೆ ಟಿವಿ, ಫೋನ್ ಸೌಲಭ್ಯ ಒದಗಿಸುವಂತೆ ದುರ್ನಡತೆ ತೋರುತ್ತಿದ್ದರು. ಈ ಹಿನ್ನೆಲೆಯಲ್ಲಿ ನಡತೆಯನ್ನು ಬದಲಾಯಿಸಿ ಕೊಳ್ಳಬೇಕೆಂದು ವಕೀಲರು ಪತ್ರ ಬರೆದಿದ್ದರು. ಈಗ ದರ್ಶನ್ ವರ್ತನೆಯಲ್ಲಿ ಬದಲಾವಣೆ ಕಂಡು ಬಂದಿದೆ ಎಂದು ಮೂಲಗಳು ತಿಳಿಸಿವೆ. ದರ್ಶನ್‌ಗೆ ವಕೀಲರು



ಬರೆದಿರುವ ಪತ್ರದಲ್ಲಿ ಜೈಲಿನಲ್ಲಿ ಅನಗತ್ಯವಾಗಿ ಕಿರಿಕ್ ಮಾಡಿಕೊಳ್ಳಬೇಡಿ. ಅದೇ ರೀತಿ ಮಾಧ್ಯಮಗಳ ಮೇಲೆ ದುರ್ನಡತೆ ತೋರುವ ಕುರಿತು ಜೈಲಿನಲ್ಲಿ ಕಿರಿಕಿರಿ ಮಾಡಬೇಡಿ. ವರ್ತನೆ ಬದಲಿಸಿಕೊಳ್ಳದಿದ್ದರೆ ನ್ಯಾಯಾಲಯದಲ್ಲಿ ಜಾಮೀನು ಕೋರಿ ಅರ್ಜಿ ಸಲ್ಲಿಸುವ ವೇಳೆ ಸಮಸ್ಯೆಯಾಗುತ್ತದೆ ಎಂದು ವಕೀಲರು ಪತ್ರದಲ್ಲಿ ಉಲ್ಲೇಖಿಸಿದ್ದರು.

ಮಂಗಳವಾರ ದರ್ಶನ್ ಪತ್ನಿ ವಿಜಯಲಕ್ಷ್ಮಿ ಹಾಗೂ ಆಪ್ತರು ಬಳ್ಳಾರಿ ಜೈಲಿಗೆ ಭೇಟಿ ನೀಡಿದ್ದರು. ಅವರು ಭೇಟಿ ನೀಡಿದ್ದ ಸಂದರ್ಭದಲ್ಲಿ ನಗುತ್ತ ಸೆಲ್‌ನಿಂದ ಹೊರಬಂದಿದ್ದರು. ಭೇಟಿಯ ಬಳಿಕವೂ ನಗುತ್ತಲೆ ಸೆಲ್ಗೆ ವಾಪಸ್ಸಾಗಿದ್ದರು. ವಕೀಲರ ಪತ್ರ ತಲುಪಿಸ ಬಳಿಕ ಎಚ್ಚೆತ್ತುಕೊಂಡಿರುವ ದರ್ಶನ್, ಜೈಲಿನಲ್ಲಿ ತಮ್ಮ ವರ್ತನೆ ಬದಲಾಯಿಸಿಕೊಂಡಿದ್ದಾರೆ.


ಇದೇ ವೇಳೆ ಪತಿ ದರ್ಶನ್ಗೆ ಜಾಮೀನು ಕೊಡಿಸುವ ಬಗ್ಗೆ ವಿಜಯಲಕ್ಷ್ಮಿ ಚಿಂತಾಕ್ರಾಂತರಾಗಿದ್ದು, ಭೇಟಿ ಸಂದರ್ಭದಲ್ಲಿ ಜಾಮೀನು ವಿಚಾರವಾಗಿ ದರ್ಶನ್ ಚರ್ಚೆ ನಡೆಸಿದ್ದಾರೆ. ಜಾಮೀನು ಅರ್ಜಿ ಸಲ್ಲಿಸುವುದು ಯಾವಾಗ ಎಂದು ಪ್ರಶ್ನಿಸಿದ್ದಾರೆ.

## ಕುರ್ಚಿಗೆ ಬೇಡಿಕೆ

**ಒಂದೊಂದೇ ಬೇಡಿಕೆಯನ್ನು ಜೈಲು ಅಧಿಕಾರಿಗಳ ಬಳಿ ಬೇಡಿಕೆ ಇಡುತ್ತಿದ್ದಾರೆ. ಸರ್ಜಿಕಲ್ ಚೇರ್ ಆಯ್ತು, ಟಿವಿ ಅಯ್ತು, ಫೋನ್ ಕಾಲ್ ಮಾಡೋದಾಯ್ತು. ಇದೀಗ ಕೂರಲು ಚೇರ್, ಮಲಗಲು ದಿಂಬು ಮತ್ತು ವಿಟಮಿನ್ ಟ್ಯಾಬ್ಲೆಟ್ ಬೇಡಿಕೆ ಇಟ್ಟಿದ್ದಾರೆ. ಕೋರ್ಟ್ ಕಲಾಪದ ವೇಳೆ ನ್ಯಾಯಾಧೀಶರ ಬಳಿ ಚೇರ್ ಬಗ್ಗೆ ದರ್ಶನ್ ಪರ ವಕೀಲರು ಪ್ರಸ್ತಾಪ ಮಾಡಿದ್ದಾರೆ. ಬಳ್ಳಾರಿ ಸೆಂಟ್ರಲ್ ಜೈಲಾಧಿಕಾರಿಗಳು ಚೇರ್ ಕೊಡ್ತಿಲ್ಲ ಎಂದು ವಕೀಲರು ಹೇಳಿದ್ದರು. ಆದರೆ ಆರೋಪಿ ದರ್ಶನ್ ಗೆ ಚೇರ ಕೊಡೋ ಬಗ್ಗೆ ಇದುವರೆಗೂ ನಿರ್ಧಾರ ಮಾಡದ ಜೈಲು ಅಧಿಕಾರಿಗಳು. ಸ್ಪೆಸಿಫಿಕ್ ಕೋರ್ಟ್ ಆರ್ಡರ್ ಬಂದರೆ ಮಾತ್ರ ಕೊಡೋದಾಗಿ ಜೈಲು ಅಧಿಕಾರಿಗಳು ಹೇಳುತ್ತಿದ್ದಾರೆ.**

# ಮದ್ಯಪ್ರಿಯರಿಗೆ ರಾಜ್ಯಸರ್ಕಾರ ಮತ್ತೆ ಶಾಕ್

**ಬೆಂಗಳೂರು, ಸೆ. 18 :** ಬಿಯರ್ ಪ್ರಿಯರಿಗೆ ರಾಜ್ಯಸರ್ಕಾರ ಮತ್ತೆ ಶಾಕ್ ನೀಡಲು ಸಜ್ಜಾಗಿದೆ. ಈಗಾಗಲೇ ಎರಡು ಬಾರಿ ದರ ಏರಿಸಿದ್ದು, ಈಗ ಅಕ್ಟೋಬರ್ ಮೊದಲ ವಾರದಿಂದಲೇ ಪರಿಷ್ಕೃತ ದರ ಜಾರಿ ಮಾಡಲು ಮುಂದಾಗಿದೆ ಎಂದು ಮೂಲಗಳು ತಿಳಿಸಿವೆ. 2023ರ ಜುಲೈನಲ್ಲಿ ಮಂಡಿಸಿದ್ದ ಮುಂಗಡ ಪತ್ರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಐಎಂಎಲ್ ಮೇಲೆ ಶೇ. 20 ಮತ್ತು ಬಿಯರ್ ಮೇಲೆ ಶೇ. 10 ಅಬಕಾರಿ ಶುಲ್ಕ ಹೆಚ್ಚಳ ಮಾಡಿದ್ದರು.



ಹಾಗೆಯೇ ರಾಜ್ಯದಲ್ಲಿ ತಯಾರಿಸಲಾದ ಹಾಗೂ ಆಮದು ಮಾಡಿಕೊಳ್ಳುವ ಬಿಯರ್ ಬಾಟಲ್ ಮೇಲೆ ಹೆಚ್ಚುವರಿ ಅಬಕಾರಿ ಶುಲ್ಕವನ್ನು ಶೇ. 10 ರಷ್ಟು ಹೆಚ್ಚಿಸಲಾಗಿತ್ತು ಮತ್ತೆ ಬಿಯರ್ ದರ ಏರಿಕೆಗೆ ಅಬಕಾರಿ ಇಲಾಖೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಇದಕ್ಕೆ ಒಪ್ಪಿಗೆ ಸೂಚಿಸಿದರೆ ಮುಂದಿನ ತಿಂಗಳಿನಿಂದಲೇ ಬಿಯರ್ ದರ ಮತ್ತಷ್ಟು ದುಬಾರಿಯಾಗುವುದು ನಿಶ್ಚಿತವಾಗಿದೆ.

ಆ. 29 ರಿಂದ ಪ್ರೀಮಿಯಂ, ಸೆಮಿ ಪ್ರೀಮಿಯಂ,ಮದ್ಯದ ದರ ಇಳಿಕೆ ಮಾಡಿತ್ತು. ಈಗ ಮತ್ತೊಮ್ಮೆ ಬಿಯರ್ ದರ ಹೆಚ್ಚಳಕ್ಕೆ ಸರ್ಕಾರ ಮುಂದಾಗಿದೆ. ಬಿಯರ್ ದರ ಏರಿಕೆಗೆ ಚಿಂತನೆ ನಡೆಸಿರುವ ಸರ್ಕಾರದ ಪ್ರಸ್ತಾಪಕ್ಕೆ ಬಾರ್ ಮಾಲೀಕರು ಬೇಸರ ಹೊರಹಾಕಿದ್ದಾರೆ. ಒಂದೂವರೆ ವರ್ಷದಲ್ಲಿ ಮೂರನೇ ಬಾರಿಗೆ ಬಿಯರ್ ದರ ಪರಿಷ್ಕರಣೆಯಾಗುತ್ತಿದೆ.

ಈಗಾಗಲೇ ರಾಜ್ಯದಲ್ಲಿ ಬಿಯರ್ ಮಾರಾಟ ಹೆಚ್ಚಾಗಿದ್ದು, ಸರ್ಕಾರ ಸುಂಕ ಹೆಚ್ಚಳ ಮಾಡಿದರೆ ಗ್ರಾಹಕರು ಮತ್ತು ಮಾರಾಟಗಾರರಿಗೂ ಹೊಡೆತ ಬೀಳುವ ಆತಂಕವೂ ಎದುರಾಗಿದೆ.



ಮೈಸೂರಿನ ರಾಜಮಾರ್ಗದಲ್ಲಿ ಬುಧವಾರ ನಡೆದ ಜಂಬೂಸವಾರಿಯ ತಾಲೀಮು ವೇಳೆ ದಸರಾ ಜಂಬೂ ತಂಡದ ಪ್ರಮುಖ ಆನೆ ಅಭಿಮನ್ಯು ಚಿನ್ನದ ಅಂಬಾರಿಯ ಮರದ ಪ್ರತಿಕೃತಿಯನ್ನು ಹೊತ್ತೊಯ್ದಿತು.

# ಬೆಳಗಾವಿ–ಪುಣೆ, ಧಾರವಾಡ–ಬೆಂಗಳೂರು ರೈಲು ಟಿಕೆಟ್ ದರ ಇಳಿಕೆ: ಜಗದೀಶ್ ಶೆಟ್ಟರ್ ಭರವಸೆ

**ಹುಬ್ಬಳ್ಳಿ, ಸೆ. 18:** ಬೆಳಗಾವಿಯಿಂದ ಪುಣೆ ವರೆಗೆ ಅತೀ ವೇಗ ಮತ್ತು ಐಶಾರಾಮಿ ಸಾರಿಗೆ ಸೇವೆ ನೀಡುವ ವಂದೇ ಭಾರತ್ ರೈಲು ಸಂಚಾರಕ್ಕೆ ಪ್ರಧಾನಿ ಚಾಲನೆ ನೀಡಿದ್ದಾರೆ. ಅದೇ ರೀತಿ ಧಾರವಾಡ–ಬೆಂಗಳೂರು ವಂದೇ ಭಾರತ್ ರೈಲನ್ನು ಬೆಳಗಾವಿಗೆ ವಿಸ್ತರಣೆಗೆ ಮನವಿ ಮಾಡಲಾಗಿದೆ. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು, ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸಂಸದ ಜಗದೀಶ್ ಶೆಟ್ಟರ್ ತಿಳಿಸಿದರು.



ಪ್ರಧಾನಿ ನರೇಂದ್ರ ಮೋದಿಯವರು ಪುಣೆಯಿಂದ ಬೆಳಗಾವಿವರೆಗಿನ ವಂದೇ ಭಾರತ್ ರೈಲಿಗೆ ಚಾಲನೆ ನೀಡಿದ ಬಳಿಕ ಅವರು ಪ್ರಯಾಣಿಕರ ಜೊತೆಗೆ ರೈಲು ಪ್ರಯಾಣ ಮಾಡಿದರು. ಪ್ರಯಾಣದ ಅನುಭವ ಹಂಚಿಕೊಂಡರು. ಬಳಿಕ ಸುದ್ದಿಗಾರರ ಜೊತೆಗೆ ಮಾತನಾಡಿ, ಬೆಂಗಳೂರು ಬೆಳಗಾವಿ ವಂದೇ ಭಾರತ್ ರೈಲು ವಿಸ್ತರಣೆ, ಟಿಕೆಟ್ ದರ ಇಳಿಕೆ ಕುರಿತು ಅಪ್ಡೇಟ್ ಕೊಟ್ಟರು. ಪುಣೆಯಿಂದ ಬೆಳಗಾವಿವರೆಗೆ ವಂದೇ ಭಾರತ್ ರೈಲಿನ ಬೇಡಿಕೆ ಬಹುದಿನಗಳಿಂದ ಇತ್ತು. ನಾನು ಸಂಸದನಾದ ನಂತರ ಕೇಂದ್ರ ರೈಲ್ವೆ ಸಚಿವರನ್ನು ಭೇಟಿ ಮಾಡಿ ಈ ಬಗ್ಗೆ ಮನವಿ ಸಲ್ಲಿಸಿದ್ದೆ. ಈಗ ವಂದೇ ಭಾರತ್ ರೈಲು ಆರಂಭಿಸಲಾಗಿದ್ದು, ನಾನು ಸ್ವಾಗತಿಸುತ್ತೇನೆ ಎಂದರು.

**ವಂದೇ ಭಾರತ್ ರೈಲು ಟಿಕೆಟ್ ಬೆಲೆ ಇಳಿಕೆ :** ಅದೇ ರೀತಿ ಬೆಂಗಳೂರು–ಧಾರವಾಡ ವಂದೇ ಭಾರತ್ ರೈಲನ್ನು ಬೆಳಗಾವಿಗೆ ವಿಸ್ತರಿಸುವಂತೆ ಸಹ ಮನವಿ ಮಾಡಲಾಗಿದೆ. ಈ ರೈಲು ಸಂಚಾರ ಆರಂಭವಾದದಲ್ಲಿ ವೇಳಾಪಟ್ಟಿಗೆ ಸಂಬಂಧಿಸಿದ ಗೊಂದಲಗಳನ್ನು ಪರಿಹರಿಸಲಾಗುವುದು. ಮುಂದಿನ ದಿನಗಳಲ್ಲಿ ಈ ಮಾರ್ಗದ ವಂದೇ ಭಾರತ್ ಟಿಕೆಟ್ ದರ ಕಡಿಮೆ ಮಾಡುವಂತೆ ಸಂಬಂಧಿಸಿದವರಿಗೆ ಮನವಿ ಮಾಡಲಾಗುವುದು ಎಂದರು.


ಕೊಲ್ಲಾಪುರಕ್ಕೂ ವಂದೇ ಭಾರತ್ ರೈಲು ಬರಬೇಕು ಎಂಬುದು ಅಲ್ಲಿನ ಜನರು, ರಾಜಕೀಯ ಮುಖಂಡರ ಬೇಡಿಕೆ ಇಟ್ಟಿದ್ದರು. ಹೀಗಾಗಿ ವಾರದಲ್ಲಿ ಮೂರು ದಿನ ಆ ಮಾರ್ಗವಾಗಿ ರೈಲು ಸಂಚಾರ ಮಾಡುತ್ತದೆ. ಮುಂದಿನ ದಿನಗಳಲ್ಲಿ ಈ ಹಿಂದೆ ನಿಗದಿ ಮಾಡಿದಂತೆ ವಾರದಲ್ಲಿ ಆರು ದಿನ ಹುಬ್ಬಳ್ಳಿ–ಪುಣೆ ನಡುವೆ ಸಂಚರಿಸುವ ವಿಶ್ವಾಸ ಇದೆ ಎಂದು ಅವರು ಹೇಳಿದರು.

**ಶೆಟ್ಟರ್ ಪ್ರಯಾಣ :** ಬೆಳಗಾವಿ–ಪುಣೆ ವಂದೇ ಭಾರತ್ ರೈಲಿನಲ್ಲಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಪ್ರಯಾಣ ಮಾಡಿದರು. ಪುಣೆ ರೈಲು ನಿಲ್ದಾಣದಿಂದ ಹೊರಟ ರೈಲು ಬೆಳಗಾವಿ ಮಾರ್ಗವಾಗಿ ಹುಬ್ಬಳ್ಳಿಗೆ ಆಗಮಿಸಿತು. ಜನರಿಗೆ ಅತೀ ವೇಗದ ಮತ್ತು ಸುರಕ್ಷಿತ ಹಾಗೂ ಐಶಾರಾಮಿ ಅನುಭವ ನೀಡುವ ರೈಲು ಪ್ರಯಾಣ ಇದಾಗಿದೆ. ಈ ರೈಲು ಹೈಟೆಕ್ ತಂತ್ರಜ್ಞಾನ ಒಳಗೊಂಡಿದೆ. ವಿಶೇಷ ಅನುಭವ ನೀಡುತ್ತದೆ ಎಂದು ಜಗದೀಶ್ ಶೆಟ್ಟರ್ ತಿಳಿಸಿದರು. ಅವರ ರೈಲು ಪ್ರಯಾಣದ ವೇಳೆ ಹುಬ್ಬಳ್ಳಿ ನೈರುತ್ಯ ರೈಲ್ವೆ ವಲಯದ ಹಿರಿಯ ಅಧಿಕಾರಿಗಳು ಸಾಥ್ ನೀಡಿದರು.

### ಸೆ.27 ರಂದು ಕಸ್ತೂರಿ ರಂಗನ್ ವರದಿ

# ರಾಜ್ಯದ ಅಭಿಪ್ರಾಯ ಕೇಂದ್ರಕ್ಕೆ ಸಲ್ಲಿಕೆ : ಸಚಿವ ಈಶ್ವರ್ ಖಂಡ್ರೆ

**ಬೀದರ್, ಸೆ. 18 :** ಇದೇ ಸೆ. 27 ರೊಳಗೆ ಕೇಂದ್ರ ಸರ್ಕಾರಕ್ಕೆ ಕಸ್ತೂರಿ ರಂಗ್ ವರದಿ ಬಗ್ಗೆ ರಾಜ್ಯದ ಅಭಿಪ್ರಾಯ ಕೇಂದ್ರಕ್ಕೆ ಸಲ್ಲಿಸಲಾಗುವುದು ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.



ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಶ್ಚಿಮಘಟ್ಟ ಹಲವು ನದಿಗಳ ಮೂಲವಷ್ಟೇ ಅಲ್ಲದೆ, ಸಸ್ಯ ಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲ, ಪಕ್ಷಿ ಸಂಕುಲದ ನೆಲೆಯಾಗಿದೆ. ಇದರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಇಂದು ಪಶ್ಚಿಮಘಟ್ಟ ವ್ಯಾಪ್ತಿಯ ಬಾಧ್ಯಸ್ಥರ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸಿ, ನಂತರ ಸಚಿವ ಸಂಪುಟದ ಉಪ ಸಮಿತಿ ಸಭೆಯಲ್ಲಿ ಚರ್ಚಿಸಿ, ಮುಖ್ಯಮಂತ್ರಿಗಳೊಂದಿಗೆ ಸಮಾಲೋಚಿಸಿ ನಂತರ ಸಚಿವ ಸಂಪುಟದ ಅನುಮೋದನೆ ಪಡೆದು, ಪಶ್ಚಿಮಘಟ್ಟದ ಜೀವವೈವಿಧ್ಯ, ಜನರ ಜೀವನೋಪಾಯ ಎರಡೂ ಇರುವ ರೀತಿಯಲ್ಲಿ ಕೇಂದ್ರ ಸರ್ಕಾರಕ್ಕೆ ನಮ್ಮ ರಾಜ್ಯದ ನಿಲುವು ತಿಳಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

ಕಳೆದ 16 ತಿಂಗಳ ಅವಧಿಯಲ್ಲಿ ಅರಣ್ಯ ಇಲಾಖೆ ಸುಮಾರು 10 ಸಾವಿರ ಎಕರೆ ಭೂಮಿಯನ್ನು ಅಧಿಸೂಚಿತ ಅರಣ್ಯ ಪ್ರದೇಶವೆಂದು ಘೋಷಿಸಿದೆ. ಜೊತೆಗೆ ಬೆಂಗಳೂರು, ಕೋಲಾರ, ಬೀದರ್ ಸೇರಿದಂತೆ ರಾಜ್ಯದ ವಿವಿಧೆಡೆ ಸಾವಿರಾರು ಕೋಟಿ ರೂ ಬೆಲೆ ಬಾಳುವ 2500 ಎಕರೆಗೂ ಹೆಚ್ಚು ಅರಣ್ಯ ಭೂಮಿಯನ್ನು ಮರು ವಶಕ್ಕೆ ಪಡೆದಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

2015ಕ್ಕೆ ಮೊದಲು ಅಂದರೆ ರಾಜ್ಯ ಸರ್ಕಾರದ ನಡಾವಳಿಗೆ ಮೊದಲು ಪಟ್ಟಾ ಜಮೀನು ಮತ್ತು ಅರಣ್ಯ ಭೂಮಿ ಒತ್ತುವರಿ ಸೇರಿ 3 ಎಕರೆ ಮೀರದ ಪ್ರಕರಣಗಳಲ್ಲಿ ಮತ್ತು ಅರಣ್ಯ ಹಕ್ಕು ಕಾಯಿದೆಯ ಅರ್ಜಿ ವಿಲೇವಾರಿ ಆಗದ ಪ್ರಕರಣಗಳ ಹೊರತಾಗಿ ದೊಡ್ಡ ಅರಣ್ಯ ಒತ್ತುವರಿ ತೆರವು ಮಾಡಿಸಲು ಸ್ಪಷ್ಟ ಆದೇಶ ನೀಡಲಾಗಿದೆ. ಇದು ಸಂವಿಧಾನದ 41 (ಎ) ಮತ್ತು 51 (ಎ) ಆಶಯಗಳಿಗೆ ಅನುಗುಣವಾಗಿದೆ ಎಂದು ತಿಳಿಸಿದರು.

# ಮೆಡಿಕಲ್, ನರ್ಸಿಂಗ್ ಕಾಲೇಜು ಹೆಚ್ಚು ಶುಲ್ಕ ಪಡೆದರೆ ಕ್ರಮ

**ರಾಯಚೂರು, ಸೆ. 18:** ರಾಜ್ಯದಲ್ಲಿ ವೈದ್ಯಕೀಯ, ನರ್ಸಿಂಗ್ ಕಾಲೇಜುಗಳು ಸರ್ಕಾರ ನಿಗದಿಪಡಿಸಿದ್ದಕ್ಕಿಂತ ಹೆಚ್ಚಿನ ಶುಲ್ಕ ಪಡೆಯುವಂತಿಲ್ಲ. ಹಾಗೇನಾದರೂ ಪಡೆದಿದ್ದು ಕಂಡು ಬಂದರೆ ಆ ಸಂಸ್ಥೆಗಳ ಪರವಾನಗಿ ರದ್ದು ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ತಿಳಿಸಿದರು.

ಸುದ್ದಿಗಾರರ ಜತೆ ಮಾತನಾಡಿದ ಅವರು, ಈಗಾಗಲೇ ಎರಡು ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಸರ್ಕಾರಿ ಕೋಟಾದಡಿ ಸೀಟು ಪಡೆದವರಿಗೆ ಹೆಚ್ಚಿನ ಶುಲ್ಕ ಪಡೆಯುವಂತಿಲ್ಲ.



ಮುನಿರತ್ನ ಮೇಲೆ ಪ್ರಕರಣ ಆದ ಮೇಲೆ ಅವರನ್ನು ಬಂಧಿಸಲಾಗಿದೆ. ಆದರೆ, ಕಾಂಗ್ರೆಸ್ ಶಾಸಕ ಚನ್ನಾರೆಡ್ಡಿ ವಿರುದ್ಧ ಸೂಕ್ತ ಸಾಕ್ಷಿಗಳಿದ್ದರೆ ಪೊಲೀಸರು ಕ್ರಮ ಕೈಗೊಳ್ಳುತ್ತಾರೆ.

### ನಾಗಮಂಗಲ ಘಟನೆ ಎನ್‌ಐಗೆ ವಹಿಸಲ್ಲ

ನಾಗಮಂಗಲ ಘಟನೆ ಎನ್‌ಐಗೆ ವಹಿಸುವ ಅಗತ್ಯವೇ ಇಲ್ಲ. ಪೊಲೀಸರು ತನಿಖೆ ನಡೆಸುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ನಾಗಮಂಗಲ ಘಟನೆಯಲ್ಲಿ ಪೆಟ್ರೋಲ್ ಬಾಂಬ್ ಬಳಸಿದ್ದಕ್ಕೆ, ಪ್ಯಾಲೆಸ್ತೇನ್ ಧ್ವಜ ಪ್ರದರ್ಶಿಸಿದ್ದಕ್ಕೆ ಗುಪ್ತಚರ ಇಲಾಖೆ ವಿಫಲವಾಗಿದೆ ಎನ್ನಲಾಗದು. ಘಟನೆ ಹಿಂದಿರುವವರನ್ನು ಬಂಧಿಸಲಾಗಿದೆ. ಕಾನೂನು ಕಾಪಾಡುವಲ್ಲಿ ಬಿಗಿ ಕ್ರಮ ಕೈಗೊಳ್ಳಲಾಗಿದೆ. ಈ ಘಟನೆಯಲ್ಲಿ ಕೇರಳದವರು ಮತ್ತು ಬಾಂಗ್ಲಾ ವಲಸಿಗರು ಇದ್ದಾರೆ ಎಂದು ಬಿಜೆಪಿಯವರು ಮಾಡುತ್ತಿರುವ ಆರೋಪಗಳು ಪೊಲೀಸ್ ತನಿಖೆಯಿಂದ ತಿಳಿಯಲಿದೆ ಎಂದರು.

– ಡಾ.ಶರಣಪ್ರಕಾಶ ಪಾಟೀಲ್.

# ಮಹಿಳಾ ಪದವಿಪೂರ್ವ ಕಾಲೇಜುಗಳ ಆರಂಭ: ಜಮೀರ್ ಅಹ್ಮದ್ ಖಾನ್

**ಕಲಬುರ್ಗಿ, ಸೆ. 18 :** ವಕ್ಫ್ ಬೋರ್ಡ್ ವತಿಯಿಂದ ರಾಜ್ಯದ 15 ಜಿಲ್ಲೆಗಳಲ್ಲಿ ಮಹಿಳಾ ಪದವಿಪೂರ್ವ ಕಾಲೇಜುಗಳನ್ನು ಆರಂಭಿಸಲು ನಗರದಲ್ಲಿ ಮಂಗಳವಾರ ನಡೆದ ರಾಜ್ಯ ಸರ್ಕಾರದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ಈ ವಿಷಯವು ಅತ್ಯಂತ ಪ್ರಧಾನವಾಗಿದೆ ಎಂದು ವಕ್ಫ್ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಸಚಿವ ಜಮೀರ್ ಅಹ್ಮದ ಖಾನ್ ತಿಳಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ 47.76 ಕೋಟಿ ರೂ. ವೆಚ್ಚದಲ್ಲಿ 15 ಮಹಿಳಾ ಪದವಿ ಪೂರ್ವ ಕಾಲೇಜು ಸ್ಥಾಪನೆಗೆ ಅನುಮೋದನೆ ದೊರೆತಿದೆ. ಪ್ರತಿ ಕಾಲೇಜಿಗೆ 3.18 ಕೋಟಿ ರೂ ವೆಚ್ಚವಾಗಲಿದೆ ಎಂದು ಹೇಳಿದರು.

ವಕ್ಫ್ ಬೋರ್ಡ್‌ನಲ್ಲಿ ಜಮೆ ಆಗಿರುವ ಬಡ್ಡಿ ಮೊತ್ತ 47.76 ಕೋಟಿ ರೂಗಳಲ್ಲಿ ಕಲಬುರಗಿ, ಬೀದರ, ಬಾಗಲಕೋಟೆ, ಚಿತ್ರದುರ್ಗ, ಬಳ್ಳಾರಿ, ಕೊಪ್ಪಳ, ಮೈಸೂರು, ಬೆಂಗಳೂರು, ಚಿಕ್ಕಬಳ್ಳಾಪುರ, ವಿಜಯ ನಗರ, ಉಡುಪಿ, ವಿಜಯಪುರ, ಕೋಲಾರ, ದಾವಣಗೆರೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಮಹಿಳಾ ಕಾಲೇಜು ಸ್ಥಾಪನೆ ಮಾಡಲಾಗುವುದು. ಮಹಿಳಾ ಕಾಲೇಜು ಸ್ಥಾಪನೆಯಿಂದ ಸಮುದಾಯದ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ನೆರವಾಗಲಿದೆ. ಅಲ್ಲದೇ ಅದರೊಂದಿಗೆ ಕರ್ನಾಟಕ ಗೃಹ ಮಂಡಳಿ ವತಿಯಿಂದ 50:50 ಅನುಪಾತದಲ್ಲಿ ಕಲಬುರಗಿಯ ತಾವರೆಗೆರೆಯಲ್ಲಿ 80 ಕೋಟಿ ವೆಚ್ಚದಲ್ಲಿ ಒಟ್ಟು 286.28 ಎಕರೆ ಪೈಕಿ ಮೊದಲ ಹಂತದಲ್ಲಿ 87.34 ಎಕರೆ ಜಮೀನಿನಲ್ಲಿ ಹೊಸ ಬಡಾವಣೆ ನಿರ್ಮಿಸಲು ಸಂಪುಟ ಅನುಮೋದನೆ ನೀಡಿದೆ ಎಂದು ಹೇಳಿದರು.

# ಮುಡಾ ಹಗರಣ ಮರೆಮಾಚಲು ಸಂಪುಟ ಸಭೆಯ ಡ್ರಾಮಾ ನಿಲ್ಲಿಸಿ ಅಭಿವೃದ್ಧಿಗೆ ಮುಂದಾಗಲಿ: ನಾರಾಯಣಸ್ವಾಮಿ

**ಕಲಬುರಗಿ, ಸೆ. 18 :** ಮುಡಾ ಹಗರಣದಲ್ಲಿ ಸಿಲುಕಿರುವ ಸಿಎಂ ಸಿದ್ದರಾಮಯ್ಯ ಅವರು, ಅದನ್ನು ಜನರ ಮನಸ್ಸಿನಿಂದ ಮರೆಮಾಚಲು ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆ ನಡೆಸುವ ನಾಟಕವಾಡುತ್ತಿದ್ದಾರೆ. ಈ ಡ್ರಾಮಾ ನಿಲ್ಲಿಸಿ ಅಭಿವೃದ್ಧಿಗೆ ಮುಂದಾಗಬೇಕು. ಇದು ಸಚಿವ ಸಂಪುಟ ಸಭೆ ಒಂದು ದಿನದ ಸಂತೆಯಾಗಿದೆ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ರಾಜ್ಯ ಸರ್ಕಾರದ ನಡೆ ಖಂಡಿಸಿದರು.



ಜಿಲ್ಲೆಯ ವಾಡಿ ಜಂಕ್ಷನ್ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಪಕ್ಷದ ಸದಸ್ಯತ್ವದ ವಿಶೇಷ ಅಭಿಯಾನದ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಈ ಹಿಂದೆ ಹಲವು ಸಂಪುಟ ಸಭೆಗಳು ಕಲಬುರಗಿಯಲ್ಲಿ ಜರುಗಿವೆ. ಆದರೆ ಕಿಂಚಿತ್ತು ಅಭಿವೃದ್ಧಿ ಇಲ್ಲಿ ನಡೆದಿಲ್ಲ. ಕಲ್ಯಾಣ ಕರ್ನಾಟಕ ಸಮಗ್ರ ಅಭಿವೃದ್ಧಿ ಮಾಡಬೇಕು ಎನ್ನುವ ಚಿಂತನೆ ಹಾಗೂ ಕನಸು ಇಲ್ಲದ ಕಾಂಗ್ರೆಸ್ ಪಕ್ಷ ಈಗ ಹೊಸ ನಾಟಕ ಶುರು ಮಾಡಿಕೊಂಡಿದೆ ಎಂದು ಗುಡುಗಿದರು.

ಕಲ್ಯಾಣ ಕರ್ನಾಟಕ ಭಾಗಕ್ಕಿರುವ ಹಿಂದುಳಿದ ವರ್ಗಗಳ ಹಣೆಪಟ್ಟಿ ಕಳಚಲು ಹಾಗೂ ಅಭಿವೃದ್ಧಿ ದೃಷ್ಟಿಯಿಂದ ನಾನು ಪಕ್ಷದ ಸಂಘಟನೆಗಾಗಿ ಯಾದಗಿರಿ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡಿದ್ದೇನೆ. ನನ್ನ ಮಗ, ನನ್ನ ಅಳಿಯ ಹಾಗೂ ಸೊಸೆ ಅಧೀನದಲ್ಲಿರಬೇಕು ಎನ್ನುವ ಮನಸ್ಥಿತಿ ಹೊಂದಿರುವ ಗುಲಾಮಗಿರಿ ಪದ್ಧತಿ ಹೋಗಲಾಡಿಸಬೇಕಾದ ಅನಿವಾರ್ಯತೆ ಇದೆ ಎಂದು ಖರ್ಗೆ ಕುಟುಂಬವನ್ನು ಟೀಕಿಸಿದ ಅವರು, ಕುಟುಂಬ ರಾಜಕೀಯವನ್ನು ಗಡೆಗಣಿಸಬೇಕಾಗಿದೆ ಎಂದರು.

ಚಿತ್ತಾಪುರ ತಾಲ್ಲೂಕಿನಲ್ಲಿ 50 ಸಾವಿರ ಹೊಸ ಸದಸ್ಯತ್ವ ಹೊಂದುವ ಗುರಿ ಹಾಕಿಕೊಳ್ಳಬೇಕಾಗಿದೆ. ಹಲವು ಕಾರಣದಿಂದ ನಮ್ಮ ಪಕ್ಷದ ಅಭ್ಯರ್ಥಿಗಳು ಸೋತಿರಬಹುದು. ಆದರೆ ಮುಂದಿನ ಬಾರಿ ಇಲ್ಲಿ ಬಿಜೆಪಿ ಶಾಸಕರನ್ನೆ ಜನರು ಕೈಹಿಡಿದು ಆಶೀರ್ವದಿಸಲಿದ್ದಾರೆ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಆಯಸ್ಸು ಮುಂದಿನ ಮೂರು ತಿಂಗಳು ಕಾಲ ಮಾತ್ರ ಇರಲಿದೆ. ಈ ಸರಕಾರ ಉಳಿಯುವ ಯಾವುದೇ ಲಕ್ಷಣಗಳು ಇಲ್ಲ ಎಂದರು.

ಬಿಜೆಪಿ ಮುಖಂಡ ಬಸವರಾಜ ಪಂಚಾಳ ಮಾತನಾಡಿ, ಚಿತ್ತಾಪುರನಲ್ಲಿ ಬಿಜೆಪಿ ನಾಯಕತ್ವದ ಕೊರತೆ ನಮ್ಮನ್ನು ಕಾಡುತ್ತಿದೆ. ಭಯದ ವಾತಾವರಣದಲ್ಲಿ ನಮ್ಮ ಪಕ್ಷ ಸಂಘಟನೆ ಮಾಡುತ್ತಿದ್ದೇವೆ. ಸಚಿವ ಪ್ರಿಯಂಕ್ ಖರ್ಗೆ ಪಕ್ಷ ಸಂಘಟನೆಗೆ ಮುಂದಾದ ನಮ್ಮ ಮೇಲೆ ಸುಳ್ಳು ಕೇಸುಗಳನ್ನುಹಾಕಿ ಪೊಲೀಸ್ ಭಯದ ವಾತಾವರಣ ನಿರ್ಮಿಸಿದ್ದಾರೆ. ರಾಜ್ಯ ನಾಯಕರು ಚಿತ್ತಾಪುರ ಕ್ಷೇತ್ರದ ಬಗ್ಗೆ ಹೆಚ್ಚಿನ ಗಮನ ಹರಿಸುವ ಮೂಲಕ ದಿಟ್ಟ ನಾಯಕನನ್ನು ಇಲ್ಲಿ ಹುಟ್ಟು ಹಾಕಬೇಕು ಎಂದರು.

ಜಿಲ್ಲಾಧ್ಯಕ್ಷ ಶಿವರಾಜ ಪಾಟೀಲ ರದ್ದೆವಾಡಿ, ತಾಲ್ಲೂಕ ಅಧ್ಯಕ್ಷ ರವೀಂದ್ರ ಸಜ್ಜನಶೆಟ್ಟಿ, ಬಸವರಾಜ ಬೇಣ್ಣೂರು, ರಾಜು ಮುಕ್ಕಣ್ಣ, ವಿಠ್ಠಲ್ ವಾಲ್ಮೀಕಿ ನಾಯಕ, ನಗರ ಶಕ್ತಿ ಕೇಂದ್ರದ ಅಧ್ಯಕ್ಷ ವೀರಣ್ಣ ಯಾರಿ, ಮುಖಂಡರಾದ ಭೀಮರಾವ ದೊರೆ, ರಮೇಶ ಕಾರಬಾರಿ, ಸಿದ್ದಣ್ಣ ಕಲಶೆಟ್ಟಿ, ರವಿ ನಾಯಕ ಸೇರಿದಂತೆ ಹಲವರು ಭಾಗವಹಿಸಿದ್ದರು.

### ರಾಜ್ಯ ಗ್ರಾಹಕರ ವಾಜ್ಯಗಳ ಪರಿಹಾರ ಆಯೋಗ

# ಕಾಯಂ ಸಂಚಾರಿ ಪೀಠ: ಸಚಿವ ಕೆ.ಎಚ್. ಮುನಿಯಪ್ಪ ಉದ್ಘಾಟನೆ

**ಕಲಬುರಗಿ, ಸೆ. 18 :** ನಗರದಲ್ಲಿ ಕರ್ನಾಟಕ ರಾಜ್ಯ ಗ್ರಾಹಕರ ವಾಜ್ಯಗಳ ಪರಿಹಾರ ಆಯೋಗದ ಕಾಯಂ ಸಂಚಾರಿ ಪೀಠವನ್ನು ಆಆರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್. ಮುನಿಯಪ್ಪ ಅವರು ಉದ್ಘಾಟಿಸಿ, ಸಾರ್ವಜನಿಕರು ಇದರ ಸದ್ಬಳಕೆ ಮಾಡಿಕೊಳ್ಳಬೇಕೆಂದು ಮನವಿ ಮಾಡಿದರು.



ನಗರದಲ್ಲಿ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ನ್ಯಾಯಾವಾದಿಗಳ ಸಂಘದ ಸಂಯುಕ್ತಾಶ್ರಯದಲ್ಲಿ ಕಲಬುರಗಿಯಲ್ಲಿ ನೂತನವಾಗಿ ಪ್ರಾರಂಭಿಸಲಾಗುತ್ತಿರುವ ಮಿನಿ ವಿಧಾನಸೌಧ ಪಕ್ಕದಲ್ಲಿ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕಾಯಂ ಸಂಚಾರಿ ಪೀಠವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಖಾಯಂ ಸಂಚಾರಿ ಪೀಠಕ್ಕೆ ಶ್ರಮಿಸಿದ್ದಾರೆ. ಈ ಮೂಲಕ ಲೋಕಾರ್ಪಣೆಯಾಗಿದೆ ಎಂದು ತಿಳಿಸಿದರು. ನನಗೆ ಬಹಳ ಸಂತೋಷವಾಗಿರುತ್ತದೆ. ಗ್ರಾಹಕರಿಗೆ ಕಕ್ಷಿದಾರರಿಗೆ ತಮ್ಮ ದೂರುಗಳನ್ನು ಸಲ್ಲಿಸಲು ಅನುಕೂಲವಾಗುತ್ತದೆ ಹಾಗೂ ರಾಜಧಾನಿಗೆ ಹೋಗಿ ಬರುವುದು ತಪ್ಪುತ್ತದೆ ಎಂದು ಹೇಳಿದರು. ತೊಂದರೆಗೆ ಒಳಗಾದ ಗ್ರಾಹಕರು ಈ ಪೀಠದ ಮೂಲಕ ಪರಿಹಾರ ಕಂಡುಕೊಳ್ಳಬಹುದು ಎಂದರು ಅವರು ರಾಜ್ಯ ಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹಾಗೂ ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಅವರ ಕೊಡುಗೆ ಬಗ್ಗೆ ಗುಣಗಾನೆ ಮಾಡಿದ ಅವರು ಈ ನಾಯಕರ ಕೊಡುಗೆಗಳು ಶಾಶ್ವತವಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕ ಪ್ರದೇಶದ ಹಿತದೃಷ್ಟಿಯಿಂದ ಈ ವಿಭಾಗಕ್ಕೆ ಒಳಪಡುವ ಜಿಲ್ಲೆಗಳಾದ ಕಲಬುರಗಿ, ಬೀದರ್, ಬಳ್ಳಾರಿ, ವಿಜಯನಗರ, ಕೊಪ್ಪಳ , ರಾಯಚೂರು ಹಾಗೂ ಯಾದಗಿರಿ ಸಂಬಂಧಿಸಿದೆ ಎಂದು ಅವರು ಹೇಳಿದರು. ಇದೇ ಸಂದರ್ಭದಲ್ಲಿ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿದ ಇಂದು ಕಲ್ಯಾಣ ಕರ್ನಾಟಕದಲ್ಲಿ ಹಬ್ಬದ ವಾತಾವರಣ ಮೂಡಿದೆ, ಕಲಬುರಗಿಯಲ್ಲಿ ಈ ಭಾಗದ ಸಮಸ್ಯೆಗಳ ಕುರಿತು ಸಂಪುಟ ಸಭೆ ನಡೆದಿದೆ. ಮತ್ತೊಂದೆಡೆ ಕಾಯಂ ಸಂಚಾರಿ ಪೀಠ ಉದ್ಘಾಟನೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ. ಅಜಯಸಿಂಗ್ ಅವರು ಮಾತನಾಡಿ, ಈ ಭಾಗದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಮೂಲಭೂತ ಸೌಕರ್ಯಕ್ಕೆ ಆದ್ಯತೆ ನೀಡಲಿದೆ ಎಂದರು. ಜಿಲ್ಲಾ ನ್ಯಾಯವಾದಿಗಳ ಘಟಕ ಮತ್ತು ಹೈಕೋರ್ಟ್ ಘಟಕದ ಅಧ್ಯಕ್ಷ ಗುಪ್ತಲಿಂಗ ಪಾಟೀಲ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಪ್ರಭಾರಿ ಅಧ್ಯಕ್ಷ ಕೃಷ್ಣಮೂರ್ತಿ ಬಿ. ಸಂಗಣ್ಣನವರ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಹೆಚ್ಚುವರಿ ಪೀಠ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಅಯೋಗದ ನ್ಯಾಯಾಂಗ ಸದಸ್ಯರಾದ ರವಿಶಂಕರ್, ಸುನೀತಾ ಚನಬಸಪ್ಪ ಬಾಗೇವಾಡಿ, ಭೀಮರಾಯ ಎಂ. ಅಧ್ಯಕ್ಷರಾದ ಮಾಲತಿ ಗುರಣ್ಣ ಸೇರಿದಂತೆ ಉಪಸ್ಥಿತರಿದ್ದರು.

# ಸೇವಾ ಅವಧಿಯಲ್ಲಿ ನಿಧನರಾದ 14 ನೌಕರರ ನಾಮನಿರ್ದೇಶಿತರಿಗೆ 1.40 ಕೋಟಿ ಪರಿಹಾರ ವಿತರಣೆ



**ಕಲಬುರಗಿ, ಸೆ. 18 :** ಆಂತರಿಕ ಗುಂಪು ವಿಮಾ ಯೋಜನೆಯಡಿ ಸದಸ್ಯರಾಗಿ ಸೇವಾ ಅವಧಿಯಲ್ಲಿ ನಿಧನರಾದ 14 ಜನ ನೌಕರರ ನಾಮನಿರ್ದೇಶಿತರಿಗೆ ತಲಾ 10 ಲಕ್ಷ ರೂ. ಗಳಂತೆ ಒಟ್ಟು 1.40 ಕೋಟಿ ರೂ. ಗಳ ಪರಿಹಾರ ಮೊತ್ತ (ಧನಾದೇಶ)ವನ್ನು ಸಾರಿಗೆ ಹಾಗೂ ಮುಜರಾಯಿ ಖಾತೆ ಸಚಿವರು ಹಾಗೂ ಕ.ಕ.ರ.ಸಾ. ನಿಗಮದ ಅಧ್ಯಕ್ಷ ರಾಮಲಿಂಗಾರೆಡ್ಡಿ ಅವರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಯಲ್ಲಿ ವಿತರಿಸಿದರು.

ನಿಗಮದ ಆಂತರಿಕ ಗುಂಪು ವಿಮಾ ಯೋಜನೆ ಅಡಿ ಸದಸ್ಯರಾಗಿ ಸೇವಾ ಅವಧಿಯಲ್ಲಿ ನಿಧನಗೊಂಡಿರುವ ಬೀದರ ವಿಭಾಗ–05, ವಿಜಯಪೂರ ವಿಭಾಗ–04, ಕಲಬುರಗಿ ವಿಭಾಗ–02 ಹಾಗೂ ರಾಯಚೂರು ವಿಭಾಗ–03 ಸೇರಿದಂತೆ ಒಟ್ಟು 14 ಮೃತ ನೌಕರರ ನಾಮನಿರ್ದೇಶಿತರಿಗೆ ತಲಾ 10 ಲಕ್ಷ ರೂ. ಗಳಂತೆ ಒಟ್ಟು ರೂ.1.40 ಕೋಟಿಗಳ ಪರಿಹಾರ ಮೊತ್ತದ ಧನಾದೇಶಗಳನ್ನು ವಿತರಿಸಲಾಯಿತು.

ಧನಾದೇಶಗಳನ್ನು ವಿತರಿಸಿ ಮಾತನಾಡಿದ ಸಚಿವರು, ದೇಶದಲ್ಲಿಯೇ ಮೊಟ್ಟ ಮೊದಲ ಬಾರಿಗೆ ಆಂತರಿಕ ಗುಂಪು ವಿಮಾ ಯೋಜನೆ ಅಡಿ ಸದಸ್ಯರಾಗಿ ಸೇವಾ ಅವಧಿಯಲ್ಲಿ ನಿಧನಗೊಂಡ ಸಿಬ್ಬಂದಿಯವರ ನಾಮನಿರ್ದೇಶಿತರಿಗೆ 10 ಲಕ್ಷ ರೂ. ಪರಿಹಾರ ವಿತರಿಸುವ ಯೋಜನೆಯನ್ನು ರೂಪಿಸಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು ಹಾಗೂ ಪರಿಹಾರ ಮೊತ್ತವನ್ನು ಮಕ್ಕಳ ಶಿಕ್ಷಣ ಹಾಗೂ ಉತ್ತಮ ಭವಿಷ್ಯಕ್ಕಾಗಿ ಉಪಯೋಗಿಸಿ ಕೊಳ್ಳುವಂತೆ ಸಲಹೆ ನೀಡಿದರು.

ಚೆಕ್‌ಗಳನ್ನು ಸ್ವೀಕರಿಸಿದ ಮಾತಾನಾಡಿ ಫಲಾನುಭವಿಗಳು ಆಂತರಿಕ ಗುಂಪು ವಿಮಾ ಯೋಜನೆಯಡಿ 10 ಲಕ್ಷ ರೂ. ಗಳ ಪರಿಹಾರ ಮೊತ್ತ ವಿತರಿಸಿರುವುದಕ್ಕೆ ಆರ್ಥಿಕವಾಗಿ ನಮ್ಮ ಕುಟುಂಬಗಳಿಗೆ ಬಹಳ ಅನುಕೂಲವಾಗಿದೆ ಇದಕ್ಕೆ ಕಾರಣಕರ್ತರಾದ ಸಾರಿಗೆ ಸಚಿವರಿಗೆ ಹಾಗೂ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಧನ್ಯವಾದಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಕ.ಕ.ರ.ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ ಹಾಗೂ ಕ.ಕ. ರ.ಸಾ.ನಿಗಮದ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ನ್ಯಾಯಯುತ ಬೇಡಿಕೆ ಈಡೇರಿಸದಿದ್ದರೆ, ಅ.2ರಿಂದ ಗ್ರಾ.ಪಂ. ಸೇವೆ ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಹೋರಾಟದ ಎಚ್ಚರಿಕೆ

**ಬೆಂಗಳೂರು, ಸೆ. 18–** ರಾಜ್ಯದ ಶೇಕಡ 70 ಜನ ಸಮೂಹಕ್ಕೆ ಸೇವೆ ಒದಗಿಸುತ್ತಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಅಧಿಕಾರಿಗಳು ಮತ್ತು ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸದಿದ್ದರೆ ಗಾಂಧಿ ಜಯಂತಿ ದಿನವಾದ ಅಕ್ಟೋಬರ್ 2 ರಿಂದ ಗ್ರಾಮ ಪಂಚಾಯತ್ ಸೇವೆಗಳನ್ನು ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಹೋರಾಟ ಮಾಡುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು, ನೌಕರರು ಮತ್ತು ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟ ಹಾಗೂ ಎಲ್ಲಾ ವೃಂದ ಸಂಘಗಳು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜು ವಾರದ, ಗ್ರಾಮ ಪಂಚಾಯತ್ ಸದಸ್ಯರ ಒಕ್ಕೂಟದ ರಾಜ್ಯಾಧ್ಯಕ್ಷ ಕಾಡಶೆಟ್ಟಿ ಹಳ್ಳಿ ಸತೀಶ್, ಪತ್ರಾಂಕಿತ ಅಧಿಕಾರಿಗಳ ಸಂಘದ ಅಧ್ಯಕ್ಷ ಡಿ.ಎ. ರಮೇಶ್ ಮತ್ತಿತರರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವಂತೆ ಮಾಡಿದ ಮನವಿಗಳಿಗೆ ಸೂಕ್ತ ಸ್ಪಂದನೆ ದೊರೆತಿಲ್ಲ. ಆದರೆ ಎಲ್ಲಾ ಸಮಸ್ಯೆಗಳಿಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಗಳನ್ನೇ ಹೊಣೆ ಮಾಡಲಾಗುತ್ತಿದೆ. ಈ ಧೋರಣೆಯನ್ನು ಖಂಡಿಸಿ ಹೋರಾಟ ಮಾಡುತ್ತೇವೆ ಎಂದರು.

ಪಂಚಾಯತ್ ಗಳ ಜನಸಂಖ್ಯೆ ಎರಡರಿಂದ ಮೂರು ಪಟ್ಟು ಹೆಚ್ಚಾಗಿದ್ದರೂ 30 ವರ್ಷಗಳ ಹಿಂದಿನಂತೆ ಸಿಬ್ಬಂದಿ ಹೊಂದಿದ್ದು, ಇದರಿಂದ ಎಲ್ಲಾ ಹೊರೆ ನಮ್ಮ ಮೇಲೆ ಬೀಳುತ್ತಿದೆ. ದಿನದಿಂದ ದಿನಕ್ಕೆ ಕೆಲಸದ ಒತ್ತಡ ತೀವ್ರಗೊಳ್ಳುತ್ತಿದೆ.

ಮೂರು ವರ್ಷಗಳಿಂದ ಖಾಲಿಯಾಗಿರುವ ಪಂಚಾಯತ್ ಸಿಬ್ಬಂದಿಯನ್ನು ಭರ್ತಿ ಮಾಡಿಕೊಂಡಿಲ್ಲ. ಕಾರ್ಯದರ್ಶಿ ಮತ್ತು ಲೆಕ್ಕ ಪರಿಶೋಧಕರ ಹುದ್ದೆಗಳು ಖಾಲಿ ಇವೆ. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವಾಗ ಪಿಡಿಓಗಳ ಸಲಹೆಗಳನ್ನು ಪರಿಗಣಿಸಿಲ್ಲ.

ಅವೈಜ್ಞಾನಿಕ ನಿಯಮಗಳನ್ನು ಅಳವಡಿಸಲಾಗಿದೆ. ಕುಂದುಕೊರತೆ ಪ್ರಾಧಿಕಾರವನ್ನು ನೆಪಮಾತ್ರಕ್ಕೆ ರಚಿಸಿ ಕೈಬಿಡಲಾಗಿದೆ. ನಮ್ಮ ಅಹವಾಲುಗಳಿಗೆ ಮನ್ನಣೆ ದೊರೆಯುತ್ತಿಲ್ಲ ಎಂದರು.

ಪಿಡಿಓ ಹುದ್ದೆಗಳನ್ನು ಗೆಜೆಟೆಡ್ ಬಿ ಗುಂಪಿಗೆ ಸೇರ್ಪಡೆ ಮಾಡಬೇಕು. ಹಿರಿಯ ಪಂಚಾಯತ್ ಅಧಿಕಾರಿಗಳು ಎಂದು ಸೃಷ್ಟಿಸಿರುವ ಹೊಸ ಹುದ್ದೆಯಿಂದ ಯಾವುದೇ ಪ್ರಯೋಜನವಿಲ್ಲ.

ಒಂದೇ ತಾಲ್ಲೂಕಿನಲ್ಲಿ 7 ವರ್ಷ ಸೇವೆ ಸಲ್ಲಿಸಿದವರನ್ನು ವರ್ಗಾವಣೆ ಮಾಡುವ ನಿಯಮವನ್ನು ಬಲವಂತವಾಗಿ ಹೇರಲಾಗಿದೆ. ಸರ್ಕಾರದ ಒತ್ತಡ ಕಾರ್ಯತಂತ್ರದ ಪರಿಣಾಮ 21 ಪಿಡಿಓಗಳು ಇತ್ತೀಚೆಗೆ ಜೀವ ಕಳೆದುಕೊಂಡಿದ್ದಾರೆ. ಸಾಕಷ್ಟು ಆರೋಗ್ಯ ಸಮಸ್ಯೆಗಳಿಗೆ ಸಿಲುಕಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.



ಬುಧವಾರ ಬೆಳಗಾವಿಯಲ್ಲಿ ಭಾರಿ ಪೊಲೀಸ್ ಭದ್ರತೆಯೊಂದಿಗೆ ಗಣೇಶನ ಮೆರವಣಿಗೆ ನಡೆಯಿತು.

# ಹಬ್ಬದ ಆಚರಣೆ ಹಾಳುಮಾಡುವವರ ಮಟ್ಟಹಾಕ್ತೇವೆ: ಮಹೇಶ್ ಟೆಂಗಿನಕಾಯಿ



ಹುಬ್ಬಳ್ಳಿ ನಗರದ ದುರ್ಗದಬೈಲ್‌ನಲ್ಲಿ ಮಂಗಳವಾರ ರಾತ್ರಿ ಗಣಪತಿ ವಿಗ್ರಹಗಳ ಸಾಮೂಹಿಕ ವಿಸರ್ಜನೆ ಕಾರ್ಯಕ್ರಮಕ್ಕೆ ಶಾಸಕ ಮಹೇಶ ಟೆಂಗಿನಕಾಯಿ ಚಾಲನೆ ನೀಡಿದರು. ಮಾಜಿ ಸಂಸದ ಪ್ರೊ.ಐ.ಜಿ.ಸನದಿ ಉಪಸ್ಥಿತರಿದ್ದರು.

**ಹುಬ್ಬಳ್ಳಿ, ಸೆ.18–** ನಮ್ಮ ಸನಾತನ ಸಂಸ್ಕೃತಿ ತಿಳಿಸಿಕೊಡುವ ಕೆಲಸವನ್ನು ಹುಬ್ಬಳ್ಳಿ ಸಾರ್ವಜನಿಕ ಗಣೇಶೋತ್ಸವ ಸಮಿತಿಗಳ ಮಹಾಮಂಡಳಿಗಳು ಹಲವು ವರ್ಷಗಳಿಂದ ಮಾಡುತ್ತಿರುವುದು ಅತ್ಯಂತ ಶ್ಲಾಘನೀಯವಾಗಿದೆ. ಇಂಥ ಸಂಭ್ರಮದ ಹಬ್ಬದ ಆಚರಣೆಗಳನ್ನು ಹಾಳುಮಾಡುವವರನ್ನು ಬಿಡುವದಿಲ್ಲ. ಅವರ ಮಟ್ಟ ಹಾಕುತ್ತೇವೆ. ನಾವು ಹೇಡಿಗಳಲ್ಲ ಎಂದು ಶಾಸಕ ಮಹೇಶ ಟೆಂಗಿನಕಾಯಿ ಎಚ್ಚರಿಕೆ ನೀಡಿದರು.

ನಾವು ಶಾಂತಿಪ್ರಿಯರು. ನಮ್ಮ ಹಬ್ಬಗಳೂ ಕೂಡ ಶಾಂತಿ ಸಹೋದರತ್ವ ಮತ್ತು ಬಂಧುತ್ವವನ್ನು ಸಾರುತ್ತವೆ. ನಮ್ಮ ಯಾವುದೇ ಹಬ್ಬಗಳು ಹಿಂಸೆ ಮತ್ತು ಕ್ರೌರ್ಯಗಳಿಗೆ ಪ್ರೋತ್ಸಾಹಿಸುವದಿಲ್ಲ ಎಂದ ಅವರು, ಶಾಂತಿಪ್ರಿಯರೆಂದು ಹೇಳಿಕೊಂಡು ದಂಗೆ ಎಬ್ಬಿಸುವದನ್ನು ನಾವು ಸಹಿಸುವದಿಲ್ಲ. ತಾಳ್ಮೆ ಮತ್ತು ಸಹನೆ ನಮ್ಮ ದೌರ್ಬಲ್ಯವಲ್ಲ. ಸಹನೆಯ ಕಟ್ಟೆಯೊಡೆದಾಗ ಏನಾಗುತ್ತದೆಂದು ನೀವು ದಂಗೆಕೋರರು ಅನೇಕ ಬಾರಿ ಕಂಡಿದ್ದೀರಿ. ಮತ್ತೊಮ್ಮೆ ಅಂಥವುಗಳಿಗೆ ಆಸ್ಪದ ನೀಡಬೇಡಿ ಎಂದು ಹೇಳಿದರು.

ನಗರದ ದುರ್ಗದಬೈಲ್‌ನಲ್ಲಿ ಕಳೆದ ರಾತ್ರಿ ಗಣಪತಿ ವಿಗ್ರಹಗಳ ಸಾಮೂಹಿಕ ವಿಸರ್ಜನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 'ಧರ್ಮ ಬೆಳವಣಿಗೆ ಕಾರ್ಯ ಹೆಚ್ಚು ಹೆಚ್ಚು ಆಗಬೇಕು. ಪ್ರತಿಷ್ಠಿತ ಬಡಾವಣೆಗಳಲ್ಲಿ ಗಣೇಶೋತ್ಸವ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹೆಚ್ಚು ಮಾಡಿದ್ದಾರೆ. ಎಲ್ಲರೂ ಸೇರಿಕೊಂಡು ಹಬ್ಬ ಆಚರಿಸುವ ಸಂದರ್ಭದಲ್ಲಿ ಕಿಡಿಗೇಡಿತನ ಮಾಡಲು ನಾವು ಬಿಡುವುದಿಲ್ಲ. ಅಂತವರ ಮಟ್ಟ ಹಾಕುವದು ಹೇಗೆ ಎಂದೂ ನಮಗೆ ಗೊತ್ತಿದೆ' ಎಂದರು.

ಇಡೀ ಮಹಾಮಂಡಳದ ತಂಡ ಉತ್ತಮ ಕೆಲಸ ಮಾಡುತ್ತಿದೆ. 14 ಇಲಾಖೆಗಳ ಸಭೆ ನಡೆಸಿ 11 ದಿನಗಳವರೆಗೆ ಯಾವುದೇ ತೊಂದರೆಯಾಗದಂತೆ ಕ್ರಮ ತೆಗೆದುಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ರಾತ್ರಿ ಹತ್ತು ಗಂಟೆ ಒಳಗಾಗಿ ಗಣೇಶ ವಿಸರ್ಜನೆ ಮಾಡುತ್ತಿರುವುದು ಉತ್ತಮ ಕಾರ್ಯವಾಗಿದೆ. ಈ ರೀತಿ ಮಾಡುವುದರಿಂದ ಮಕ್ಕಳು ಹಾಗೂ ಮಹಿಳೇಯರು ಗಣೇಶೋತ್ಸವದಲ್ಲಿ ಪಾಲ್ಗೊಳ್ಳಲು ಸಹಕಾರಿಯಾಗಲಿದೆ ಎಂದರು ಹೇಳಿದರು.

ಈ ವೇಳೆ ಮಾಜಿ ಸಂಸದ ಪ್ರೊ. ಐ.ಜಿ. ಸನದಿ ಮಾತನಾಡಿ, ಹುಬ್ಬಳ್ಳಿ ನಗರದಲ್ಲಿ ಈದ್ ಮಿಲಾದ್ ಮೆರವಣಿಗೆ ಉತ್ತಮವಾಗಿ ನಡೆದಿದೆ. ಹುಬ್ಬಳ್ಳಿ ನಗರದಲ್ಲಿ ಹಲವಾರು ಕಹಿ ಘಟನೆಗಳನ್ನು ನಾವು ನೋಡಿದ್ದೇವೆ. ಇದರಿಂದ ಈ ಭಾಗದಲ್ಲಿ ವ್ಯಾಪಾರ ವಹಿವಾಟು ಹಾಳಾಗಿ ಹೋಗಿತ್ತು. ಸಾಮಾಜಿಕ ಸ್ವಾಸ್ಥ್ಯ ಕಾಪಾಡಿಕೊಳ್ಳುವ ಮೂಲಕ ಪರಸ್ಪರ ಸಹೋದರತ್ವ ಬಾಂಧವ್ಯ ಬೆಳೆಸಿಕೊಳ್ಳಬೇಕು. ಯಾರಿಗಾದರೂ ಅನಾರೋಗ್ಯ ಕಾಡಿದರೆ ಅವರು ಜಾತಿ ನೋಡಿ ಚಿಕಿತ್ಸೆ ಪಡೆಯುವುದಿಲ್ಲ. ಬದಲಾಗಿ ಆರೋಗ್ಯ ಸುಧಾರಣೆಗೆ ಮೊದಲ ಆದ್ಯತೆ ನೀಡುತ್ತಾರೆ ಎಂದರು.

ನಾವೆಲ್ಲ ಹರಿದು ಹಂಚಿ ಹೋದಾಗ ಲೋಕಮಾನ್ಯ ಬಾಲಗಂಗಾಧರ ತಿಲಕ್ ಅವರು ಎಲ್ಲರನ್ನೂ ಒಗ್ಗೂಡಿಸುವ ಕೆಲಸ ಮಾಡಿದ್ದು, ಅಂದಿನಿಂದ ಇಲ್ಲಿಯವರೆಗೂ ಗಣೇಶೋತ್ಸವ ನಡೆದುಕೊಂಡು ಬಂದಿದೆ. ಹಬ್ಬಗಳ ಸಂದರ್ಭದಲ್ಲಿ ಕಿಡಿಗೇಡಿಗಳು ಮಾಡುವ ಕೆಲಸವನ್ನು ನಾವು ಹತ್ತಿಕ್ಕುವ ಕೆಲಸ ಮಾಡುವ ಮೂಲಕ ಹಬ್ಬಗಳನ್ನು ಅದ್ದೂರಿಯಾಗಿ ಆಚರಿಸೋಣ. ಹು–ಧಾ ನಗರದಲ್ಲಿ ಶಾಂತಿಯುತ ವಾತಾವರಣ ನಿರ್ಮಾಣಕ್ಕೆ ಮೂರು ಸಾವಿರ ಮಠದ ಜಗದ್ಗುರುಗಳೇ ಕಾರಣ ಎಂದು ಹೇಳಿದರು.

ಈ ಸಂಭ್ರಮದಲ್ಲಿ ಉಪಸ್ಥಿತರಿದ್ದ ಮೂರುಸಾವಿರ ಮಠ ಪೀಠಾಧ್ಯಕ್ಷ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ ಮಾತನಾಡಿ, ಇಸ್ಲಾಂ ಕಾರ್ಯಕ್ರಮದಲ್ಲಿ ಹಿಂದೂಗಳು ಮಾಲಾರ್ಪಣೆ ಮಾಡಿರುವ ಕಾರ್ಯ ಶ್ಲಾಘನೀಯ ಕಾರ್ಯ. ದುರ್ಗದ ಬಯಲು ಎಂದರೆ ಎಲ್ಲವನ್ನೂ ಒಳಗೊಂಡಿದ್ದು, ಎಲ್ಲ ಜಾತಿಯ ಎಲ್ಲೆಯನ್ನು ಮೀರಿದ್ದು ಬಯಲು. ಈ ಬಯಲು ಎಲ್ಲರನ್ನೂ ಗೌರವದಿಂದ ಸ್ವಾಗತಿಸುತ್ತದೆ, ಜೊತೆಗೆ ಬೀಳ್ಕೊಡುತ್ತದೆ. ಮಹಾಮಂಡಳದ ಕೆಲಸ 2 ತಿಂಗಳು ಇರುತ್ತದೆ. ಮನೆ ಬಿಟ್ಟು ಹಗಲು ರಾತ್ರಿ ಮಂಡಳದ ಪದಾಧಿಕಾರಿಗಳು ಅವಿರತ ಕೆಲಸ ಮಾಡಿದ್ದಾರೆ ಎಂದರು.

# ಆರ್‌ವೈಎಂಇಸಿಯಲ್ಲಿ ಇಂಜಿನಿಯರ್‌ಗಳ ದಿನಾಚರಣೆ




**ಬಳ್ಳಾರಿ,ಸೆ.18–** ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂಜಿನಿಯರ್ಸ್ ಡೇ ದಿನಾಚರಣೆಯನ್ನು 17 ಸೆಪ್ಟೆಂಬರ್ 2024 ರಂದು ಅದ್ದೂರಿಯಾಗಿ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳು ಇಂಜಿನಿಯರಿಂಗ್ ಕಾಲೇಜಿನ ಸಿಬ್ಬಂದಿ ವರ್ಗದವರು,ವಿದ್ಯಾರ್ಥಿ ವೃಂದದವರು ಭಾಗವಹಿಸಿದ್ದರು.

ಸಿವಿಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ.ಎಚ್.ಎಂ.ಮಲ್ಲಿಕಾರ್ಜುನ, ಮುಖ್ಯ ಅತಿಥಿಗಳನ್ನು ಹಾಗೂ ಎಲ್ಲರನ್ನು ಸ್ವಾಗತಿಸಿದರು . ಮುಖ್ಯ ಅತಿಥಿ ಇಂಜಿನಿಯರ್ ಈಶ್ವರಗೌಡ (ಪ್ರೆಸಿಡೆಂಟ್ ಆಫ್ ಎ.ಸಿ.ಸಿ.ಈ.ಎ, ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ ಆರ್ಕಿಟೆಕ್ಟ್ ಬಳ್ಳಾರಿ) ಅವರು ಮಾತನಾಡುತ್ತಾ "ಸಿವಿಲ್ ಇಂಜಿನಿಯರ್ ವಿಭಾಗದ ಕುರಿತು ಗೌರವವನ್ನು ಹೊಂದಬೇಕು ಮತ್ತು ಈ ಸಿವಿಲ್ ಇಂಜಿನಿಯರಿಂಗ್ ವಿಭಾಗವು ಇತರೆ ಎಲ್ಲಾ ವಿಭಾಗಗಳಿಗೆ ತಾಯಿಸ್ಥಾನ ಅಥವಾ ಮೂಲಸ್ಥಾನ ಆಗಿರುವುದು", ಇದರ ಪ್ರಾಮುಖ್ಯತೆ ಬಗ್ಗೆ ಎಲ್ಲಾ ವಿಷಯಗಳನ್ನು ಸೇರಿರುವ ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ತದನಂತರ ಉಪಪ್ರಾಂಶುಪಾಲರಾದ ಡಾ. ಸವಿತಾ ಸೋನೋಳಿ ಅವರು "ಗುಣಮಟ್ಟದ ಕಾಮಗಾರಿಗಳನ್ನು ಸಮಾಜಕ್ಕೆ ಒದಗಿಸುವುದರಲ್ಲಿ ಸಿವಿಲ್ ಇಂಜಿನಿಯರಿಂಗ್ ವಿಭಾಗವು ಪ್ರಮುಖ ಪಾತ್ರವಹಿಸಿದೆ "ಎಂದು ತಿಳಿಸಿಕೊಟ್ಟರು. ಶ್ರಾವಣಿ ಬಿ ಅವರು ಮುಖ್ಯ ಅತಿಥಿ ಇಂಜಿನಿಯರ್ ಹೇಮರಾಜ ಕೆಇಎಸ್ ಅವರ ಕಿರು ಪರಿಚಯ ಮಾಡಿದರು.

ಎಕ್ಸಿಕ್ಯೂಟಿವ್ ಇಂಜಿನಿಯರ್ ಹೇಮರಾಜ್ (ಪಿಡಬ್ಲ್ಯೂಡಿ ಡಿವಿಜನ್ ಬಳ್ಳಾರಿ) ಅವರು ವಿಶ್ವೇಶ್ವರಯ್ಯ ಅವರ ಕುರಿತು ಅವರ ಸಮಾಜ ಸೇವೆಗಳ ಕುರಿತು ಮಾತನಾಡುತ್ತ "ನಾವು ನಮ್ಮ ಜೀವನದಲ್ಲಿ, ಮುಖ್ಯವಾಗಿ ಇಂಜಿನಿಯರಿಂಗ್ ಜೀವನದಲ್ಲಿ , ಸರ್ ಎಂ ವಿಶ್ವೇಶ್ವರಯ್ಯ ಅವರ ಹಾದಿಯಲ್ಲಿ ನಡೆದು ಅವರ ಗುಣಗಳನ್ನು ಅಳವಡಿಸಿಕೊಳ್ಳಬೇಕು " ವಿದ್ಯಾರ್ಥಿಗಳಿಗೆ ಹಲವಾರು ವಿಷಯಗಳನ್ನು ತಿಳಿಸಿಕೊಟ್ಟರು.

ನಂತರ ನಮ್ಮ ಮಹಾವಿದ್ಯಾಲಯದ ಅಧ್ಯಕ್ಷರು ಜಾನಕುಂಟೆ ಬಸವರಾಜ್ ಅವರು ಮಾತನಾಡುತ್ತಾ "ಮೊದಲನೆಯದಾಗಿ ನಾವು ಸಿವಿಲ್ ಇಂಜಿನಿಯರಿಂಗ್ ವಿಭಾಗವು ಎಲ್ಲಾ ವಿಭಾಗಗಳಿಗೆ ಮೂಲವಾಗಿದೆ, ಆದ್ದರಿಂದ ನಾವು ಈ ಸಿವಿಲ್ ಇಂಜಿನಿಯರಿಂಗ್ ಎನ್ನುವ ಅತ್ಯುತ್ತಮ ವೃತ್ತಿಯಲ್ಲಿ ಇದ್ದೇವೆ ಎನ್ನುತ್ತಾ ಗರ್ವ ಪಡಬೇಕು,ಎಲ್ಲಾ ವಿದ್ಯಾರ್ಥಿಗಳು ಇದನ್ನು ನೆನಪಿಸಿಕೊಳ್ಳಬೇಕು , ಐದು ಅಥವಾ ಆರು ವರ್ಷದ ಕಠಿಣ ಪರಿಶ್ರಮದ ನಂತರವೇ, ಉತ್ತಮವಾದ ಕೆಲಸ ಸಿಗುವುದು ಸಾಧ್ಯ ಮತ್ತು ನಮಗೆ ದೊರಕುತ್ತಿರುವ ಕೆಲಸದಲ್ಲಿ ಎಂದು ಸಂಬಳ ನೋಡಿ ಅಥವಾ ಸಂಬಳ ಕೊಸರ ಕೆಲಸ ಮಾಡಬಾರದು ನಾವು ಕಲಿಯುವ ಕೆಲಸ ಬಗ್ಗೆ ಗೌರವ ಹೊಂದಿದ್ದು ಮತ್ತು ಆಸಕ್ತಿಯಿಂದ ಮಾತ್ರವೇ ಮಾಡಬೇಕು ಯಾವುದೇ ಕೆಲಸವಾಗಲಿ ನಿಷ್ಠೆಯಿಂದ ಮಾಡಬೇಕು " ಎಂದು ತಿಳಿ ಹೇಳಿದರು.

# ಬದುಕು ಕಟ್ಟಿಕೊಳ್ಳಲು ಚರ್ಚಾಸ್ಪರ್ಧೆ ಬಹುಪಯೋಗ–ಕುಲಸಚಿವ ರುದ್ರೇಶ



**ಬಳ್ಳಾರಿ, ಸೆ.18–** ಸ್ಪರ್ಧಾ ಮನೋಭಾವನೆಯ ಕೊರತೆಯನ್ನು ಹೋಗಲಾಡಿಸಲು ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಚರ್ಚೆಗಳಲ್ಲಿ ಸತತವಾಗಿ ಭಾಗವಹಿಸಬೇಕು ಎಂದು ಕುಲಪತಿಗಳಾದ ಪ್ರೊ. ಎಂ.ಮುನಿರಾಜು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಜೀವ ವಿಜ್ಞಾನ ಕಟ್ಟಡ ಸಭಾಂಗಣದಲ್ಲಿ ವಿವಿಯ ವಿದ್ಯಾರ್ಥಿ ಕಲ್ಯಾಣ ಘಟಕ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಬೆಂಗ ಳೂರು ಇವರ ಜಂಟಿ ಸಹಭಾಗಿತ್ವದಲ್ಲಿ ಆಯೋಜಿಸಲಾಗಿದ್ದ ಸಹಕಾರ ಕ್ಷೇತ್ರದ ವಿಷಯ ಕುರಿತು ಚರ್ಚಾಸ್ಪರ್ಧೆ ಕಾರ್ಯಕ್ರಮವನ್ನು ಗಣ್ಯರು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಚಾಲನೆ ನೀಡಿದರು.

ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಯುಗದಲ್ಲಿ ಸತತ ಪ್ರಯತ್ನ ಅನಿವಾರ್ಯವಾಗಿದೆ. ಆಳವಾದ ವಿಷಯ ಜ್ಞಾನವನ್ನು ಹೊಂದಲು ಚರ್ಚಾಸ್ಪರ್ಧೆಗಳು ಸಹಕಾರಿಯಾಗಿವೆ. ಚರ್ಚಾಸ್ಪರ್ಧೆಗಳಲ್ಲಿ ಭಾಗವಹಿಸಿ ನಿಮ್ಮಲ್ಲಿರುವ ನಿಪುಣತೆಯನ್ನು ಪ್ರದರ್ಶಿಸಿಸುವ ಮೂಲಕ ಒಳ್ಳೆಯ ಚರ್ಚಾ ಮನೋಭಾವನೆ ಬೆಳೆಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ರುದ್ರೇಶ ಎಸ್ ಎನ್ ಮಾತನಾಡಿ, ವಿದ್ಯಾರ್ಥಿಗಳಿಗೆ ಬದುಕು ಕಟ್ಟಿಕೊಳ್ಳಲು ಚರ್ಚಾಸ್ಪರ್ಧೆಗಳು ಬಹುಪಯೋಗಿಯಾಗಿವೆ. ಚರ್ಚಾಸ್ಪರ್ಧೆಗಳಿಂದ ಶಬ್ದಗಳ ಭಂಡಾರ, ಜೀವನ ಶೈಲಿ, ಸ್ಪರ್ಧಾತ್ಮಕ ಮನೋಭಾವ ಬೆಳೆಯುತ್ತದೆ. ಸಹಕಾರಿ ತತ್ವಗಳ ಬೋಧನೆ ಮತ್ತು ತರಬೇತಿಗಾಗಿ ಸಹಕಾರಿ ಸಂಸ್ಥೆಗಳು ವಿದ್ಯಾ ಸಂಸ್ಥೆಗಳೊಂದಿಗೆ ಕೈಜೋಡಿಸುತ್ತಿದ್ದು, ಸಂಸ್ಥೆಯ ವಿವಿಧ ಧ್ಯೇಯೋದ್ದೇಶಗಳನ್ನು ಪರಿಣಾಮಕಾರಿಯಾಗಿ ಸಾಧಿಸಲು ಇದರಿಂದ ಸಹಾಯವಾಗುತ್ತದೆ ಎಂದರು.

ಚರ್ಚಾಸ್ಪರ್ಧೆಯ ತೀರ್ಪುಗಾರರಾದ ಡಾ. ಕುಮಾರ್ ಮಾತನಾಡಿ, ಸಾಮಾಜಿಕವಾಗಿ ಹಿಂದುಳಿದವರನ್ನು ಮುಖ್ಯವಾಹಿನಿಗೆ ಕರೆ ತರುವುದು ಸಹಕಾರ ಸಂಘಗಳ ಮೂಲ ಧ್ಯೇಯವಾಗಿದೆ ಎಂದರು.

# ಡ್ರಗ್ಸ್ ಹಾವಳಿ ತಡೆಗೆ ಸಮಿತಿ ರಚನೆ ಸಿಎಂಗೆ ದಿನೇಶ ಗೂಳಿಗೌಡ ಅಭಿನಂದನೆ



**ಬೆಂಗಳೂರು, ಸೆ.18:** ರಾಜ್ಯದಲ್ಲಿ ಮಾದಕ ವಸ್ತುಗಳ ಹಾವಳಿ ತಡೆಗಟ್ಟಲು ಸಮಿತಿಯೊಂದನ್ನು ರಚಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ದಿನೇಶ ಗೂಳಿಗೌಡ ತಿಳಿಸಿದ್ದಾರೆ. ಪತ್ರಿಕಾ ಹೇಳಿಕೆ ನೀಡಿರುವ ಅವರು, ತಮ್ಮ ಮನವಿಗೆ ಸ್ಪಂದಿಸಿ ಕ್ರಮ ವಹಿಸಿದ ಸಿಎಂ ಸಿದ್ದರಾಮಯ್ಯ ಅವರಿಗೆ ಪೋಶಕರ ಪರವಾಗಿ, ವಿದ್ಯಾರ್ಥಿಗಳ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದ್ದಾರೆ. ಇದೇ ವರ್ಷ ಜ.16ರಂದು ಶಾಸಕ ದಿನೇಶ ಗೂಳಿಗೌಡ ಅವರು ಮುಖ್ಯಮಂತ್ರಿಗಳಿಗೆ ಪತ್ರ ಬರೆದು, ರಾಜ್ಯದಲ್ಲಿ ಮಾದಕ ದ್ರವ್ಯದ ಹಾವಳಿ ಹೆಚ್ಚುತ್ತಿದೆ. ಕಾಲೇಜ್‌ಗಳ ಸುತ್ತಲಿನ ಪ್ರದೇಶದಲ್ಲಿ ಗಾಂಜಾ ಮಾರಾಟ ನಡೆಯುತ್ತಿದೆ. ಭವಿಷ್ಯದ ಭಾರತದ ಕನಸುಗಳಾದ ಯುವ ಜನರು ದಾರಿ ತಪ್ಪುತ್ತಿದ್ದಾರೆ. ಇದನ್ನು ತಡೆಯಲು ಪೊಲೀಸ್ ಇಲಾಖೆ ಕ್ರಮ ವಹಿಸಬೇಕು. ಜಾಗೃತಿ ಕಾಯಕ್ರಮಗಳನ್ನು ಆಯೋಜಿಸಬೇಕು ಎಂದು ಮನವಿ ಮಾಡಿದ್ದರು. ಈ ಸಂಬಂಧ ಕ್ರಮ ವಹಿಸುವಂತೆ ಸಿಎಂ ಸಿದ್ದರಾಮಯ್ಯ ಅವರು ಪೊಲೀಸ್ ಮಹಾ ನಿರ್ದೇಶಕರಿಗೆ ಪತ್ರ ಬರೆದಿದ್ದರು.ಪತ್ರದ ಭಾಗವಾಗಿ ಬುಧವಾರ ವಿಧಾನ ಸೌಧದಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ ಅವರು ಈ ಮಾದಕ ದ್ರವ್ಯ ಹಾವಳಿ ತಡೆಯಲು ಉನ್ನತ ಮಟ್ಟದ ಸಮಿತಿಯನ್ನು ರಚಿಸಿದ್ದಾರೆ. ಮಾತ್ರವಲ್ಲದೇ, ಕ್ರಮ ವಹಿಸಲು ಪೊಲೀಸ್ ಮಹಾ ನಿರ್ದೇಶಕರಿಗೆ ಆದೇಶಿಸಿದ್ದಾರೆ. ಯುವ ಜನತೆಯ ಬಗ್ಗೆ ಕಾಳಜಿ ವಹಿಸಿದ ಮುಖ್ಯಮಂತ್ರಿಗಳಿಗೆ ಅಭಿನಂದನೆಗಳು ಎಂದು ದಿನೇಶ ಗೂಳಿಗೌಡ ತಿಳಿಸಿದ್ದಾರೆ.

# ದೇವರಾಜ ಅರಸು ಪ್ರಶಸ್ತಿಗೆ ಆಯ್ಕೆ



**ಬಳ್ಳಾರಿ ಸೆ.18–** ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಸಾಮಾಜಿಕ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಸಂಘದ ವತಿಯಿಂದ ಸೆ.20ರಂದು ಬೆಂಗಳೂರಿನ ಗಾಂಧಿ ಭವನದಲ್ಲಿ ಹಿಂದುಳಿದ ವರ್ಗಗಳ ರತ್ನ ಡಿ. ದೇವರಾಜ ಅರಸು ರಾಜ್ಯ ಪ್ರಶಸ್ತಿಗೆ ಹನುಮೇಶ್ ಉಪ್ಪಾರ್ ಆಯ್ಕೆಯಾಗಿದ್ದಾರೆ. ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ಯುವ ಸೈನ್ಯ ರಾಜ್ಯಾಧ್ಯಕ್ಷರು ಮತ್ತು ಬಳ್ಳಾರಿ ಜಿಲ್ಲಾ ಭಗೀರಥ ಉಪ್ಪಾರ ಸಂಘದ ಜಿಲ್ಲಾಧ್ಯಕ್ಷರಾದ ಹನುಮೇಶ್ ಉಪ್ಪಾರ್ ಇವರ ಸಮಾಜ ಸೇವೆಯನ್ನು ಗುರುತಿಸಿ 2024ನೇ ಸಾಲಿನ ದೇವರಾಜ್ ಅರಸು ರಾಜ್ಯ ಪ್ರಶಸ್ತಿ ನೀಡಲಾಗುತ್ತಿದೆ ಎಂದು ಸಂಘಟನೆಯ ಸಂಸ್ಥಾಪಕ ಹಾಗೂ ರಾಜ್ಯಧ್ಯಕ್ಷ ಸೈದಪ್ಪ ಗುತ್ತೇದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಿ ಆದರ್ಶ ವಿದ್ಯಾಲಯದಲ್ಲಿ ಅದ್ದೂರಿಯಾಗಿ ಹಿಂದಿ ದಿವಸ್ ಆಚರಣೆ



**ಬಳ್ಳಾರಿ, ಸೆ.18–** ಬಳ್ಳಾರಿ ನಗರದ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಹಿಂದಿ ದಿವಸ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಬಂದ ರಾಮ ತುಳಸಿ ಮೇಡಂ ಹಿಂದಿ ಭಾಷೆಯ ಉಗಮ ಮತ್ತು ಬೆಳವಣಿಗೆ ಹಾಗೂ ಹಿಂದಿ ಭಾಷೆಯ ಕಲಿಕೆಯಿಂದಾಗುವ ಅನುಕೂಲಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಈ ಶಾಲೆಯ ಹಿಂದಿ ಶಿಕ್ಷಕ ಡಿ.ಸಿದ್ದೇಶ್ವರ ಸ್ವಾಮಿ ಹಾಗೂ ಎಸ್. ವನಜಾಕ್ಷಿ ಮೇಡಂ ರವರು ಹಿಂದಿ ರಾಷ್ಟ್ರಭಾಷೆಯಾಗಿ ಅಂಗೀಕರಿಸುವ ಬಗ್ಗೆ ಮತ್ತು ರಾಜ್ಯಭಾಷೆಯಾಗಲು ಯಾರಿಂದ ಸಾಧ್ಯವಾಯಿತೋ ಹಾಗೂ ಬ್ರಿಟಿಷರ ಕಾಲದಲ್ಲಿ ಹಿಂದಿ ಭಾಷೆಯ ಸ್ಥಿತಿಗತಿಯ ಬಗ್ಗೆ ತಿಳಿಸಿದರು.

ಮುಖ್ಯ ಗುರುಗಳಾದ ಸತ್ಯ ನಾರಾಯಣ ಎ. ಕೆ. ರವರು ಹಿಂದಿ ಭಾಷೆಯ ಕಲಿಕೆಯಿಂದ ದೇಶದೊಳಗೆ ಸಂಹವನ ನಡೆಸಲು ಸುಲಲಿತವಾಗುತ್ತದೆ ಎಂದು ತಿಳಿಸಿದರು.

ಹಿಂದಿ ದಿವಸ್ ಪ್ರಯುಕ್ತ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 6 ರಿಂದ 10ನೇ ತರಗತಿಯ ಮಕ್ಕಳಿಗೆ ಡ್ರಾಯಿಂಗ್, ಕೋಲಾಜ್ ವರ್ಕ್, ಗದ್ಯಪದ್ಯವಾಚನ, ಹಿಂದಿ ದಿವಸ್‌ಗೆ ಸಂಬಂಧಿಸಿದಂತೆ ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಿ, ಗೆದ್ದವರಿಗೆ ಪ್ರಥಮ, ದ್ವಿತೀಯ, ತೃತೀಯ ಬಹುಮಾನಗಳನ್ನು ನೀಡುವ ಮುಖಾಂತರ ಮಕ್ಕಳಿಗೆ ಪ್ರೋತ್ಸಾಹ ನೀಡಲಾಯಿತು.

ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಹಿಂದಿ ದಿವಸ್ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಲು ಕಾರಣರಾದಂತಹ ನಮ್ಮ ಶಾಲೆಯ ಮುಖ್ಯಗುರುಗಳಿಗೆ, ಶಿಕ್ಷಕ ವೃಂದದವರಿಗೆ, ಸಿಬ್ಬಂದಿ ವರ್ಗದವರಿಗೆ ಮತ್ತು ಮಕ್ಕಳಿಗೆ ಅನಂತ ಅನಂತ ಧನ್ಯವಾದಗಳು ತಿಳಿಸಿದರು.

# ಭಾರಿ ಮಳೆಗೆ ಬೀದರ್ ಜಿಲ್ಲೆ ಕಂಗಾಲು ಬೆಳೆಹಾಳು–ಮನೆ ಕಳೆದುಕೊಂಡವರಿಗಿನ್ನೂ ಸಿಕ್ಕಿಲ್ಲ ಪರಿಹಾರ


**ಬೀದರ್, ಸೆ.18–** ಜಿಲ್ಲೆಯಲ್ಲಿ ಸುರಿದ ಭಾರೀ ಮಳೆಯಿಂದಾಗಿ ನೂರಾರು ಹೇಕ್ಟರ್‌ನಷ್ಟು ಬೆಳೆ ಹಾನಿಯಾಗಿದ್ದು, 360 ಮನೆಗಳು ಸಹ ಕುಸಿದಿವೆ. ಬೆಳೆ ಹಾನಿ ಹಾಗೂ ಮನೆ ಕುಸಿದ ಫಲಾನುಭವಿಗಳಿಗೆ ಪರಿಹಾರ ಹಾರ ಕೊಡುತ್ತೇವೆಂದು ಸರಕಾರ ಕಾಲಹರಣ ಮಾಡುತ್ತಿದೆ. ಇದು ಸಹಜವಾಗಿಯೇ ಬೆಳೆ ಹಾಗೂ ಮನೆಕಳೆದುಕೊಂಡವರ ಆಕ್ರೋಶ ಹೆಚ್ಚಿಸುವಂತೆ ಮಾಡಿದ್ದು, ಬೇಗ ಪರಿಹಾರ ಕೊಡಿ ಎಂದು ಮನವಿ ಮಾಡುತ್ತಿದ್ದಾರೆ.

ಜಿಲ್ಲೆಯಲ್ಲಿ ವಾರದ ಹಿಂದೆ ಸುರಿದ ಮಳೆಯಿಂದಾಗಿ 500 ಹೆಕ್ಟರ್‌ಗೂ ಅಧಿಕ ಪ್ರದೇಶದಲ್ಲಿ ಬಿತ್ತನೆ ಮಾಡಿದ ಹುಲುಸಾಗಿ ಬೆಳೆದ ಉದ್ದು, ಸೋಯಾ, ಹೆಸರು ಬೆಳೆ ಹಾನಿಯಾಗಿದೆ. ಜೊತೆಗೆ ಜಿಲ್ಲೆಯ ವಿವಿಧ ಗ್ರಾಮದಲ್ಲಿ ಸುಮಾರು 360 ಮನೆಗಳು ಬಾಗಶಃ ಕುಸಿದಿದ್ದು, ಮನೆ ಕಳೆದುಕೊಂಡವರನ್ನ ಕಂಗಾಲು ಮಾಡಿದೆ. ಆವತ್ತಿನ ದುಡಿಮೆಯಲ್ಲಿಯೇ ಹೊಟ್ಟೆ ತುಂಬಿಸಿಕೊಳ್ಳುತ್ತಿದ್ದವರು ಏಕಾಏಕಿ ಮನೆ ಕುಸಿದಿರುವ ಪರಿಣಾಮವಾಗಿ ಬಿದ್ದಿರುವ ಮನೆಗಳನ್ನು ಕಟ್ಟಿಕೊಳ್ಳಲೇ ಬೇಕಾದ ಅನಿವಾರ್ಯತೆ ಅವರಿಗೆ ಬಂದೊದಗಿದೆ. ಆ ಸಾಲವೇ ಇನ್ನೂ ತೀರಿಲ್ಲ. ಇದರ ನಡುವೆ ಮತ್ತೆ ಬಿದ್ದಿರುವ ಮನೆಯನ್ನ ಕಟ್ಟಿಕೊಳ್ಳಬೇಕಾದರೆ ಸಾಲ ಮಾಡುವ ಪರಿಸ್ಥಿತಿ ಎದುರಾಗಿದೆ.

ಇನ್ನು ಮನೆ ಕಳೆದುಕೊಂಡ ಕೆಲವರಿಗೆ ಪರಿಹಾರ ಕೊಟ್ಟರೆ, ಇನ್ನೂ ಕೆಲವರಿಗೆ ಪರಿಹಾರ ಕೊಡಬೇಕಾಗಿದೆ. ಆದರೆ, ಸರಕಾರ ನಮಗೆ ಹಣ ಕೊಡುವ ಬದಲು ಬಿದ್ದಿರುವ ಮನೆಯನ್ನ ಕಟ್ಟಿಸಿಕೊಡಿ ಎಂದು ಇಲ್ಲಿನ ಮಹಿಳೆಯವರು ಸರಕಾರ, ಜಿಲ್ಲಾಡಳಿತ ಹಾಗೂ ಸ್ಥಳೀಯ ಶಾಸಕರಿಗೆ ಮನವಿ ಮಾಡಿದರೂ ಕ್ಯಾರೆ ಅನ್ನುವವರಿಲ್ಲ.

ಈ ಬಾರಿ ಬೀದರ್ ಜಿಲ್ಲೆಯ ರೈತರ ಸ್ಥಿತಿ ಶೋಚನೀಯವಾಗಿದೆ. ಸೋಯಾ, ಅವರೆ, ಬೆಳೆಗಾರರ ಪರಿಸ್ಥಿತಿ ಸಂಪೂರ್ಣವಾಗಿ ಹದೆಗೆಟ್ಟಿದ್ದು, ಮತ್ತೆ ಸಾಲದ ಸುಳಿಯಲ್ಲಿ ಸಿಲುಕುವಂತಹ ಸ್ಥಿತಿ ನಿರ್ಮಾಣವಾಗಿದೆ. ಕಳೆದ ಹಲವಾರು ವರ್ಷಗಳಿಂದ ಸೋಯಾ, ಉದ್ದು ಬೆಳೆಯನ್ನೇ ನಂಬಿಕೊಂಡಿದ್ದ ರೈತರಿಗೆ ಬರಸಿಡಿಲಿನಂತೆ ಬಂದ ಮಳೆ, ರೈತರ ಬದುಕನ್ನ ಬರ್ಬಾದ್ ಮಾಡಿದೆ ಎಂದು ಜಿಲ್ಲೆಯ ಜನರು ಗೋಳಿಡುತ್ತಿದ್ದಾರೆ.

# ಯಡಿಯೂರಪ್ಪ ಪರಮಾಪ್ತ ಮಾಜಿ ಶಾಸಕ ವೆಂಕಟರೆಡ್ಡಿಗೌಡ ಮುದ್ನಾಳ್ ನಿಧನ



**ಯಾದಗಿರಿ, ಸೆ.18–** ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ರಾಷ್ಟ್ರೀಯ ಮಾಜಿ ಉಪಾಧ್ಯಕ್ಷರೂ ಹಾಗೂ ಮಾಜಿ ಯಾದಗಿರಿ ನಗರದ ಬಿಜೆಪಿ ಶಾಸಕ ವೆಂಕಟರಡ್ಡಿಗೌಡ ಮುದ್ನಾಳ(71) ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಕೆಜೆಪಿಯಿಂದ ಯಡಿಯೂರಪ್ಪ ಅವರ ಪರಮಾತ್ಮರಾಗಿದ್ದ ಮೃತ ವೆಂಕಟರೆಡ್ಡಿ ಮುದ್ನಾಳರು ಪತ್ನಿ, ಸಹೋದರ, ಸಹೋದರಿ, ಓರ್ವ ಪುತ್ರ–ಪುತ್ರಿ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ನಗರಕ್ಕೆ ಹೊಂದಿಕೊಂಡಿರುವ ಅವರ ತೋಟದಲ್ಲಿ ಜರುಗಿತು.

ಮಾಜಿ ಸಚಿವ ಲಿಂ.ವಿಶ್ವನಾಥರಡ್ಡಿ ಮುದ್ನಾಳ ಅವರ ಪುತ್ರರಾಗಿರುವ ವೆಂಕಟರಡ್ಡಿಯ ಅವರು ನೇರ ಮತ್ತು ದಿಟ್ಟ ವ್ಯಕ್ತಿತ್ವದವರಾಗಿದ್ದರು. ಜನತಾ ಪರಿವಾರದ ಮೂಲಕ ರಾಜಕೀಯ ಪ್ರವೇಶಿಸಿ ಮೊದಲ ಬಾರಿಗೆ ಯಾದಗಿರಿ ಪುರಸಭೆ ಅಧ್ಯಕ್ಷರಾಗಿ ರಾಜಕೀಯ ಜೀವನ ಆರಂಭಿಸಿದ್ದರು.

ಗುರುಮಠಕಲ್ ಕ್ಷೇತ್ರದಿಂದ 2008ರಲ್ಲಿ ಪಕ್ಷೇತರರಾಗಿ ಹಾಗೂ 2013ರಲ್ಲಿ ಯಡಿಯೂರಪ್ಪ ಅವರ ಅನುಯಾಯಿಯಾಗಿ ಕೆಜೆಪಿ ಪಕ್ಷದಿಂದ ಸ್ಪರ್ಧಿಸಿ ಅಲ್ಪಮತಗಳ ಅಂತರದಿಂದ ಸೋಲು ಅನುಭವಿಸಿದ್ದರು. ಯಡಿಯೂರಪ್ಪ ಅವರು 2018ರಲ್ಲಿ ವೆಂಕಟರೆಡ್ಡಿ ಅವರನ್ನು ಯಾದಗಿರಿ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ನೀಡಿ ಸ್ಪರ್ಧೆಗಿಳಿಸಿದರು. ಕಾಂಗ್ರೆಸ್‌ನ ಭದ್ರಕೋಟೆಯಾಗಿದ್ದ ಯಾದಗಿರಿಯನ್ನು ಪ್ರಥಮ ಬಾರಿಗೆ ಬೇಧಿಸುವ ಮೂಲಕ 12 ಸಾವಿರಕ್ಕೂ ಅಧಿಕ ಮಗಳಿಂದ ಮಾಜಿ ಸಚಿವ ಡಾ.ಎ.ಬಿ. ಮಾಲಕರೆಡ್ಡಿ ಅವರನ್ನು ಸೋಲಿಸಿ, ವೆಂಕಟರೆಡ್ಡಿ ಮುದ್ನಾಳ್ ಅವರು ಮೊದಲ ಬಾರಿಗೆ ಯಾದಗಿರಿಯಲ್ಲಿ ಬಿಜೆಪಿ ಪತಾಕೆ ಹರಿಸಿ ವಿಧಾನಸಭೆ ಪ್ರವೇಸಿಸಿದರು.

### ಅಂತಿಮ ದರ್ಶನ ಪಡೆದ ವಿಜಯೇಂದ್ರ


ಮಾಜಿ ಶಾಸಕ ವೆಂಕಟರೆಡ್ಡಿ ಮುದ್ನಾಳ ಅವರ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಪಡೆದರು. ಬೆಂಗಳೂರಿನಿಂದ ಕಲಬುರಗಿ ಮೂಲಕ ಬೆಳಗ್ಗೆ 10.30ಕ್ಕೆ ಆಗಮಿಸಿದ ವಿಜಯೇಂದ್ರ ನೇರವಾಗಿ ಮುದ್ನಾಳ ಅವರ ಯಾದಗಿರಿ ಮನೆಗೆ ಆಗಮಿಸಿ ಪಾರ್ಥಿವ ಶರಿರಕ್ಕೆ ಮಾಲಾರ್ಪಣೆ ಮಾಡಿ ಅಂತಿಮ ನಮನ ಸಲ್ಲಿಸಿದರು. ಅವರ ಪುತ್ರ ಮಹೇಶ ರಡ್ಡಿ ಮತ್ತು ಕುಟುಂಬದವರಿಗೆ ಸಾಂತ್ವನ ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿ, ಮಾಜಿ ಶಾಸಕ ವೆಂಕಟರಡ್ಡಿ ಮುದ್ನಾಳ್ ಅವರ ನಿಧನದಿಂದ ಅವರ ಕುಟುಂಬಕ್ಕೂ, ಕಾರ್ಯಕರ್ತರಿಗೂ ಮತ್ತು ಪಕ್ಷಕ್ಕೂ ತುಂಬಾ ನಷ್ಟವಾಗಿದೆ. ಮಾಜಿ ಸಿಎಂ ಯಡಿಯೂರಪ್ಪ ಅವರಿಗೆ ಆಪ್ತರಾಗಿದ್ದ ಅವರು ಪಕ್ಷದ ಸಂಘಟನೆ ಮತ್ತು ಅಭಿವೃದ್ಧಿ ವಿಷಯದಲ್ಲಿ ಸಾಕಷ್ಟು ಕೆಲಸ ಮಾಡಿದ್ದರು ಎಂದರು.

ಮಾಜಿ ಸಚಿವ ರಾಜೂ ಗೌಡ, ಶಾಸಕರಾದ ಬಸವರಾಜ ಮತ್ತಿಮೂಡು, ಡಾ.ಅವಿನಾಶ ಜಾಧವ ಹಾಗೂ ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ್, ಅಮರನಾಥ ಪಾಟೀಲ್, ಮುಖಂಡರಾದ ನಿತೀನ್ ಗುತ್ತೇದಾರ,ಜಿಲ್ಲಾಧ್ಯಕ್ಷ ಅಮೀನ್ ರಡ್ಡಿ ಯಾಳಗಿ, ಸ್ಥಳಿಯ ಬಿಜೆಪಿ ಮುಖಂಡರಾದ ದೇವೇಂದ್ರನಾಥ ನಾದ್, ಪರಶುರಾಮ ಕುರಕುಂದಿ, ವೆಂಕಟರಡ್ಡಿ ಅಬ್ಬೆತುಮಕೂರು, ಗುರು ಕಾಮಾ, ರಾಚಣ್ಣಗೌಡ ಮುದ್ನಾಳ್ ಇತರರು ಇದ್ದರು.ವೆಂಕಟರಡ್ಡಿ ಮುದ್ನಾಳ ಮಂಗಳವಾರ ನಿಧನ ಹೊಂದಿದ್ದರು. ನೂರಾರು ಮಂದಿ ಅಂತಿಮ ದರ್ಶನ ಪಡೆದರು.

ವೇಗವಾಗಿ ಹರಡುವ ಕೋವಿಡ್ ಹೊಸತಳಿ ಪತ್ತೆ

# ಯುಕೆ, ಯುಎಸ್, ಉಕ್ರೇನ್ ಸೇರಿ 27 ದೇಶಗಳಿಗೆ XEC ಆತಂಕ




**ವಾಷಿಂಗ್ಟನ್‌ಸೆ. 18 :** 2020ರಲ್ಲಿ ಕಾಣಿಸಿಕೊಂಡು ವಿಶ್ವದಾದ್ಯಂತ ಲಕ್ಷಾಂತರ ಜನರನ್ನು ಬಲಿ ಪಡೆದುಕೊಂಡಿದ್ದ ಕೊರೊನಾ ವೈರಸ್ ಇದೀಗ ಮತ್ತೊಂದು ಹೊಸ ರೂಪ ಪಡೆದುಕೊಂಡಿದೆ. ಎಕ್ಸ್‌ಇಸಿ ಎಂಬ ಹೆಸರಿನ ಕೋವಿಡ್ ರೂಪಾಂತರ ಯುರೋಪ್ ದೇಶಗಳಲ್ಲಿ ಪತ್ತೆಯಾಗಿದ್ದು, ಸುಮಾರು 27 ದೇಶಗಳಿಗೆ ಭಾರಿ ಆತಂಕ ಹುಟ್ಟಿಸಿದೆ. ಇದು ಅತ್ಯಂತ ವೇಗವಾಗಿ ಹರಡುವ ಸಾಧ್ಯತೆಗಳಿವೆ ಎಂದು ವಿಜ್ಞಾನಿಗಳು ಎಚ್ಚರಿಸಿರುವುದಾಗಿ ವರದಿಯಾಗಿದೆ. ಮೂಲಗಳ ಪ್ರಕಾರ, ಒಮಿಕ್ರಾನ್ ಉಪತಳಿಯಾಗಿರುವ ಎಕ್ಸ್‌ಇಸಿ ರೂಪಾಂತರವನ್ನು ಕಳೆದ ಜೂನ್‌ನಲ್ಲಿ ಜರ್ಮನಿಯಲ್ಲಿ ಗುರುತಿಸಲಾಯಿತು. ಬಳಿಕ ಯುಕೆ, ಯುಎಸ್, ಡೆನ್ಮಾರ್ಕ್, ಪೋಲೆಂಡ್, ನಾರ್ವೆ, ಲಕ್ಸೆಂಬರ್ಗ್, ಉಕ್ರೇನ್, ಪೋರ್ಚುಗಲ್ ಸೇರಿದಂತೆ ಸುಮಾರು 27 ದೇಶಗಳಲ್ಲಿ 500 ಮಾದರಿಗಳು ಕಾಣಿಸಿಕೊಂಡಿವೆ. ಇದು ಅತ್ಯಂತ ವೇಗವಾಗಿ ಹರಡುವ ಸಾಧ್ಯತೆಗಳಿವೆ. ಅದರಲ್ಲಿ ಜರ್ಮನಿ, ಡೆನ್ಮಾರ್ಕ್‌ನಂತಹ ದೇಶಗಳಲ್ಲಿ ಮಾರಣಾಂತಿಕ ಪ್ರಮಾಣದಲ್ಲಿ ವೈರಸ್ ಹರಡುತ್ತಿವೆ. ಎಚ್ಚೆತ್ತು ಆದಷ್ಟು ಬೇಗ ಲಸಿಕೆ ಪಡೆದುಕೊಂಡರೇ ಕನಿಷ್ಠ ಮರಣದಿಂದ ತಪ್ಪಿಸಿಕೊಳ್ಳಬಹುದು ಎಂದು ಲಂಡನ್‌ನಲ್ಲಿರುವ ಜೆನೆಟಿಕ್ಸ್ ಇನ್ಸಿಟ್ಯೂಟ್ನ ನಿರ್ದೇಶಕ ಪ್ರೊಫೆಸರ್ ಫ್ರಾಂಕೋಯಿಸ್ ಬಲೂಕ್ಸ್ ತಿಳಿಸಿದ್ದಾರೆ. ಜ್ವರ, ಗಂಟಲು ನೋವು, ಕೆಮ್ಮು, ವಾಸನೆ ಗ್ರಹಿಕೆ ಕಳೆದುಕೊಳ್ಳುವುದು, ಹಸಿವಾಗದೇ ಇರುವುದು, ಮೈ-ಕೈ ನೋವು ಸೇರಿದಂತೆ ಹಿಂದಿನ ಕೋವಿಡ್ ಲಕ್ಷಣಗಳು ಫಿಇಲ ರೂಪಾಂತರದ ಲಕ್ಷಣಗಳಾಗಿವೆ. ಲಕ್ಷಣಗಳು ಕಂಡುಬಂದ ಕೂಡಲೇ ತಪಾಸಣೆಗೆ ಒಳಗಾಗಿ ಲಸಿಕೆ ಪಡೆದುಕೊಳ್ಳುವುದು, ಶುದ್ಧ ಗಾಳಿ, ನೀರು ಸೇವನೆಯೊಂದಿಗೆ ಸುತ್ತಮುತ್ತಲಿನ ವಾತಾವರಣ ಸ್ವಚ್ಛವಾಗಿಟ್ಟುಕೊಳ್ಳುವುದು, ರೋಗ ಲಕ್ಷಣಗಳ ಬಗ್ಗೆ ತಿಳಿಯಲು ಮುಜಾಗ್ರತಾ ಕ್ರಮವಾಗಿ ತಪಾಸಣೆಗೆ ಒಳಗಾಗುವುದು ಮುಂಜಾಗೃತ ಕ್ರಮಗಳಾಗಿದೆ.



ಅಲೆಕ್ಸಾಂಡರ್ ಮತ್ತು ರಾಣಿ ಮ್ಯಾಕ್ಸಿಮಾ ನೆದರ್ಲೆಂಡ್ಸ್‌ನ ಹೇಗ್‌ನಲ್ಲಿರುವ ಪ್ರಿನ್ಸ್‌ಜೆಸ್‌ಡಾಗ್‌ನಲ್ಲಿ ನೂರ್‌ಡಿಂಡೆ ಅರಮನೆಯ ಬಾಲ್ಕನಿಯಲ್ಲಿ, ರಾಜಕುಮಾರ ದಿನದಂದು ಜನರತ್ತ ಕೈಬೀಸಿದರು. ಸೆಪ್ಟೆಂಬರ್‌ನಲ್ಲಿ ಮೂರನೇ ಮಂಗಳವಾರ ನೆದರ್ಲೆಂಡ್ಸ್‌ನಲ್ಲಿ ರಾಜಕುಮಾರರ ದಿನವಾಗಿದೆ. ಇದು ಡಚ್ ಪಾರ್ಲಿಮೆಂಟರಿ ಋತುವಿನ ಪ್ರಾರಂಭವನ್ನು ಸೂಚಿಸುತ್ತದೆ, ಮತ್ತು ಈ ದಿನದಂದು ಆಳುವ ರಾಜ ಮುಂಬರುವ ವರ್ಷದ ಸರ್ಕಾರದ ಯೋಜನೆಗಳನ್ನು ವಿವರಿಸುವುದು ಸಂಪ್ರದಾಯ.


## ಮೋದಿ ಅದ್ಭುತ ವ್ಯಕ್ತಿ: ಡೊನಾಲ್ಡ್ ಟ್ರಂಪ್ ಬಣ್ಣನೆ



**ವಾಷಿಂಗ್ಟನ್/ನ್ಯೂಯಾರ್ಕ್: ಸೆ. 18 :** ಮುಂದಿನ ವಾರ ಪ್ರಧಾನಿ ಮೋದಿ ಅವರ ಅಮೆರಿಕ ಪ್ರವಾಸದ ವೇಳೆ ಅವರನ್ನು ಭೇಟಿಯಾಗುವುದಾಗಿ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ ಪ್ರಧಾನಿ ಮೋದಿ ಸೆ. 21-23ರವರೆಗೆ ಮೂರು ದಿನ ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ. ಡೆಲವರ್ ರಾಜ್ಯದ ವಿಲ್ಮಿಂಗ್ಟನ್‌ನಲ್ಲಿ ಅಧ್ಯಕ್ಷ ಜೋ ಬೈಡೆನ್ ಆಯೋಜಿಸಿರುವ 'ಕ್ವಾಡ್ ಶೃಂಗಸಭೆಯಲ್ಲಿ ಮೋದಿ ಪಾಲ್ಗೊಳ್ಳಲಿದ್ದಾರೆ.

ಶೃಂಗಸಭೆಯಲ್ಲಿ ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಮತ್ತು ಜಪಾನ್ನ ಪ್ರಧಾನಿ ಕಿಶಿದಾ ಫ್ಯೂಮಿಯೊ ಭಾಗವಹಿಸಲಿದ್ದಾರೆ. ನಂತರ ನ್ಯೂಯಾರ್ಕ್ಗೆ ತೆರಳಲಿರುವ ಮೋದಿ, ಸೆ.22 ರಂದು ಲ್ಯಾಂಗ್ ಐಲ್ಯಾಂಡ್‌ನಲ್ಲಿ ಕಾರ್ಯಕ್ರಮವೊಂದರಲ್ಲಿ ಮಾತನಾಡಲಿದ್ದಾರೆ. ಬಳಿಕ ಸೆ.23 ರಂದು ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ನಡೆಯಲಿರುವ ಶೃಂಗಸಭೆಯಲ್ಲಿ ಅವರು ವಿಶ್ವ ನಾಯಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. 'ಮೋದಿ ಅದ್ಭುತ ವ್ಯಕ್ತಿ. ಮುಂದಿನ ವಾರ ಅವರು ಅಮೆರಿಕಕ್ಕೆ ಬಂದಾಗ ಅವರನ್ನು ಭೇಟಿಯಾಗುತ್ತೇನೆ' ಎಂದು ಮಾಧ್ಯಮದೊಂದಿಗೆ ಮಾತನಾಡುವಾಗ ಟ್ರಂಪ್ ಹೇಳಿದ್ದಾರೆ.

## ಸಾಮೂಹಿಕ ಹತ್ಯೆ; ಲೆಬನಾನ್‌ನಲ್ಲಿ ಪೇಜರ್ ಸ್ಫೋಟದ ಬಳಿಕ ಇಸ್ರೇಲ್ ವಿರುದ್ಧ ಇರಾನ್ ಆಕ್ರೋಶ



**ಇರಾನ್, ಸೆ. 18 :** ಮಂಗಳವಾರ ಹಿಜ್ಬುಲ್ಲಾ ಉಗ್ರಗಾಮಿ ಗುಂಪು ಬಳಸಿದ ಸಾವಿರಾರು ಪೇಜರ್‌ಗಳು ಸ್ಫೋಟಗೊಂಡ ನಂತರ ಲೆಬನಾನ್‌ನಲ್ಲಿ 9 ಜನರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 3,000 ಜನರು ಗಾಯಗೊಂಡಿದ್ದಾರೆ. ಹಿಜ್ಬುಲ್ಲಾ ಇಸ್ರೇಲ್‌ಗೆ "ನ್ಯಾಯಯುತ ಶಿಕ್ಷೆ"ಯ ಭರವಸೆ ನೀಡಿದೆ. ಇದು ಇತ್ತೀಚಿನ ವರ್ಷಗಳಲ್ಲಿ ದೇಶವು ಕಂಡ "ದೊಡ್ಡ ಭದ್ರತಾ ಉಲ್ಲಂಘನೆ" ಎಂದು ಹೇಳಿದೆ.

**ಟೆಹ್ರಾನ್:** ಲೆಬನಾನ್‌ನಲ್ಲಿ ನಡೆದ ಭೀಕರ ಪೇಜರ್ ಸ್ಫೋಟಗಳಲ್ಲಿ ಲೆಬನಾನ್ ಸಶಸ್ತ್ರ ಉಗ್ರಗಾಮಿ ಸಂಘಟನೆ ಹಿಜ್ಬುಲ್ಲಾ ಸೇರಿದಂತೆ 9 ಮಂದಿ ಸಾವನ್ನಪ್ಪಿ ಸುಮಾರು 3,000 ಮಂದಿ ಗಾಯಗೊಂಡಿದ್ದಾರೆ. ಇರಾನ್ ಈ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದು, ಇಸ್ರೇಲ್ ಲೆಬನಾನ್‌ನಲ್ಲಿ ಸಾಮೂಹಿಕ ಹತ್ಯೆ ಮಾಡಿದೆ ಎಂದು ಆರೋಪಿಸಿದೆ.

ಇರಾನ್‌ನ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ನಾಸರ್ ಕನಾನಿ ಈ ಘಟನೆಯನ್ನು ಲೆಬನಾನ್‌ನಲ್ಲಿ ನಡೆದ ಭಯೋತ್ಪಾದಕ ಕಾರ್ಯಾಚರಣೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ಭಯೋತ್ಪಾದಕ ಕೃತ್ಯವು ವಾಸ್ತವವಾಗಿ ಸಾಮೂಹಿಕ ಹತ್ಯೆಯ ಒಂದು ರೂಪವಾಗಿದೆ. ಝಿಯೋನಿಸ್ಟ್ ಆಡಳಿತವು ಪ್ಯಾಲೇಸ್ತೀನಿಯರ ವಿರುದ್ಧ ಯುದ್ಧ ಅಪರಾಧಗಳು ಮತ್ತು ನರಮೇಧವನ್ನು ಮಾಡುವುದರ ಜೊತೆಗೆ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಶಾಂತಿ ಮತ್ತು ಭದ್ರತೆಯ ಅಪಾಯವನ್ನು ಗಂಭೀರ ಸ್ಥಿತಿಯಲ್ಲಿ ಇರಿಸಿದೆ ಎಂದು ಮತ್ತೊಮ್ಮೆ ಸ್ಪಷ್ಟವಾಗಿ ಸಾಬೀತುಪಡಿಸುತ್ತದೆ ಎಂದು ಹೇಳಿದೆ.

ಮಂಗಳವಾರ ಲೆಬನಾನ್‌ನಾದ್ಯಂತ ಸಾವಿರಾರು ಪೇಜರ್‌ಗಳು ಸ್ಫೋಟಗೊಂಡವು. ಇದರಿಂದ 9 ಜನ ಸಾವನ್ನಪ್ಪಿದರು. ಹೋರಾಟಗಾರರು ಮತ್ತು ವೈದ್ಯರು ಸೇರಿದಂತೆ ಇರಾನ್ ಬೆಂಬಲಿತ ಸಶಸ್ತ್ರ ಗುಂಪಿನ ಹಿಜ್ಬುಲ್ಲಾದ ಸುಮಾರು 3,000 ಸದಸ್ಯರು ಮತ್ತು ಬೈರುತ್‌ಗೆ ಟೆಹ್ರಾನ್‌ನ ರಾಯಭಾರಿ ಗಾಯಗೊಂಡಿದ್ದರು. ಹಿರಿಯ ಲೆಬನಾನ್‌ನ ಭದ್ರತಾ ಮೂಲ ಮತ್ತು ಇನ್ನೊಂದು ಮೂಲವು ರಾಯಿಟರ್ಸ್‌ಗೆ ಇಸ್ರೇಲ್‌ನ ಮೊಸಾದ್ ಬೇಹುಗಾರಿಕಾ ಸಂಸ್ಥೆಯು ತಿಂಗಳ ಹಿಂದೆ ಹಿಜ್ಬುಲ್ಲಾ ಆದೇಶಿಸಿದ 5,000 ತೈವಾನ್ ನಿರ್ಮಿತ ಪೇಜರ್‌ಗಳಲ್ಲಿ ಸಣ್ಣ ಮೊತ್ತವನ್ನು ನೆಟ್ಟಿದೆ ಎಂದು ತಿಳಿಸಿದೆ.

## ನೈಜೀರಿಯಾದಲ್ಲಿ ಬಸ್-ಟ್ರಕ್ ಡಿಕ್ಕಿ: 40 ಮಂದಿ ದುರ್ಮರಣ

**ಅಬುಜಾ, ಸೆ. 18 :** ನೈಜೀರಿಯಾದ ವಾಯುವ್ಯ ರಾಜ್ಯ ಕಡುನಾದಲ್ಲಿ ಬಸ್-ಟ್ರಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಕನಿಷ್ಠ 40 ಜನರು ಸಾವನ್ನಪ್ಪಿದ್ದಾರೆ ಎಂದು ನೈಜೀರಿಯಾದ ಅಧ್ಯಕ್ಷ ಬೋಲಾ ಟಿನುಬು ಅವರ ವಕ್ತಾರರು ತಿಳಿಸಿದ್ದಾರೆ.

ಕಡುನಾದ ಸಮಿನಾಕಾ ಪಟ್ಟಣದಲ್ಲಿ ಭಾನುವಾರ ನಡೆದ ಧಾರ್ಮಿಕ ಆಚರಣೆಯ ಸಂದರ್ಭದಲ್ಲಿ ಸಂಭವಿಸಿದ ಘಟನೆಯಿಂದ ಡಜನ್ಗಟ್ಟಲೆ ಬದುಕುಳಿದವರು ಗಂಭೀರ ಗಾಯಗಳಿಗೆ ಒಳಗಾಗಿದ್ದಾರೆ ಎಂದು ಅಧ್ಯಕ್ಷರ ವಕ್ತಾರ ಬಾಯೊ ಒನುಗಾ ಟಿನುಬು ಪರವಾಗಿ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಮೃತರು ಉತ್ತರ-ಮಧ್ಯ ರಾಜ್ಯ ಪ್ರಸ್ಥಭೂಮಿಯ ಕ್ವಾಂಡರಿ ಎಂಬ ಪಟ್ಟಣದಿಂದ ತೆರಳುತ್ತಿದ್ದಾಗ ಅವರ ಬಸ್ ಟ್ರಕ್ಗೆ ಡಿಕ್ಕಿ ಹೊಡೆದಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. "ಅಧ್ಯಕ್ಷ ಟಿನುಬು ಮೃತರ ಮತ್ತು ಗಾಯಗೊಂಡವರ ಕುಟುಂಬಗಳಿಗೆ ಮತ್ತು ಕಡುನಾ ಮತ್ತು ಪ್ರಸ್ಥಭೂಮಿ ರಾಜ್ಯಗಳ ಸರ್ಕಾರಗಳೊಂದಿಗೆ ಸಂತಾಪ ಸೂಚಿಸಿದ್ದಾರೆ" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ, ಹೆದ್ದಾರಿ ಮೇಲ್ವಿಚಾರಣೆಯನ್ನು ಸುಧಾರಿಸಲು ಮತ್ತು ದೇಶಾದ್ಯಂತ ರಸ್ತೆ ಅಪಘಾತಗಳ ಸಂಖ್ಯೆಯನ್ನು ಕಡಿಮೆ ಮಾಡಲು ನೈಜೀರಿಯನ್ ನಾಯಕ ಫೆಡರಲ್ ರಸ್ತೆ ಸುರಕ್ಷತಾ ಕಾರ್ಪ್ಸ್ (ಎಫ್‌ಆರ್‌ಎಸ್ಸಿ) ಗೆ ನಿರ್ದೇಶನ ನೀಡಿದ್ದಾರೆ.

ಅಪಘಾತದಲ್ಲಿ ಬಸ್ ನಲ್ಲಿ ಕನಿಷ್ಠ 63 ಜನರು ಇದ್ದರು ಎಂದು ನೈಜೀರಿಯಾದ ಸಂಚಾರ ಪೊಲೀಸ್ ಎಫ್‌ಆರ್‌ಎಸ್ಸಿ ಪ್ರತ್ಯೇಕ ಹೇಳಿಕೆಯಲ್ಲಿ ತಿಳಿಸಿದೆ. ನೈಜೀರಿಯಾದಲ್ಲಿ ಮಾರಣಾಂತಿಕ ರಸ್ತೆ ಅಪಘಾತಗಳು ಆಗಾಗ್ಗೆ ವರದಿಯಾಗುತ್ತವೆ, ಇದು ಹೆಚ್ಚಾಗಿ ಓವರ್‌ಲೋಡ್, ಕೆಟ್ಟ ರಸ್ತೆ ಪರಿಸ್ಥಿತಿಗಳು ಮತ್ತು ಅಜಾಗರೂಕ ಚಾಲನೆಯಿಂದ ಉಂಟಾಗುತ್ತದೆ.

## ಚೀನಾ ಓಪನ್ ಬ್ಯಾಡ್ಮಿಂಟನ್ ಟೂರ್ನಿ: ಗ್ರೆಗೋರಿಯಾಗೆ ಬನ್ಸೋಡ್ ಆಘಾತ

**ಚಾಂಗ್ಝೌ, ಸೆ. 18 :** ಭಾರತದ ಉದಯೋನ್ಮುಖ ತಾರೆ ಮಾಳವಿಕಾ ಬನ್ಸೋಡ್ ಅವರು ಚೀನಾ ಓಪನ್ ಬ್ಯಾಡ್ಮಿಂಟನ್ ಟೂರ್ನಿಯ ಮಹಿಳೆಯರ ಸಿಂಗಲ್ಸ್‌ನ ಆರಂಭಿಕ ಸುತ್ತಿನಲ್ಲಿ ಪ್ಯಾರಿಸ್ ಒಲಿಂಪಿಕ್ಸ್‌ನ ಕಂಚಿನ ಪದಕ ವಿಜೇತೆ ಗ್ರೆಗೋರಿಯಾ ಮರಿಸ್ಕಾ ತುಂಜಂಗ್ ಅವರಿಗೆ ಆಘಾತ ನೀಡಿದರು. ಬುಧವಾರ ನಡೆದ 32ರ ಘಟ್ಟದ ಪಂದ್ಯದಲ್ಲಿ 22 ವರ್ಷ ವಯಸ್ಸಿನ ಬನ್ಸೋಡ್ 26-24, 21-19ರಿಂದ ಇಂಡೋನೇಷ್ಯಾದ ಆಟಗಾರ್ತಿಯನ್ನು ಹಿಮ್ಮೆಟ್ಟಿಸಿ, ಎರಡನೇ ಸುತ್ತಿಗೆ ಮುನ್ನಡೆದರು. ವಿಶ್ವದ ಏಳನೇ ಕ್ರಮಾಂಕದ ಗ್ರೆಗೋರಿಯಾ ಅವರನ್ನು 43ನೇ ರ್‍ಯಾಂಕ್‌ನ ಭಾರತದ ಆಟಗಾರ್ತಿ 46 ನಿಮಿಷದಲ್ಲಿ ಸದೆಬಡಿದರು. ಇದು ಬನ್ಸೋಡ್ ಅವರಿಗೆ ವೃತ್ತಿಜೀವನದಲ್ಲಿ ಬಹು ದೊಡ್ಡ ಗೆಲುವಾಗಿದೆ.






ಪ್ರಿಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಬನ್ಸೋಡ್ ಎರಡು ಬಾರಿ ಕಾಮನ್ವೆಲ್ತ್ ಗೇಮ್ಸ್ ಪದಕ ವಿಜೇತೆ ಕ್ರಿಸ್ಟಿ ಗಿಲ್ಮೊರ್ (ಸ್ಕಾಟ್ಲೆಂಡ್) ಅವರನ್ನು ಎದುರಿಸಲಿದ್ದಾರೆ. ಅವರು ಟೂರ್ನಿಯಲ್ಲಿ ಉಳಿದಿರುವ ಭಾರತದ ಏಕೈಕ ಭರವಸೆಯಾಗಿದ್ದಾರೆ.

ಮಹಿಳಾ ಸಿಂಗಲ್ಸ್‌ನ ಆರಂಭಿಕ ಸುತ್ತಿನಲ್ಲೇ ಆಕರ್ಷಿ ಕಶ್ಯಪ್ ಮತ್ತು ಸಮಿಯಾ ಇಮಾದ್ ಫಾರೂಕಿ ನಿರಾಸೆ ಅನುಭವಿಸಿದರು. ಆಕರ್ಷಿ 15-21 19-21ರಿಂದ ಚೀನಾ ತೈಪೆಯ ಚಿಯು ಪಿನ್-ಚಿಯಾನ್ ವಿರುದ್ಧ; ಸಮಿಯಾ 9-21 7-21ರಿಂದ ಗಿಲ್ಮೊರ್ ವಿರುದ್ಧ ಪರಾಭವಗೊಂಡರು.

ಪುರುಷರ ಸಿಂಗಲ್ಸ್‌ನಲ್ಲಿ 40ನೇ ಕ್ರಮಾಂಕದ ಕಿರಣ್ ಜಾರ್ಜ್ 21-4, 10-21, 21-23ರಿಂದ ಜಪಾನ್ನ ಕೆಂಟಾ ನಿಶಿಮೊಟೊ ಅವರ ವಿರುದ್ಧ ಮುಗ್ಗರಿಸಿದರು.

ಮಹಿಳೆಯರ ಡಬಲ್ಸ್ನ ಮೊದಲ ಸುತ್ತಿನಲ್ಲಿ ಟ್ರಿಸಾ ಜೋಳಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿಯು 21-16, 15-21, 17-21ರಿಂದ ಚೀನಾ ತೈಪೆಯ ಹ್ಸಿಹ್ ಪೀ ಶಾನ್ ಮತ್ತು ಹಂಗ್ ಎನ್-ತ್ಸು ಅವರಿಗೆ ಶರಣಾಯಿತು. ಮಿಶ್ರ ಡಬಲ್ಸ್ನಲ್ಲಿ ಬಿ.ಸುಮೀತ್ ರೆಡ್ಡಿ ಮತ್ತು ಎನ್.ಸಿಕ್ಕಿ ರೆಡ್ಡಿ ಜೋಡಿಯೂ ಆರಂಭಿಕ ಸುತ್ತಿನಲ್ಲೇ ಹೊರಬಿತ್ತು.

## ವೇಟ್‌ಲಿಫ್ಟಿಂಗ್: ಭಾರತಕ್ಕೆ 11 ಚಿನ್ನ





**ಸುವಾ, ಸೆ. 18 :** ಭಾರತದ ವೇಟ್ಲಿಫ್ಟರ್‌ಗಳು ಇಲ್ಲಿ ನಡೆಯುತ್ತಿರುವ ಕಾಮನ್ವೆಲ್ತ್ ಯೂತ್, ಜೂನಿಯರ್ ಮತ್ತು ಸೀನಿಯರ್ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಈತನಕ 11 ಚಿನ್ನ ಮತ್ತು ಮೂರು ಬೆಳ್ಳಿ ಪದಕಗಳನ್ನು ಗೆದ್ದಿದ್ದಾರೆ.

ಬಾಬುಲಾಲ್ ಹೆಂಬ್ರೋಮ್ ಅವರು 49 ಕೆಜಿ ಯೂತ್ ಪುರುಷರ ವಿಭಾಗದ ಕ್ಲೀನ್ ಮತ್ತು ಜರ್ಕ್ ವಿಭಾಗದಲ್ಲಿ 114 ಕೆಜಿ ಎತ್ತುವ ಮೂಲಕ ಕಾಮನ್ವೆಲ್ತ್ ಮತ್ತು ರಾಷ್ಟ್ರೀಯ ದಾಖಲೆಯೊಂದಿಗೆ ಚಿನ್ನ ಗೆದ್ದರು. ಮಿನಾ ಸಾಂತಾ ಅವರು 55 ಕೆಜಿ ಯೂತ್ ಮಹಿಳೆಯರ ವಿಭಾಗದ ಸ್ನ್ಯಾಚ್ನಲ್ಲಿ 81 ಕೆಜಿ ಹಾಗೂ ಕ್ಲೀನ್ ಮತ್ತು ಜರ್ಕ್ ವಿಭಾಗದಲ್ಲಿ 99 ಕೆಜಿ ಹೀಗೆ ಒಟ್ಟು 180 ಕೆಜಿ ಭಾರ ಎತ್ತಿ ರಾಷ್ಟ್ರೀಯ ದಾಖಲೆ ನಿರ್ಮಿಸಿದರು. ಬೇಡಬರತ್ ಭಾರಾಲಿ ಅವರು 73 ಕೆಜಿ ಯೂತ್ ಪುರುಷರ ವಿಭಾಗದ ಸ್ನ್ಯಾಚ್, ಕ್ಲೀನ್ ಮತ್ತು ಜರ್ಕ್‌ನಲ್ಲಿ 200 ಕೆಜಿ ಪ್ರಯತ್ನದೊಂದಿಗೆ ರಾಷ್ಟ್ರೀಯ ದಾಖಲೆ ಬರೆದರು. ಜ್ಯೋತ್ಸ್ನಾ ಸಬರ್, ಆಕಾಂಕ್ಷಾ ವ್ಯವಹಾರೆ, ಅಶ್ಮಿತಾ ಧೋನೆ, ಭಾರ್ಗವಿ ಬಿ, ಎ. ಮಹಾರಾಜನ್, ವಿ. ಕಿಶೋರ್, ಟಿ. ಮಾಧವನ್, ಬೋಲೋಯಾಲಂ ಚಿನ್ನ ಗೆದ್ದ ಭಾರತದ ಇತರ ವೇಟ್‌ಲಿಫ್ಟರ್‌ಗಳು. ಚಾಂಪಿಯನ್‌ಶಿಪ್ ಸೆ. 21ರವರೆಗೆ ನಡೆಯಲಿದೆ.

## ಇಂದಿನಿಂದ ಭಾರತ-ಬಾಂಗ್ಲಾ ಕ್ರಿಕೆಟ್ ಟೆಸ್ಟ್ ಪಂದ್ಯ

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಟೆಸ್ಟ್ ಸರಣಿಯ ಮೊದಲ ಪಂದ್ಯ ಸೆಪ್ಟೆಂಬರ್ 19 ರಿಂದ ಆರಂಭವಾಗಲಿದೆ. ಇದುವರೆಗೆ ಎರಡೂ ತಂಡಗಳು 13 ಬಾರಿ ಮುಖಾಮುಖಿಯಾಗಿದ್ದು, ಇದರಲ್ಲಿ ಭಾರತ 11 ಪಂದ್ಯಗಳನ್ನು ಗೆದ್ದಿದ್ದರೆ, ಎರಡು ಪಂದ್ಯಗಳು ಡ್ರಾ ಆಗಿವೆ.

ಇದೀಗ ಉಭಯ ದೇಶಗಳ ನಡುವಿನ 14ನೇ ಟೆಸ್ಟ್ ಪಂದ್ಯ ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿದೆ.

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಟೆಸ್ಟ್ ಸರಣಿಯ ಮೊದಲ ಪಂದ್ಯ ಸೆಪ್ಟೆಂಬರ್ 19 ರಿಂದ ಆರಂಭವಾಗಲಿದೆ. ಇದುವರೆಗೆ ಎರಡೂ ತಂಡಗಳು 13 ಬಾರಿ ಮುಖಾಮುಖಿಯಾಗಿದ್ದು, ಇದರಲ್ಲಿ ಭಾರತ 11 ಪಂದ್ಯಗಳನ್ನು ಗೆದ್ದಿದ್ದರೆ, ಎರಡು ಪಂದ್ಯಗಳು ಡ್ರಾ ಆಗಿವೆ. ಇದೀಗ ಉಭಯ ದೇಶಗಳ ನಡುವಿನ 14ನೇ ಟೆಸ್ಟ್ ಪಂದ್ಯ ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿದೆ. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಫೈನಲ್‌ಗೆ ಅರ್ಹತೆ ಪಡೆಯಲು ಎರಡೂ ತಂಡಗಳಿಗೆ ಈ ಸರಣಿ ನಿರ್ಣಾಯಕವಾಗಿದೆ. ಇತ್ತೀಚೆಗಷ್ಟೇ ಬಾಂಗ್ಲಾದೇಶ ತಂಡ ಪಾಕಿಸ್ತಾನವನ್ನು ಅವರ ನೆಲದಲ್ಲೇ ವೈಟ್ ವಾಶ್ ಮಾಡಿದ್ದರಿಂದ ಆತ್ಮವಿಶ್ವಾಸದಿಂದ ಬೀಗುತ್ತಿದೆ. ಇತ್ತ ಟೆಸ್ಟ್ ಸರಣಿಯಲ್ಲಿ ಬಾಂಗ್ಲಾದೇಶ ವಿರುದ್ಧ ಅಜೇಯವಾಗಿರುವ ಭಾರತಕ್ಕೆ ಮತ್ತೊಂದು ಸರಣಿಯನ್ನು ಕೈವಶ ಮಾಡಿಕೊಳ್ಳುವ ಅವಕಾಶ ಸಿಕ್ಕಿದೆ.

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಮೊದಲ ಟೆಸ್ಟ್ ಪಂದ್ಯವನ್ನು ಸ್ಪೋರ್ಟ್ಸ್ 18-1ಎಸ್‌ಡಿ, ಸ್ಪೋರ್ಟ್ಸ್ 18-1 ಎಚ್‌ಡಿ, ಸ್ಪೋರ್ಟ್ಸ್ 18-2 ಹಿಂದಿ ಚಾನೆಲ್‌ಗಳಲ್ಲಿ ವೀಕ್ಷಿಸಬಹುದು.

ಉಭಯ ತಂಡಗಳುಮೊದಲ ಟೆಸ್ಟ್ ಪಂದ್ಯಕ್ಕೆ ಭಾರತ ತಂಡ: ರೋಹಿತ್ ಶರ್ಮಾ (ನಾಯಕ), ಯಶಸ್ವಿ ಜೈಸ್ವಾಲ್, ಶುಭ್?ಮನ್ ಗಿಲ್, ವಿರಾಟ್ ಕೊಹ್ಲಿ, ಕೆಎಲ್ ರಾಹುಲ್, ಸರ್ಫರಾಜ್ ಖಾನ್, ರಿಷಭ್ ಪಂತ್ (ವಿಕೆಟ್ ಕೀಪರ್), ಧ್ರುವ ಜುರೆಲ್ (ವಿಕೆಟ್ ಕೀಪರ್), ಆರ್ ಅಶ್ವಿನ್, ರವೀಂದ್ರ ಜಡೇಜಾ, ಅಕ್ಷರ್ ಪಟೇಲ್, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ಆಕಾಶ್ ದೀಪ್, ಜಸ್ಪ್ರೀತ್ ಬುಮ್ರಾ ಮತ್ತು ಯಶ್ ದಯಾಳ್.

**ಟೆಸ್ಟ್ ಸರಣಿಗೆ ಬಾಂಗ್ಲಾದೇಶ ತಂಡ:** ನಜ್ಮುಲ್ ಹುಸೇನ್ ಶಾಂಟೊ (ನಾಯಕ), ಜಾಕಿರ್ ಹಸನ್, ಮೊಮಿನುಲ್ ಹಕ್, ಮುಶ್ಫಿಕರ್ ರಹೀಮ್, ಶಾದ್ಮನ್ ಇಸ್ಲಾಂ, ಶಕೀಬ್ ಅಲ್ ಹಸನ್, ಮೆಹದಿ ಹಸನ್ ಮಿರಾಜ್, ಝಾಕರ್ ಅಲಿ ಅನಿಕ್, ತಸ್ಕಿನ್ ಅಹ್ಮದ್, ಲಿಟನ್ ದಾಸ್, ಹಸನ್ ಮಹಮೂದ್, ತೈಜುಲ್ ಇಸ್ಲಾಂ, ಮಹ್ಮುದುಲ್ ಹಸನ್ ಜಾಯ್, ನಹಿದ್ ರಾಣಾ, ಖಾಲಿದ್ ಅಹ್ಮದ್.

## ಜೂನಿಯರ್ ಫುಟ್‌ಬಾಲ್ ಟೂರ್ನಿಗೆ ಡಾ.ಆವ್ರೊ ಹೆಸರು





**ನವದೆಹಲಿ, ಸೆ. 18 :** ಒಲಿಂಪಿಕ್ಸ್‌ನಲ್ಲಿ ಭಾಗವಹಿಸಿದ್ದ ಭಾರತ ಫುಟ್‌ಬಾಲ್ ತಂಡದ ಮೊದಲ ನಾಯಕರಾಗಿದ್ದ ಡಾ.ತಾಲಿಮೆರೆನ್ ಆವ್ರೊ ಅವರ ಕೊಡುಗೆಯನ್ನು ಸ್ಮರಿಸಲು ಅಖಿಲ ಭಾರತ ಫುಟ್‌ಬಾಲ್ ಫೆಡರೇಷನ್, ಬಾಲಕಿಯರ ಜೂನಿಯರ್ ರಾಷ್ಟ್ರೀಯ ಚಾಂಪಿಯನ್‌ಷಿಪ್‌ಗೆ ಅವರ ಹೆಸರನ್ನು ಇಡಲು ನಿರ್ಧರಿಸಿದೆ.

2025-26ರ ಸಾಲಿನಿಂದ ಈ ಟೂರ್ನಿಯನ್ನು 'ಡಾ.ತಾಲಿಮೆರೆನ್ ಆವ್ರೊ ಜೂನಿಯರ್ ಬಾಲಕಿಯರ ರಾಷ್ಟ್ರೀಯ ಫುಟ್‌ಬಾಲ್ ಚಾಂಪಿಯನ್‌ಷಿಪ್' ಎಂದು ಕರೆಯಲಾಗುವುದೆಂದು ಎಐಎಫ್‌ಎಫ್ ಹೇಳಿದೆ. 18ನೇ ವರ್ಷ ಕಾಣುತ್ತಿರುವ ಈ ಚಾಂಪಿಯನ್‌ಷಿಪ್‌ನಲ್ಲಿ ಮಣಿಪುರ ಪ್ರಾಬಲ್ಯ ಸಾಧಿಸಿದ್ದು 11 ಬಾರಿ ಚಾಂಪಿಯನ್ ಆಗಿದ್ದು, ಎರಡು ಬಾರಿ ರನ್ನರ್ ಅಪ್ ಆಗಿದೆ.

ಇದಲ್ಲದೇ, ಡಾ.ಆವ್ರೊ ಅವರ ಆತ್ಮಕಥನವನ್ನು ಹೊರತರಲೂ ಎಐಎಫ್‌ಎಫ್ ಮುಂದಾಗಿದೆ. ನಾಗಾಲ್ಯಾಂಡ್‌ನ ಚಾಂಗ್‌ಕಿ ಹೆಸರಿನ ಗ್ರಾಮದಲ್ಲಿ 1918ರಲ್ಲಿ ಜನಿಸಿ, ಫುಟ್‌ಬಾಲ್ ತಾರೆಯಾಗಿ ಸಾಗಿದ ಹಾದಿಯನ್ನು ಇದರಲ್ಲಿ ವಿವರವಾಗಿ ನೀಡಲಾಗುವುದು. ಅದರಲ್ಲಿ, 1948ರ ಒಲಿಂಪಿಕ್ಸ್‌ನಲ್ಲಿ ಭಾರತ ತಂಡದ ನಾಯಕತ್ವ ವಹಿಸಿದ್ದೂ ಸೇರಿದಂತೆ ಅವರ ಗಮನಾರ್ಹ ಸಾಧನೆಗಳ ನೋಟವೂ ಇರಲಿದೆ.

ಅರ್ಸೆನಲ್ ಎಫ್‌ಸಿ ಸೇರಿದಂತೆ ಇಂಗ್ಲೆಂಡ್‌ನ ಪ್ರತಿಷ್ಠಿತ ಕ್ಲಬ್‌ಗಳಿಂದ ಲೀಗ್‌ನಲ್ಲಿ ಆಡಲು ಅವರಿಗೆ ಆಹ್ವಾನ ಬಂದಿದ್ದವು ಎಂದೂ ಹೇಳಲಾಗುತ್ತಿದೆ. ಆದರೆ ವೈದ್ಯರಾಗಬೇಕೆಂಬ ತಂದೆಯ ಬಯಕೆಯನ್ನು ಈಡೇರಿಸಲು ಅವರು ಆಹ್ವಾನ ನಿರಾಕರಿಸಿ, ವೈದ್ಯಕೀಯ ವ್ಯಾಸಂಗ ಮುಂದುವರಿಸಿದ್ದರು. ನಂತರ ನಾಗಾಲ್ಯಾಂಡ್‌ನ ವೈದ್ಯಕೀಯ ಸೇವೆಗಳ ನಿರ್ದೇಶಕರಾದರು. ಅವರು 1948ರ ಒಲಿಂಪಿಕ್ಸ್‌ನಲ್ಲಿ ದೇಶದ ಧ್ವಜಧಾರಿಯೂ ಆಗಿದ್ದರು. ಅವರು ಮೋಹನ್ ಬಾಗನ್ ಕ್ಲಬ್‌ಗೆ ಆಡಿದ್ದರು. ಡಾ.ತಾಲಿಮೆರೆನ್ ಆವ್ರೊ ಅವರದು ಸ್ಫೂರ್ತಿಯುತ ವ್ಯಕ್ತಿತ್ವ. ಈಗಿನ ಸನ್ನಿವೇಶದಲ್ಲಿ ಅವರ ಸಾಧನೆಯ ಪಯಣ ಗೊತ್ತಾಗಬೇಕಿದೆ. ಇಲ್ಲವಾದರಲ್ಲಿ ಬರುವ ತಲೆಮಾರುಗಳು ಅವರನ್ನು ಮರೆತೇಬಿಡುವ ಆತಂಕವಿದೆ' ಎಂದು ಫೆಡರೇಷನ್ ಅಧ್ಯಕ್ಷ ಕಲ್ಯಾಣ್ ಚೌಬೆ ಹೇಳಿದರು.

ಎಐಎಫ್‌ಎಫ್ ಈ ಹಿಂದೆ ಸೀನಿಯರ್ ಮಹಿಳಾ ರಾಷ್ಟ್ರೀಯ ಚಾಂಪಿಯನ್‌ಶಿಪ್‌ಗೆ ರಾಜಮಾತಾ ಜೀಜಾಬಾಯಿ ಅವರ ಹೆಸರನ್ನಿಟ್ಟಿತ್ತು. 20 ವರ್ಷದೊಳಗಿನವರ ರಾಷ್ಟ್ರೀಯ ಚಾಂಪಿಯನ್‌ಷಿಪ್ ವಿಜೇತರಿಗೆ ನೀಡುವ ಟ್ರೋಫಿಗೆ ಸ್ವಾಮಿ ವಿವೇಕಾನಂದ ಕಪ್ ಎಂದು ನಾಮಕರಣ ಮಾಡಿತ್ತು.

## ಒಗ್ಗಟ್ಟಿನಿಂದ ಯಶಸ್ಸು ಸಾಧ್ಯ: ಹರ್ಮನ್‌ಪ್ರೀತ್

**ನವದೆಹಲಿ, ಸೆ. 18 :** ತಂಡದ ಒಗ್ಗಟ್ಟಿನ ಮನೋಭಾವ ಮತ್ತು ಆಟಗಾರರ ನಡುವಿನ ಉತ್ತಮ ಒಡನಾಟದಿಂದಾಗಿ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಗೆಲ್ಲಲು ಸಾಧ್ಯವಾಯಿತು' ಎಂದು ಭಾರತ ಹಾಕಿ ತಂಡದ ನಾಯಕ ಹರ್ಮನ್‌ಪ್ರೀತ್ ಸಿಂಗ್ ಹೇಳಿದ್ದಾರೆ.





ಜುಗರಾಗ್ ಸಿಂಗ್ ಗಳಿಸಿದ ಗೋಲಿನ ನೆರವಿನಿಂದ ಮಂಗಳವಾರ ಭಾರತ ತಂಡವು 1-0ರಿಂದ ಆತಿಥೇಯ ಚೀನಾ ತಂಡವನ್ನು ಮಣಿಸಿ, ಐದನೇ ಬಾರಿ ಏಷ್ಯನ್ ಚಾಂಪಿಯನ್ ಟ್ರೋಫಿಯನ್ನು ಮುಡಿಗೇರಿಸಿಕೊಂಡಿತು. ಗೆಲುವಿನ ಬಳಿಕ ಪ್ರತಿಕ್ರಿಯಿಸಿದ ಹರ್ಮನ್‌ಪ್ರೀತ್, 'ತಂಡದ ಆಟಗಾರರು ಒಬ್ಬರಿಗೊಬ್ಬರು ಪ್ರಾಣಕೊಡಲು ತಯಾರಿದ್ದೇವೆ. ನಮ್ಮ ನಡುವೆ ಅಂತಹ ಬಾಂಧವ್ಯ ಬೆಳೆದಿದೆ. ಇದು ಇತ್ತೀಚೆಗೆ ಯಶಸ್ಸು ಸಾಧಿಸುತ್ತಿರುವುದಕ್ಕೆ ಪ್ರಮುಖ ಕಾರಣ' ಎಂದಿದ್ದಾರೆ.

ಫೈನಲ್ ಹಣಾಹಣಿ ನಿಜವಾಗಿಯೂ ತೀವ್ರ ಪೈಪೋಟಿಯಿಂದ ಕೂಡಿತ್ತು. ಆತಿಥೇಯ ದೇಶದ ಆಟಗಾರರು ಪಂದ್ಯದುದ್ದಕ್ಕೂ ನಮ್ಮನ್ನು ಕಟ್ಟಿಹಾಕುವ ಪ್ರಯತ್ನ ಮಾಡುತ್ತಿದ್ದರು. ಹೀಗಾಗಿ, ಗೋಲು ಅವಕಾಶ ಸೃಷ್ಟಿಸುವುದು ನಮಗೆ ಕಷ್ಟವಾಯಿತು' ಎಂದು ಹಾಕಿ ಇಂಡಿಯಾದ ಹರ್ಮನ್‌ಪ್ರೀತ್ ತಿಳಿಸಿದ್ದಾರೆ. ಕಳೆದ ಒಂದು ವರ್ಷದಿಂದ ತಂಡದಲ್ಲಿ ಒಬ್ಬರಿಗೊಬ್ಬರ ನಡುವೆ ಅಪಾರ ನಂಬಿಕೆ ಬೆಳೆದಿದೆ. ಇದು ಪಂದ್ಯದ ಫಲಿತಾಂಶದ ಮೇಲೆ ಸಕಾರಾತ್ಮಕ ಪರಿಣಾಮ ಬೀರಿದೆ' ಎಂದಿದ್ದಾರೆ.

'ಕಳೆದ ವರ್ಷ ಚೆನ್ನೈನಲ್ಲಿ ನಡೆದ ಏಷ್ಯನ್ ಚಾಂಪಿಯನ್ಸ್ ಟ್ರೋಫಿಯಲ್ಲಿ ಪ್ರಶಸ್ತಿ, ಹಾಂಗ್‌ಝೌ ಏಷ್ಯನ್ ಗೇಮ್ಸ್‌ನಲ್ಲಿ ಚಿನ್ನ ಮತ್ತು ಪ್ಯಾರಿಸ್ ಒಲಿಂಪಿಕ್ಸ್‌ನ ಕಂಚಿನ ಪದಕವು ತಂಡದೊಳಗೆ ಒಗ್ಗಟ್ಟಿನ ಮನೋಭಾವ ಹೆಚ್ಚಿಸಿದೆ' ಎಂದು ಹೇಳಿದ್ದಾರೆ.